ಸಂಪುಟ: 22, ಸಂಚಿಕೆ: 5, ಪುಟಗಳು: 8, ಸೋಮವಾರ, 14 ಅಕ್ಟೋಬರ್ 2024 RNI NO. KARKAN/2002/08054
epaper: www.sanjemugilu.com



ಸುದ್ದಿಗಳ ಹೊನಲು

# ಸಂಜೆ ಮುಗಿಲು

ಕನ್ನಡ ಪ್ರಾದೇಶಿಕ ಸಂಜೆ ದಿನಪತ್ರಿಕೆ

ವೇಣು ಸಾರಥ್ಯದಲ್ಲಿ...

ಬೆಂಗಳೂರು। ಬೆಂಗಳೂರು ಗ್ರಾಮಾಂತರ। ಕೋಲಾರ। ಚಿಕ್ಕಬಳ್ಳಾಪುರ। ರಾಮನಗರ। ಮಂಡ್ಯ। ಮೈಸೂರು। ಚಾಮರಾಜನಗರ

₹3



ದಶಪ್ರಮತಿ ಮುದ್ರಣಾಲಯ
dashapramathi mudranalaya
PRE-PRESS PRINTERS
Contact: +91 9483589085 | e-mail: dashapramathimudranalaya@gmail.com



We Undertake Printing of
Newspapers | Tabloids | Magazines

**ಸುಭಾಷಿತ**

ನಮಗೆ ಬದುಕಿನಲ್ಲಿ ಕನ್ನಡಿ ಮತ್ತು ನೆರಳಿನಂತಹ ಸ್ನೇಹಿತರು ಸಿಗಬೇಕು! ಕನ್ನಡಿ ಸುಳ್ಳು ಹೇಳುವುದಿಲ್ಲ ಮತ್ತು ನೆರಳು ಎಂತಹ ಸಂದರ್ಭದಲ್ಲೂ ಬಿಟ್ಟು ಹೋಗುವುದಿಲ್ಲ.

। ಲತಾಮಂಗೇಶ್ಕರ್

**ಪಂಚಾಂಗ**

(ಸೋಮವಾರ 14, ಅಕ್ಟೋಬರ್-2024)

- ಶ್ರೀ ಕ್ರೋಧಿ ನಾಮ ಸಂವತ್ಸರ,
- ದಕ್ಷಿಣಾಯನ, ಶರದ್ ಋತು
- ಆಶ್ವಯುಜ ಮಾಸ, ಶುಕ್ಲ ಪಕ್ಷ,
- ತಿಥಿ: ಏಕಾದಶಿ ಉಪರಿ ದ್ವಾದಶಿ,
- ನಕ್ಷತ್ರ: ಶತಭಿಷ
- ರಾಹುಕಾಲ: 7.42 ರಿಂದ 9.11
- ಗುಳಿಕಕಾಲ: 1.38 ರಿಂದ 3.07
- ಯಮಗಂಡಕಾಲ: 10.40 ರಿಂದ 12.09

## ಸಂಕ್ಷಿಪ್ತ ಸುದ್ದಿ

### ಹಳೇ ದ್ವೇಷಕ್ಕೆ ಹರಿದ ನೆತ್ತರು



**ಬೆಂಗಳೂರು:** ಹಳೆಯ ದ್ವೇಷಕ್ಕೆ ಮತ್ತೆ ನೆತ್ತರು ಹರಿದಿದೆ. ಜೊತೆಯಲ್ಲೇ ಕುಡಿದು ಸ್ನೇಹಿತನನ್ನೇ ಹತ್ಯೆಗೈದಿರುವ ಘಟನೆ ಬೆಂಗಳೂರಿನ ಸ್ಯಾಟಲೈಟ್ ಬಸ್ ನಿಲ್ದಾಣದ ಬಳಿಯ ಬಾರ್ ಒಳಗೆ ನಡೆದಿದೆ. 25 ವರ್ಷದ ಯೋಗೇಂದ್ರ ಸಿಂಗ್ ಕೊಲೆಯಾದ ವ್ಯಕ್ತಿ. ಈತ ಕಸ್ತೂರಿ ನಗರದ ನಿವಾಸಿ. 28 ವರ್ಷದ ಉಮೇಶ್ ಕೊಲೆ ಆರೋಪಿಯಾಗಿದ್ದಾನೆ. ಸ್ಯಾಟಲೈಟ್ ನಿಲ್ದಾಣದ ಬಳಿಯ ಕಲಾ ವೈನ್ಸ್ ಬಾರ್ ಒಳಗೆ ಕೊಲೆ ನಡೆದಿದೆ. ಘಟನೆಗೆ ಹಳೆಯ ದ್ವೇಷ ಕಾರಣ ಎಂಬ ಶಂಕೆ ವ್ಯಕ್ತವಾಗಿದೆ. ಜೊತೆಯಲ್ಲೇ ಕುಡಿಯುತ್ತಿದ್ದ ಸ್ನೇಹಿತನಿಂದಲೇ ಘಟನೆ ನಡೆದಿದೆ. ಸದ್ಯ ಕೊಲೆ ಆರೋಪಿಯನ್ನು ಬಂಧಿಸಿರುವ ಪೊಲೀಸರು ಪ್ರಕರಣದ ತನಿಖೆ ನಡೆಸುತ್ತಿದ್ದಾರೆ. ಈ ಕುರಿತು ಮಾಹಿತಿ ನೀಡಿರುವ ಪಶ್ಚಿಮ ವಿಭಾಗ ಡಿಸಿಪಿ ಗಿರೀಶ್, ರಾತ್ರಿ 10.45ರ ಸುಮಾರಿಗೆ ಘಟನೆ ನಡೆದಿದೆ. ಪುಟ 2

» **ಜೊತೆಯಲ್ಲೇ ಕುಡಿದು ಸ್ನೇಹಿತನ ಕೊಲೆ**

### ಸಿನಿಮೀಯ ಸ್ಟಂಟ್ ರೀತಿಯಲ್ಲಿ ಭೀಕರ ರಸ್ತೆ ಅಪಘಾತ



**ಬೀದರ್:** ಸಿನಿಮೀಯ ರೀತಿಯಲ್ಲಿ ಬೈಕ್ ಡಿಕ್ಕಿಯಾಗಿ ಪಾದಚಾರಿ ಹಾಗೂ ಬೈಕ್ ಸವಾರ ಸಾವನ್ನಪ್ಪಿರುವ ಘಟನೆ ಜಿಲ್ಲೆಯ ಬಸವಕಲ್ಯಾಣ ತಾಲೂಕಿನ ಹಳ್ಳಿ ಗ್ರಾಮದ 65ನೇ ರಾಷ್ಟ್ರೀಯ ಹೆದ್ದಾರಿಯಲ್ಲಿ ನಡೆದಿದೆ. ಮೃತ ದುರ್ದೈವಿಗಳನ್ನು ಪಾದಚಾರಿ 40 ವರ್ಷದ ಗುಲ್ಚಂದ್ ಗಾಯಕ್ವಾಡ್ ಹಾಗೂ ಬೈಕ್ ಸವಾರ 21 ವರ್ಷದ ಅಜಯ್ ಎಂದು ಗುರುತಿಸಲಾಗಿದ್ದು, ಭೀಕರ ಅಪಘಾತದಲ್ಲಿ ಸ್ಥಳದಲ್ಲಿಯೇ ಸಾವನ್ನಪ್ಪಿದ್ದಾರೆ. ಪುಟ 2

» **ಇಬ್ಬರು ಸ್ಥಳದಲ್ಲೇ ಸಾವು**

### ಕೊಲೆ ಆರೋಪಿ ದರ್ಶನ್, ಪವಿತ್ರಾಗೆ ಬಿಗ್ ಡೇ

# ಜಾಮೀನು ಭವಿಷ್ಯ ಇಂದು ನಿರ್ಧಾರ



**ಬೆಂಗಳೂರು:** ರೇಣುಕಾಸ್ವಾಮಿ ಕೊಲೆ ಕೇಸ್‌ನಲ್ಲಿ ಬಂಧನವಾಗಿ ನಾಲ್ಕು ತಿಂಗಳಿನಿಂದ ಜೈಲುವಾಸ ಅನುಭವಿಸುತ್ತಿರುವ ನಟ ದರ್ಶನ್ ಹೃದಯ ಲಬ್ ಡಬ್ ಲಬ್ ಡಬ್ ಬಡಿದುಕೊಳ್ಳಲು ಶುರುವಾಗಿದೆ. ಸೆರೆವಾಸದಿಂದ ಮುಕ್ತಿ ಸಿಗಬಹುದೆಂದು ನಿರೀಕ್ಷೆಯಲ್ಲಿರುವ ಆರೋಪಿ ದರ್ಶನ್‌ಗೆ ಮತ್ತೆ ಜೈಲಾ? ಬೆಲಾ? ಅನ್ನೋದು ನಿರ್ಧಾರ ವಾಗಲಿದೆ. ಇಂದು ಮಧ್ಯಾಹ್ನ ಸಿಸಿಹೆಚ್ 57 ಕೋರ್ಟ್ ಆರೋಪಿ ದರ್ಶನ್ ಜಾಮೀನು ಆದೇಶ ಪ್ರಕಟಿಸಲಿದೆ. ಪ್ರಕರಣದ ಎ2 ಆರೋಪಿಯಾಗಿರುವ ನಟ ದರ್ಶನ್ ಪರ ಹಿರಿಯ ವಕೀಲ ಪುಟ 2

### ವಾಲ್ಮೀಕಿ ನಿಗಮದ ಬಹುಕೋಟಿ ಹಗರಣ ಕೇಸ್

# ಇಂದು ನಾಗೇಂದ್ರಗೆ ಬೇಲ್ ಸಿಗುತ್ತಾ?

**ಬೆಂಗಳೂರು:** ಒಂದು ಕಡೆ ನಟ ದರ್ಶನ್ ಜಾಮೀನು ತೀರ್ಪು ಮತ್ತೊಂದು ಕಡೆ ರಾಜಕೀಯ ನಾಯಕರ ತೀರ್ಪು ಭಾರಿ ಕುತೂಹಲ ಮೂಡಿಸಿದೆ.

ವಾಲ್ಮೀಕಿ ಅಭಿವೃದ್ಧಿ ನಿಗಮದ ಹಗರಣ ಕೇಸ್‌ನಲ್ಲಿ ಬಂಧಿತರಾಗಿರುವ ಮಾಜಿ ಸಚಿವ ನಾಗೇಂದ್ರ ಜಾಮೀನು ಅರ್ಜಿಯ ತೀರ್ಪು ಸೋಮವಾರ (ಇಂದು) ಪ್ರಕಟವಾಗಲಿದೆ. ಬಹುತೇಕ 12 ಗಂಟೆ ವೇಳೆಗೆ ಜಾಮೀನು ತೀರ್ಪು ಬರುವ ಸಾಧ್ಯತೆಯಿದೆ. ಹಾಗಾಗಿ ಇವತ್ತು ಸಿಟಿ ಸಿವಿಲ್ ನ್ಯಾಯಾಲಯದತ್ತ ಚಿತ್ತ ನೆಟ್ಟಿದೆ.

ಈಗಾಗಲೇ ನಾಗೇಂದ್ರ ವಿರುದ್ಧ ಇಡಿ ಅಧಿಕಾರಿಗಳು ಪ್ರಾಸಿಕ್ಯೂಷನ್‌ಗೆ ಅನುಮತಿ



ಪಡೆದಿದ್ದಾರೆ. ಸದ್ಯ ಸೆಂಟ್ರಲ್ ಜೈಲಲ್ಲಿರೋ ಮಾಜಿ ಸಚಿವರಿಗೆ ಬೇಲ್ ಸಿಕ್ಕಿದರಷ್ಟೇ ಪರಪ್ಪನ ಅಗ್ರಹಾರದಿಂದ ರಿಲೀಸ್ ಆಗಲಿದ್ದಾರೆ.

**ಹಗರಣದ ಮಾಸ್ಟರ್‌ಮೈಂಡ್ ನಾಗೇಂದ್ರ:** ವಾಲ್ಮೀಕಿ ನಿಗಮದಲ್ಲಿ ನಡೆದಿದೆ ಎನ್ನಲಾದ 187 ಕೋಟಿ ರೂ. ಹಗರಣಕ್ಕೆ ಸಂಬಂಧಿಸಿದಂತೆ ತನಿಖೆ ನಡೆಸಿದ್ದ ಇಡಿ ಬೆಂಗಳೂರಿನ ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯಕ್ಕೆ 24 ಮಂದಿ ಆರೋಪಿಗಳ ವಿರುದ್ಧ ಆರೋಪಪಟ್ಟಿಯನ್ನು ಇದೇ ಅಕ್ಟೋಬರ್ 5ರಂದು ಸಲ್ಲಿಸಿತ್ತು. ಪ್ರಕರಣದಲ್ಲಿ ನಾಗೇಂದ್ರ ಮಾಸ್ಟರ್ ಮೈಂಡ್ ಎಂದು ಇಡಿ ಉಲ್ಲೇಖಿಸಿದೆ. ಸತ್ಯನಾರಾಯಣ ವರ್ಮಾ, ಪದ್ಮನಾಭ, ನಾಗೇಶ್ ರಾವ್, ನೆಕ್ಕಂಟಿ ನಾಗರಾಜ್, ವಿಜಯ್‌ಕುಮಾರ್ ಸೇರಿ 24 ಮಂದಿ ವಿರುದ್ಧ ಚಾರ್ಜ್‌ಶೀಟ್ ಸಲ್ಲಿಕೆಯಾಗಿತ್ತು. ಪುಟ 2

### ಜಮ್ಮು-ಕಾಶ್ಮೀರದಲ್ಲಿ 6 ವರ್ಷಗಳ ಬಳಿಕ ರಾಷ್ಟ್ರಪತಿ ಆಡಳಿತ ಅಂತ್ಯ

# ಸರ್ಕಾರ ರಚನೆಗೆ ಸಿದ್ಧತೆ

**ನವದೆಹಲಿ:** ಜಮ್ಮು ಮತ್ತು ಕಾಶ್ಮೀರದಲ್ಲಿ ವಿಧಾನಸಭಾ ಚುನಾವಣೆ ಮುಗಿದ ನಂತರ ಇದೀಗ ಸರ್ಕಾರ ರಚನೆಗೆ ಸಿದ್ಧತೆಗಳು ನಡೆಯುತ್ತಿವೆ. ಇದರೊಂದಿಗೆ ಕಣಿವೆಯಲ್ಲಿ ಆರು ವರ್ಷಗಳಿಂದ ಹೇರಲಾಗಿದ್ದ ರಾಷ್ಟ್ರಪತಿ ಆಳ್ವಿಕೆಯನ್ನು ಈಗ ಹಿಂಪಡೆಯಲಾಗಿದೆ. ಜಮ್ಮು ಮತ್ತು ಕಾಶ್ಮೀರ ವಿಧಾನಸಭಾ ಚುನಾವಣೆಯಲ್ಲಿ ನ್ಯಾಷನಲ್ ಕಾನ್ಫರೆನ್ಸ್ ಮೈತ್ರಿಕೂಟ ಜಯಭೇರಿ ಬಾರಿಸಿದೆ. ಅದು 49 ಸ್ಥಾನಗಳನ್ನು ಗೆದ್ದಿದ್ದರೆ, ಬಿಜೆಪಿ 29 ಸ್ಥಾನಗಳನ್ನು ಗೆದ್ದಿದೆ.

10 ವರ್ಷಗಳ ಹಿಂದೆ 2014ರಲ್ಲಿ ಜಮ್ಮು ಮತ್ತು ಕಾಶ್ಮೀರದಲ್ಲಿ ಕೊನೆಯ ಬಾರಿಗೆ ವಿಧಾನಸಭೆ ಚುನಾವಣೆ ನಡೆದಿತ್ತು. ಚುನಾವಣೆಯ ನಂತರ ಬಿಜೆಪಿ ಮತ್ತು ಪಿಡಿಪಿ ಮೈತ್ರಿ ಮಾಡಿಕೊಂಡು ಸರ್ಕಾರ ರಚಿಸಿದವು. ಆದರೆ 2018 ರಲ್ಲಿ, ಬಿಜೆಪಿ ತನ್ನ ಬೆಂಬಲವನ್ನು ಹಿಂತೆಗೆದುಕೊಂಡ ನಂತರ, ಸರ್ಕಾರ ಪತನಗೊಂಡಿತು ಮತ್ತು ಮೆಹಬೂಬಾ ಮುಫ್ತಿ ಸಿಎಂ ಸ್ಥಾನಕ್ಕೆ ರಾಜೀನಾಮೆ ನೀಡಿದರು. ಅಂದಿನಿಂದ ಜಮ್ಮು ಮತ್ತು ಕಾಶ್ಮೀರದಲ್ಲಿ ರಾಷ್ಟ್ರಪತಿ ಆಳ್ವಿಕೆ ಹೇರಲಾಗಿದ್ದು, ಅದನ್ನು ಈಗ ತೆಗೆದುಹಾಕಲಾಗಿದೆ.



ಚುನಾವಣೆಯಲ್ಲಿ ಅತಿದೊಡ್ಡ ಪಕ್ಷವಾಗಿ ಹೊರಹೊಮ್ಮಿದ ನ್ಯಾಷನಲ್ ಕಾನ್ಫರೆನ್ಸ್ ಸ್ವತಂತ್ರ ಶಾಸಕರ ಬೆಂಬಲವನ್ನೂ ಪಡೆಯಲಾರಂಭಿಸಿದೆ. ಇದೀಗ ಜಮ್ಮುವಿನ ಥಂಬ್ ವಿಧಾನಸಭೆಯಿಂದ ಚುನಾವಣೆಯಲ್ಲಿ ಗೆದ್ದಿರುವ ಸ್ವತಂತ್ರ ನಾಯಕ ಸತೀಶ್ ಶರ್ಮಾ ಅವರು ನ್ಯಾಷನಲ್ ಕಾನ್ಫರೆನ್ಸ್ ಸೇರಿದ್ದಾರೆ. ಭಾನುವಾರ ದೋಡಾದಲ್ಲಿ ರ್ಯಾಲಿಯನ್ನುದ್ದೇಶಿಸಿ ಮಾತನಾಡಿದ ಎಎಪಿ ರಾಷ್ಟ್ರೀಯ ಸಂಚಾಲಕ ಅರವಿಂದ್ ಕೇಜ್ರಿವಾಲ್, ಸರ್ಕಾರ ರಚಿಸಲು ಆಮ್ ಆದ್ಮಿ ಪಕ್ಷವು ಎನ್‌ಸಿಗೆ ಸಂಪೂರ್ಣವಾಗಿ ಸಹಾಯ ಮಾಡುತ್ತದೆ ಎಂದು ಹೇಳಿದರು. ಪುಟ 2

## ನಂದಿ ಬೆಟ್ಟ ಕುಸಿಯುವ ಆತಂಕ

### ರೂಪ್‌ವೇ ಕಾಮಗಾರಿ, ರೆಸಾರ್ಟ್ ಬಂದ್

**ಚಿಕ್ಕಬಳ್ಳಾಪುರ:** ನಂದಿ ಬೆಟ್ಟ ಪ್ರವಾಸಿಗರ ನೆಚ್ಚಿನ ತಾಣವಾಗಿದೆ. ವೀಕೆಂಡ್ ಬಂದರೆ ಸಾಕು ಬೆಂಗಳೂರು ಮಂದಿ ನಂದಿ ಬೆಟ್ಟಕ್ಕೆ ಹೋಗಿ, ಪ್ರಕೃತಿಯ ಸೊಬಗನ್ನು ಆನಂದಿಸಿ ಬರುತ್ತಾರೆ. ಪ್ರವಾಸಿ ಮತ್ತು ಐತಿಹಾಸಿಕ ತಾಣವಾದ ನಂದಿ ಬೆಟ್ಟಕ್ಕೆ ಅಪಾಯ ಬಂದೊದಗಿದೆ. ಇಲ್ಲಿನ ಕಲ್ಲುಗಣಿಗಾರಿಕೆ, ಕೈಗಾರಿಕಾ ಚಟುವಟಿಕೆಗಳು ಮತ್ತು ಸರ್ಕಾರದಿಂದ ನಿರ್ಮಾಣವಾಗುತ್ತಿರುವ ರೂಪ್ ವೇ ಕಾಮಗಾರಿಯಿಂದ ನಂದಿ ಬೆಟ್ಟ ಕುಸಿಯುವ ಸಾಧ್ಯತೆ ಇದೆ ಎಂದು ಪರಿಸರವಾದಿಗಳು, ಭೂ ವಿಜ್ಞಾನಿಗಳು ಆತಂಕ ವ್ಯಕ್ತಪಡಿಸಿದ್ದಾರೆ.

ಬೆಟ್ಟದ ಸುತ್ತಮುತ್ತ ರೆಸಾರ್ಟ್ಸ್ ವಿಲ್ಲಾ, ಹೋಟೆಲ್ಸ್, ಕ್ರಷರ್ , ರೂಪ್ ವೇ ನಿರ್ಮಾಣ



ಮತ್ತು ಹಲವು ವಾಣಿಜ್ಯ ಚಟುವಟಿಕೆಗಳಿಂದ ಬೆಟ್ಟಕ್ಕೆ ಅಪಾಯ ಎದುರಾಗಿದೆ. ಜೊತೆಗೆ ನಂದಿ ಬೆಟ್ಟದಲ್ಲಿ ಡ್ರಗ್ಸ್, ಗಾಂಜಾ ಸೇರಿದಂತೆ ಅನೈತಿಕ ಚಟುವಟಿಕೆಗಳು ನಡೆಯುತ್ತಿದ್ದು, ಇವುಗಳಿಗೂ ಬ್ರೇಕ್ ಹಾಕಿ. ಈಗಾಗಲೇ ಬೆಟ್ಟದ ಒಂದು ಭಾಗದಲ್ಲಿ ಕುಸಿತವಾಗಿದೆ. ಪುಟ 2

### ರಾಜ್ಯೋತ್ಸವಕ್ಕೆ ಕನ್ನಡ ಧ್ವಜ ಕಡ್ಡಾಯ

# ಬಾವುಟಗಳಿಗೆ ಭಾರೀ ಬೇಡಿಕೆ

**ಬೆಂಗಳೂರು:** ಕರ್ನಾಟಕ ರಾಜ್ಯೋತ್ಸವಕ್ಕೆ ಸರ್ಕಾರ ಕನ್ನಡ ಬಾವುಟ ಕಡ್ಡಾಯಗೊಳಿಸಿದೆ. ಹೀಗಾಗಿ ಬರುವ ತಿಂಗಳು 1ನೇ ತಾರೀಖಿನಂದು ಎಲ್ಲಾ ಶಾಲೆ- ಕಾಲೇಜುಗಳು, ಕಾರ್ಖಾನೆಗಳು ಮತ್ತು ಐಟಿಬಿಟಿ ಕಚೇರಿಗಳಲ್ಲಿ ಕಡ್ಡಾಯವಾಗಿ ಕನ್ನಡ ಬಾವುಟ ಹಾರಿಸಲೇಬೇಕೆಂದು ಡಿಸಿಎಂ ಡಿ.ಕೆ ಶಿವಕುಮಾರ್ ಆದೇಶಿಸಿದ್ದಾರೆ. ಈ ನಿಟ್ಟಿನಲ್ಲಿ ಕನ್ನಡ ಬಾವುಟಗಳಿಗೆ ಭಾರೀ ಬೇಡಿಕೆ ಬಂದಿದೆ.



ಈ ಬಾರಿಯ ನ.1ಕ್ಕೆ ಕರ್ನಾಟಕ ಏಕೀಕರಣಗೊಂಡು 50 ವರ್ಷವಾಗಲಿದೆ. ರಾಜ್ಯೋತ್ಸವವನ್ನು ಅದ್ದೂರಿಯಾಗಿ ಆಚರಿಸಲು ಸರ್ಕಾರ ನಿರ್ಧರಿಸಿದೆ. ಈ ನಿಟ್ಟಿನಲ್ಲಿ ಎಲ್ಲಾ ಶಾಲೆ-ಕಾಲೇಜು, ಕಂಪನಿಗಳು, ಐಟಿಬಿಟಿ ಕಂಪನಿಗಳು ಹಾಗೂ ಕಾರ್ಖಾನೆಗಳು ಕೂಡ ನವೆಂಬರ್ 1ರಂದು ಕನ್ನಡ ಬಾವುಟ ಹಾರಿಸಲೇಬೇಕೆಂದು ಡಿಸಿಎಂ ಡಿ.ಕೆ ಶಿವಕುಮಾರ್ ಹೇಳಿದ್ದಾರೆ. ಇನ್ನೇನೂ ನ.1ಕ್ಕೆ ಕೇವಲ 15 ದಿನಗಳು ಬಾಕಿ ಉಳಿದಿವೆ. ಹೀಗಾಗಿ ಎಲ್ಲಾ ವರ್ಷಕ್ಕಿಂತ ಈ ವರ್ಷ ಕನ್ನಡ ಬಾವುಟಗಳಿಗೆ ಬೇಡಿಕೆ ಹೆಚ್ಚಿದೆ.

ಇನ್ನೂ ಈ ಕನ್ನಡ ಬಾವುಟಗಳು ಕಾಟನ್, ಪಾಲಿಸ್ಟರ್, ಸಿಲ್ಕ್ ಬಟ್ಟೆಗಳಲ್ಲಿ ತಯಾರಾಗುತ್ತಿವೆ. ಒಂದೊಂದಕ್ಕೆ ಒಂದೊಂದು ಬೆಲೆ ಇದೆ. ನಗರದ ಖಾದಿ ಭಂಡಾರ ಸೇರಿದಂತೆ ಬೇರೆ ಬೇರೆ ಖಾಸಗಿ ಅಂಗಡಿಗಳಲ್ಲಿ ಕನ್ನಡ ಬಾವುಟಗಳ ಬೆಲೆ ಹೆಚ್ಚಾಗಿದೆ. 200 ರೂ.ನಿಂದ 700 ರೂ. ಬಾವುಟಗಳು ಮಾರಾಟವಾಗುತ್ತಿವೆ. ಈಗಾಗಲೇ ಸರ್ಕಾರದ ಕಚೇರಿಗಳು, ವಿವಿಧ ಕಂಪನಿಗಳು ಕನ್ನಡ ಧ್ವಜವನ್ನು ಕೊಳ್ಳುತ್ತಿದ್ದಾರೆ. ಕನ್ನಡ ಬಾವುಟದ ಜೊತೆಗೆ ಶಾಲು, ಬ್ಯಾಡ್ಜ್ ಗಳನ್ನು ಸಹ ಕೊಳ್ಳುತ್ತಿದ್ದಾರೆ. ಪುಟ 2

### ಬೆಂಗಳೂರಿನಲ್ಲಿ ಅ.20ರವರೆಗೆ ಸುರಿಯಲಿದೆ ಭಾರಿ ಮಳೆ

# ಆರೆಂಜ್ ಅಲರ್ಟ್

**ಬೆಂಗಳೂರು:** ಬೆಂಗಳೂರು ಸೇರಿ ಕರ್ನಾಟಕದ 13 ಜಿಲ್ಲೆಗಳಲ್ಲಿ ಅಕ್ಟೋಬರ್ 20ರವರೆಗೆ ಮಳೆಯಾಗಲಿದ್ದು, ಆರೆಂಜ್ ಅಲರ್ಟ್ ಘೋಷಿಸಲಾಗಿದೆ. ಉತ್ತರ ಕನ್ನಡ, ದಕ್ಷಿಣ ಕನ್ನಡ, ಬೆಂಗಳೂರು ಗ್ರಾಮಾಂತರ, ಬೆಂಗಳೂರು ನಗರ, ಚಿಕ್ಕಬಳ್ಳಾಪುರ, ಚಿಕ್ಕಮಗಳೂರು, ಹಾಸನ, ಕೋಲಾರ, ರಾಮನಗರ, ಶಿವಮೊಗ್ಗ, ತುಮಕೂರು ಜಿಲ್ಲೆಗಳಿಗೆ ಆರೆಂಜ್ ಅಲರ್ಟ್ ಘೋಷಿಸಲಾಗಿದೆ. ಮೈಸೂರು, ಮಂಡ್ಯ, ದಾವಣಗೆರೆ, ಚಿತ್ರದುರ್ಗ, ಚಾಮರಾಜನಗರ, ಕೊಪ್ಪಳ, ಹಾವೇರಿ,



ಗದಗ, ಧಾರವಾಡ, ಬೆಳಗಾವಿ ಜಿಲ್ಲೆಗಳಿಗೆ ಯೆಲ್ಲೋ ಅಲರ್ಟ್ ಘೋಷಿಸಲಾಗಿದೆ.

ಬಾಳೆಹೊನ್ನೂರು, ಕಾರ್ಕಳ, ನಂಜನಗೂಡು, ಜಯಪುರ, ಬೆಳ್ಳೂರು, ಸೋಮವಾರಪೇಟೆ, ಸರಗೂರು, ಉಪ್ಪಿನಂಗಡಿ, ಕದ್ರಾ, ಶಿರಾಲಿ, ಹಳಿಯಾಳ, ಹಾವೇರಿ, ಚಾಮರಾಜನಗರ, ಕುಶಾಲನಗರ, ನಾಪೋಕ್ಲು, ಕಮ್ಮರಡಿ, ಹುಣಸೂರಿನಲ್ಲಿ ಮಳೆಯಾಗಿದೆ. ಹಾರಂಗಿ, ಸಿದ್ದಾಪುರ, ಉಡುಪಿ, ಯಲ್ಲಾಪುರ, ಸಂಕೇಶ್ವರ, ಹಿಡಕಲ್, ಚಿಕ್ಕೋಡಿ, ಯಡವಾಡ, ಮಹಾಲಿಂಗಪುರ, ಭಾಗಮಂಡಲ, ಪೊನ್ನಂಪೇಟೆ, ಎಚ್‌ಡಿಕೋಟೆ, ಮದ್ದೂರು, ದಾವಣಗೆರೆ, ಗುಂಡ್ಲುಪೇಟೆ, ನಾಗಮಂಗಲದಲ್ಲಿ ಪುಟ 2

# ಇಸ್ರೇಲ್ ವೈಮಾನಿಕ ದಾಳಿ ಮಕ್ಕಳು ಸೇರಿ 20 ಮಂದಿ ಸಾವು

**ನವದೆಹಲಿ:** ಗಾಜಾದ ಶಾಲೆಯೊಂದರ ಮೇಲೆ ಇಸ್ರೇಲ್ ವೈಮಾನಿಕ ದಾಳಿ ನಡೆಸಿದ್ದು, ಪರಿಣಾಮ ಮಕ್ಕಳು ಸೇರಿ 20 ಮಂದಿ ಸಾವನ್ನಪ್ಪಿದ್ದಾರೆ. ಇನ್ನೊಂದೆಡೆ ಮಧ್ಯ ಇಸ್ರೇಲ್‌ನ ಸೇನಾ ನೆಲೆಯ ಮೇಲೆ ಹಿಜ್ಬುಲ್ಲಾ ಡ್ರೋನ್ ದಾಳಿ ನಡೆಸಿದ್ದು, ನಾಲ್ವರು ಇಸ್ರೇಲಿ ಸೈನಿಕರು ಸಾವನ್ನಪ್ಪಿದ್ದಾರೆ.

ಬೈರುತ್‌ನಲ್ಲಿ 22 ಜನರನ್ನು ಕೊಂದ ಇಸ್ರೇಲಿ ದಾಳಿಗೆ ಪ್ರತೀಕಾರವಾಗಿ ಲೆಬನಾನ್ ಮೂಲದ ಹಿಜ್ಬುಲ್ಲಾ ಬಿನ್ಯಾಮಿನಾ ನಗರದ ಬಳಿ ದಾಳಿಗಳನ್ನು ನಡೆಸಿತು. ದಾಳಿಯಲ್ಲಿ ಗಾಯಗೊಂಡವರು 61. ಹಿಜ್ಬುಲ್ಲಾ ಹಾಗೂ ಇಸ್ರೇಲ್ ಕಳೆದ ಒಂದು ವರ್ಷದಿಂದ ನಿತ್ಯವೂ ಒಂದಲ್ಲಾ ಒಂದು ದಾಳಿಯನ್ನು ನಡೆಸುತ್ತಲೇ ಇದೆ. ಪುಟ 2



### ದುರ್ಗಾದೇವಿ ಮೂರ್ತಿ ವಿಸರ್ಜನೆ ಬಳಿಕ

# ಎರಡು ಕೋಮಿನ ನಡುವೆ ಗಲಾಟೆ, ಲಾಠಿ ಚಾರ್ಜ್

**ಚಿಕ್ಕೋಡಿ:** ಕಳೆದ ರಾತ್ರಿ ದುರ್ಗಾದೇವಿ ಮೂರ್ತಿ ವಿಸರ್ಜನೆ ಬಳಿಕ ಎರಡು ಕೋಮಿನ ನಡುವೆ ಗಲಾಟೆ ನಡೆದಿರುವ ಘಟನೆ ಬೆಳಗಾವಿ ಜಿಲ್ಲೆಯ ಹುಕ್ಕೇರಿ ತಾಲೂಕಿನ ಸೊಲ್ಲಾಪುರ ಗ್ರಾಮದಲ್ಲಿ ನಡೆದಿದೆ. ಗಲಾಟೆ ವಿಚಾರ ತಿಳಿದು ಸ್ಥಳಕ್ಕೆ ಆಗಮಿಸಿದ ಪೊಲೀಸರು, ಲಘು ಲಾಠಿ ಚಾರ್ಜ್ ಮಾಡಿ ಜನರನ್ನು ಚದುರಿಸಿದರು. ಗಲಾಟೆಯಲ್ಲಿ ಮೂವರಿಗೆ ಗಾಯವಾಗಿದ್ದು, ಎರಡು ಬೈಕ್ ಹಾಗೂ ಕಾರು ಜಖಂಗೊಂಡಿದೆ. ಪುಟ 2



### ಏರ್ ಇಂಡಿಯಾ ವಿಮಾನಕ್ಕೆ

# ಬಾಂಬ್ ಬೆದರಿಕೆ



**ನವದೆಹಲಿ:** ಮುಂಬೈನಿಂದ ನ್ಯೂಯಾರ್ಕ್‌ಗೆ ಹೊರಟಿದ್ದ ಏರ್ ಇಂಡಿಯಾ ವಿಮಾನಕ್ಕೆ ಬಾಂಬ್ ಬೆದರಿಕೆ ಹಾಕಲಾಗಿದ್ದು, ಭದ್ರತಾ ದೃಷ್ಟಿಯಿಂದ ಮಾರ್ಗ ಮಧ್ಯೆಯೇ ವಾಪಸ್ ತಿರುಗಿಸಿ ದೆಹಲಿ ವಿಮಾನ ನಿಲ್ದಾಣದಲ್ಲಿ ಲ್ಯಾಂಡ್ ಮಾಡಲಾಗಿದೆ.

ವಿಮಾನವು ಪ್ರಸ್ತುತ ಇಂದಿರಾಗಾಂಧಿ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಇಳಿಸಲಾಗಿದೆ. ಪ್ರಯಾಣಿಕರು ಮತ್ತು ಸಿಬ್ಬಂದಿಯ ಸುರಕ್ಷತೆಯನ್ನು ಖಚಿತಪಡಿಸಿಕೊಳ್ಳಲು ಎಲ್ಲಾ ಸುರಕ್ಷತಾ ಕ್ರಮಗಳನ್ನು ಕೈಗೊಳ್ಳಲಾಗಿದೆ ಎಂದು ವಿಮಾನ ನಿಲ್ದಾಣದ ಅಧಿಕಾರಿಗಳು ತಿಳಿಸಿದ್ದಾರೆ.

ಮುಂಬೈನಿಂದ ನ್ಯೂಯಾರ್ಕ್‌ನ ಜೆಎಫ್‌ಕೆ ವಿಮಾನ ನಿಲ್ದಾಣಕ್ಕೆ ಎಐ 119 ವಿಮಾನವು ಮುಂಬೈನಿಂದ ಸುಮಾರು 2 ಗಂಟೆಗೆ ಹೊರಟಿತ್ತು. ಬಾಂಬ್ ಬೆದರಿಕೆ ಬಳಿಕ ವಿಮಾನವನ್ನು ದೆಹಲಿಗೆ ತಿರುಗಿಸಲಾಯಿತು. ಪುಟ 2

### ಸಿಎಂ ಆಗಿ ಅತಿ ಹೆಚ್ಚು ಬಾರಿ ಅಂಬಾರಿ ಏರಿದ

# 'ಚಾಮುಂಡಿ ತಾಯಿಗೆ ಪುಷ್ಪಾರ್ಚನೆ ಭಾಗ್ಯ'

**ಮೈಸೂರು :** ಅದ್ದೂರಿ ಮತ್ತು ಅಚ್ಚುಕಟ್ಟಾದ ದಸರಾ ಆಯೋಜಿಸಿದ ಜಿಲ್ಲಾಡಳಿತ ಶ್ರಮ ಮತ್ತು ಶಿಸ್ತಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅಭಿನಂದನೆ ಸಲ್ಲಿಸಿದ್ದಾರೆ. ಕೋಟ್ಯಾಂತರ ಕನ್ನಡಿಗರ ಸಾಕ್ಷಿಯಾಗಿ ತಾಯಿ ಚಾಮುಂಡಿಗೆ ಪುಷ್ಪಾರ್ಚನೆ ಅರ್ಪಿಸಿದ ಬಳಿಕ ಮುಖ್ಯಮಂತ್ರಿಗಳು ವಿಜ್ರಂಭಣೆಯ ದಸರಾ ವೈಭವವನ್ನು ಮೆಚ್ಚಿಕೊಂಡು ಜಿಲ್ಲಾಡಳಿತಕ್ಕೆ ಅಭಿನಂದಿಸಿದರು.

ಅಂಬಾರಿ ಏರಿದ ತಾಯಿ ಚಾಮುಂಡಿಗೆ ಅತಿ ಹೆಚ್ಚು ಬಾರಿ ಮುಖ್ಯಮಂತ್ರಿಯಾಗಿ ಪುಷ್ಪಾರ್ಚನೆ ಅರ್ಪಿಸಿದ ಭಾಗ್ಯ ತಮ್ಮ ಪಾಲಿಗೆ ಒದಗಿ ಬಂದಿದ್ದಕ್ಕಾಗಿ ರಾಜ್ಯದ ಜನತೆಗೆ ಕೃತಜ್ಞತೆ ಸಲ್ಲಿಸಿದ್ದಾರೆ.

ಕಳೆದ ವರ್ಷ ಭೀಕರ ಬರಗಾಲದ ಕಾರಣದಿಂದ ಸಂಪ್ರದಾಯ ಮತ್ತು ವೈಭವಕ್ಕೆ ಕೊರತೆ ಇಲ್ಲದ ಸರಳ ದಸರಾವನ್ನು ಆಯೋಜಿಸಲಾಗಿತ್ತು. ಆದರೆ ಈ ಬಾರಿ ರಾಜ್ಯಾದ್ಯಂತ ಉತ್ತಮ ಮಳೆಯಾಗಿ, ನಿರೀಕ್ಷಿತ ಮಟ್ಟಕ್ಕಿಂತ ಉತ್ತಮ ಬೆಳೆ ಆಗುವ ಲಕ್ಷಣಗಳೂ ಸ್ಪಷ್ಟವಾಗಿವೆ. ಸಾಲದ್ದಕ್ಕೆ ಈ ಬಾರಿ ಜಿಎಸ್ ಟಿ ಮತ್ತು ತೆರಿಗೆ ಸಂಗ್ರಹವೂ ನಿರಾಸೆ ಮೂಡಿಸಿಲ್ಲ. ಇದು ರಾಜ್ಯದ ಆರ್ಥಿಕತೆ ಆರೋಗ್ಯಕರವಾಗಿ ಏರುಗತಿಯಲ್ಲಿ ಇರುವುದಕ್ಕೆ ಸಾಕ್ಷಿಯಾಗಿದೆ. ಎಲ್ಲವೂ ಒಟ್ಟಾಗಿ ದಸರಾ ಸಂಭ್ರಮವನ್ನು ಹೆಚ್ಚಿಸಿದೆ ಎನ್ನುವ ಸಂತೋಷವನ್ನೂ ವ್ಯಕ್ತಪಡಿಸಿದ್ದಾರೆ. ದಸರಾ ಪೂರ್ವಭಾವಿ ಸಭೆಗಳಲ್ಲಿ ಕೊಟ್ಟ ಸೂಚನೆ ಮತ್ತು ತೆಗೆದುಕೊಂಡ ನಿರ್ಣಯಗಳನ್ನು ಜಿಲ್ಲಾಡಳಿತ ಶಿಸ್ತುಬದ್ದವಾಗಿ ಜಾರಿಗೊಳಿಸಿದೆ. ಇದೇ ಮೊದಲ ಬಾರಿಗೆ ಯುವ ದಸರಾವನ್ನು ಚಾಮುಂಡಿ ತಪ್ಪಲಿನ ಉತ್ತನಹಳ್ಳಿಯಲ್ಲಿ ಸಂಘಟಿಸಿ ಲಕ್ಷ ಲಕ್ಷ ಮಂದಿ ಸಂಭ್ರಮಿಸಿದರು. ಶಾಸ್ತ್ರೀಯ ಸಂಗೀತ ಪ್ರಕಾರಗಳಿಂದ, ಸಮಕಾಲೀನ ಸಂಗೀತವನ್ನೂ, ಶಾಸ್ತ್ರೀಯ ನೃತ್ಯದಿಂದ ಸಮಕಾಲೀನ ನೃತ್ಯ ಪ್ರಕಾರಗಳು, 20 ಕ್ಕೂ ಹೆಚ್ಚು ತಂಡಗಳು, ನೂರಾರು ಕಲಾವಿದರು ಯುವ ದಸರಾ ಸಡಗರವನ್ನು ಹೆಚ್ಚಿಸಿದ್ದಾರೆ. ಹಾಗೆಯೇ ದಸರಾದ ಮುಖ್ಯ ಸಾಂಸ್ಕೃತಿಕ ವೇದಿಕೆಯಲ್ಲೂ ಸಾಹಿತ್ಯ, ಸಂಗೀತ, ಕಲೆ, ನೃತ್ಯಗಳು ಮೇಳೈಸಿ ಖುಷಿ ಕೊಟ್ಟಿದೆ. ಒಟ್ಟಾರೆಯಾಗಿ ದಸರಾ ಉದ್ಘಾಟನೆಯಿಂದ ಅಂಬಾರಿಯ ತಾಯಿ ಚಾಮುಂಡಿಗೆ ಪುಷ್ಪಾರ್ಚನೆವರೆಗೂ ಯಾವುದೇ ಅಡಚಣೆಗಳು ಇಲ್ಲದಂತೆ ಒಂಬತ್ತು ದಿನಗಳ ಕಲಾ ಸಾಂಪ್ರದಾಯಿಕ ದಸರಾ ಸಂಭ್ರಮದಿಂದ ಮುಗಿದಿದೆ.



## ಸಿಎಂ ಸೇರಿ ಗಣ್ಯರಿದ್ದ ಸಾಲಿನಲ್ಲಿ ರೌಡಿಶೀಟರ್ ಪ್ರತ್ಯಕ್ಷ



ಮೈಸೂರು ದಸರಾ ಮಹೋತ್ಸವದ ಸಂದರ್ಭದಲ್ಲಿ ಗಣ್ಯರ ಸಾಲಿನಲ್ಲಿ ರೌಡಿಶೀಟರ್ ಪ್ರಕಾಶ ಮುಧೋಳ ಕುಳಿತುಕೊಂಡಿರುವುದು ಬಾಗಲಕೋಟೆಯಲ್ಲಿ ಭಾರೀ ಆಕ್ರೋಶಕ್ಕೆ ಕಾರಣವಾಗಿದೆ. ಸಿಎಂ ಸಿದ್ದರಾಮಯ್ಯ, ಡಿಸಿಎಂ ಡಿ.ಕೆ. ಶಿವಕುಮಾರ್ ಹಾಗೂ ಸಚಿವರಾದ ಹೆಚ್.ಸಿ. ಮಹದೇವಪ್ಪ, ಶಿವರಾಜ ತಂಗಡಗಿ, ಲಕ್ಷ್ಮಿ ಹೆಬ್ಬಾಳ್ಕರ್ ಕೂತಿದ್ದ ವಿಐಪಿ ಸಾಲಿನಲ್ಲಿ ಪ್ರಕಾಶ್ ಮುಧೋಳ ಕಾಣಿಸಿಕೊಂಡಿದ್ದಾನೆ. ಡಿಸಿಎಂ ಡಿ.ಕೆ. ಎಂಎಲ್ಸಿ ಯತೀಂದ್ರ ಜೊತೆಗೆ ಪ್ರಕಾಶ್ ಮುಧೋಳ ಸೆಲ್ಫಿ ತೆಗೆದುಕೊಂಡಿದ್ದಾನೆ. ಗಣ್ಯರ ಸಾಲಿನಲ್ಲಿ ಆತ ಆಸನ ಪಡೆದಿದ್ದು ಹೇಗೆ ಎಂಬ ಪ್ರಶ್ನೆ ಎದುರಾಗಿದೆ. ಗಣ್ಯರ ಸಾಲಿನಲ್ಲಿ ಆತನನ್ನು ಹೇಗೆ ಕೂರಿಸಿದರು ಎಂದು ಬಾಗಲಕೋಟೆ ಜನ ಆಕ್ರೋಶ ವ್ಯಕ್ತಪಡಿಸಿದ್ದಾರೆ. ಇತ್ತೀಚೆಗಷ್ಟೇ ಬಾಗಲಕೋಟೆ ತಾಲೂಕಿನ ಸೀಮೆಕೇರಿ ರಾಮರೂಢಮಠದ ಶ್ರೀಗಳಿಗೆ ಬೆದರಿಕೆ ಹಾಕಿ ಒಂದು ಕೋಟಿ ರೂಪಾಯಿ ಹಣ ವಸೂಲಿ ಮಾಡಿದ್ದ ರೌಡಿಶೀಟರ್ ಪ್ರಕಾಶ ಮುಧೋಳನನ್ನು ಬಂಧಿಸಲಾಗಿತ್ತು.ಎಡಿಜಿಪಿ ಹೆಸರಿನಲ್ಲಿ ಕರೆ ಮಾಡಿ ವಂಚನೆ ಮಾಡಿದ್ದ ಆತನನ್ನು ಬಾಗಲಕೋಟೆ ಪೊಲೀಸರು ಬಂಧಿಸಿದ್ದರು. ನಾಲ್ಕು ದಿನದ ಹಿಂದೆ ಜಾಮೀನಿನ ಮೇಲೆ ಹೊರಬಂದಿರುವ ಪ್ರಕಾಶ ಮುಧೋಳ ಇವಾಗ ದಸರಾ ಕಾರ್ಯಕ್ರಮದ ಗಣ್ಯರ ವೇದಿಕೆಯಲ್ಲಿ ಪ್ರತ್ಯಕ್ಷನಾಗಿದ್ದಾನೆ.

## ರಾಜ್ಯದಲ್ಲಿ ದಸರಾ ಹಬ್ಬದ ನಡುವೆ ಮಳೆ ಅಬ್ಬರ, ಅಪಾರ ಬೆಳೆ ಹಾನಿ

**ಬೆಂಗಳೂರು:** ದಸರಾ ಹಬ್ಬದ ಸಂಭ್ರಮದ ನಡುವೆ ರಾಜ್ಯದ ಬಹುತೇಕ ಭಾಗದಲ್ಲಿ ಮಳೆಯ ಅಬ್ಬರ ಮುಂದುವರೆದಿದ್ದು, ಉತ್ತರ ಕರ್ನಾಟಕದಲ್ಲಿ ಭಾರಿ ಮಳೆಯಿಂದ ಅಪಾರ ಪ್ರಮಾಣದ ಬೆಳೆ ಹಾನಿಯಾಗಿ ಜನ ಜೀವನ ಅಸ್ತವ್ಯಸ್ತಗೊಂಡಿದೆ.

ಗದಗ, ಧಾರವಾಡ ಜಿಲ್ಲೆಯಲ್ಲಿ ಭಾರಿ ಮಳೆಯಾಗಿದ್ದು, ಬೆಣ್ಣೆ ಹಳ್ಳ ಮತ್ತು ಮಲಪ್ರಭಾ ನದಿಯಲ್ಲಿ ಪ್ರವಾಹ ಉಂಟಾಗಿದೆ.

ಇದರಿಂದಾಗಿ ಕೊಯ್ಲು ಹಂತಕ್ಕೆ ಬಂದಿದ್ದ ಸಾವಿರಾರು ಹೆಕ್ಟೇರ್ ಪ್ರದೇಶದ ಮೆಕ್ಕೆಜೋಳ ಜೋಳ ಸೇರಿ ವಿವಿಧ ಬೆಳೆಗಳು ಹಾನಿಯಾಗಿವೆ.

ಹಾವೇರಿ ತಾಲೂಕಿನ ಕನಕಪುರ ಸಮೀಪ ಯುಟಿಪಿ ಕಾಲುವೆ ಒಡೆದು ಸಾವಿರಾರು ಎಕರೆ ಪ್ರದೇಶದಲ್ಲಿನ ಬೆಳೆ ಹಾನಿಯಾಗಿದೆ. ಕೊಪ್ಪಳ ತಾಲೂಕಿನ ಹಿರೇಹಳ್ಳ ಜಲಾಶಯ ಭರ್ತಿಯಾಗಿ ಜಲಾಶಯದಿಂದ ಸುಮಾರು 19000 ಕ್ಯುಸೆಕ್ ನಷ್ಟು ನೀರು ಹರಿಬಿಡಲಾಗಿದ್ದು, ಹಳ್ಳದುದ್ದಕ್ಕೂ ಪ್ರವಾಹ ಉಂಟಾಗಿ ಅಕ್ಕಪಕ್ಕದ ಹೊಲಗಳಿಗೆ ನೀರು ನುಗ್ಗಿದೆ. ಹುಲಿಗಿ- ಆನೆಗೊಂದಿ ಮಾರ್ಗ ಬಂದ್ ಆಗಿದ್ದರಿಂದ ಭಕ್ತರು ಪರದಾಡುವಂತಾಗಿತ್ತು.

ಚಾಮರಾಜನಗರ ತಾಲೂಕಿನ ಬಾಗಳಿಯಲ್ಲಿ ಮಳೆಗೆ ಮನೆ ಗೋಡೆ ಕುಸಿದು ವ್ಯಕ್ತಿಯೊಬ್ಬರು ಮೃತಪಟ್ಟಿದ್ದಾರೆ. ಮಕ್ಕಳಿಗೆ ಸಣ್ಣ ಪುಟ್ಟ ಗಾಯಗಳಾಗಿದ್ದು, ಪ್ರಾಣಾಪಾಯದಿಂದ ಪಾರಾಗಿದ್ದಾರೆ.

2023ರ ಚುನಾವಣೆಯಲ್ಲಿ ಜೆಡಿಎಸ್ ಅಭ್ಯರ್ಥಿಯಾಗಿ ಬೆಳಗಾವಿ ಜಿಲ್ಲೆಯ ರಾಮದುರ್ಗ ಕ್ಷೇತ್ರದಲ್ಲಿ ಸ್ಪರ್ಧೆ ಮಾಡಿದ್ದ. ಮಾಜಿ ಸಿಎಂ ಜಗದೀಶ್ ಶೆಟ್ಟರ್ ಹೆಸರಿನಲ್ಲಿ ವಂಚನೆಗೆ ಯತ್ನಿಸಿದ್ದ. ಸಚಿವ ತಿಮ್ಮಾಪುರ ಅಳಿಯ ಎಂದು ಕಾರು ಲೋನ್ ಪಡೆದುಕೊಳ್ಳಲು ಯತ್ನಿಸಿದ್ದ. ವಂಚನೆ ಸುಳಿಗೆ ಸೇರಿದಂತೆ ಪ್ರಕಾಶ ಮುಧೋಳ ವಿರುದ್ಧ 11 ಕೇಸುಗಳು ಇವೆ. ಇಂತಹ ವ್ಯಕ್ತಿ ದಸರಾದಲ್ಲಿ ಗಣ್ಯರ ಸಾಲಿನಲ್ಲಿ ಕಾಣಿಸಿಕೊಂಡಿರುವುದು ಆಕ್ರೋಶಕ್ಕೆ ಕಾರಣವಾಗಿದೆ ಎನ್ನಲಾಗಿದೆ.

## ಮಾಜಿ ಸಚಿವ ಬಾಬಾ ಸಿದ್ದಿಕ್ ಹತ್ಯೆಗೆ ಡಿಸಿಎಂ ಡಿ.ಕೆ. ಶಿವಕುಮಾರ್ ಖಂಡನೆ

**ಬೆಂಗಳೂರು:** ಮಹಾರಾಷ್ಟ್ರದ ಮಾಜಿ ಸಚಿವ ಬಾಬಾ ಸಿದ್ದಿಕ್ ಹತ್ಯೆಯನ್ನು ಡಿಸಿಎಂ ಡಿ.ಕೆ. ಶಿವಕುಮಾರ್ ಖಂಡಿಸಿದ್ದು, ಇದು ನನಗೆ ಆಘಾತ ಮತ್ತು ತೀವ್ರ ದುಃಖವನ್ನುಂಟು ಮಾಡಿದೆ ಎಂದು ತಿಳಿಸಿದ್ದಾರೆ.

ಮೃತರ ಕುಟುಂಬಕ್ಕೆ ನನ್ನ ಸಂತಾಪ ಸೂಚಿಸುತ್ತೇನೆ. ಅವರ ಮಗ ಜೀಶನ್ ಸಿದ್ದಿಕ್, ಅವರ ಕುಟುಂಬ ಸದಸ್ಯರು ಮತ್ತು ಬೆಂಬಲಿಗರೊಂದಿಗೆ ಇರುತ್ತೇವೆ.

ಈ ಘೋರ ಅಪರಾಧ ಎಸಗಿದ ಅಪರಾಧಿಗಳನ್ನು ಬಂಧಿಸಲು ಈ ಘಟನೆಯನ್ನು ಸಂಪೂರ್ಣವಾಗಿ ತನಿಖೆ ಮಾಡಿ, ನ್ಯಾಯ ಸಿಗುತ್ತದೆ ಎಂದು ಆಶಿಸುತ್ತೇವೆ ಎಂದು ಡಿಸಿಎಂ ತಿಳಿಸಿದ್ದಾರೆ.

## ಸಂಚಾರಿ ಕುರಿಗಾರರಿಗೆ ಗುರುತಿನ ಚೀಟಿ ಪಡೆಯಲು ಅರ್ಜಿ

**ಬೆಂಗಳೂರು ಗ್ರಾಮಾಂತರ:** ಕರ್ನಾಟಕ ಕುರಿ ಮತ್ತು ಉಣ್ಣೆ ಅಭಿವೃದ್ಧಿ ನಿಗಮ ನಿಯಮಿತ ಬೆಂಗಳೂರು ವತಿಯಿಂದ 2024-25ನೇ ಸಾಲಿನಲ್ಲಿ ಸಂಚಾರಿ ಕುರಿಗಾರರಿಗೆ ಗುರುತಿನ ಚೀಟಿ ಪಡೆಯಲು ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿರುವ ಕನಿಷ್ಠ 20ಕ್ಕಿಂತ ಹೆಚ್ಚು ಕುರಿ/ಮೇಕೆಗಳನ್ನು ಹೊಂದಿರುವ ಅರ್ಹ ಸಂಚಾರಿ ಕುರಿಗಾರರಿಂದ ಅರ್ಜಿ ಆಹ್ವಾನಿಸಲಾಗಿದೆ. ಸಂಚಾರಿ ಕುರಿಗಾರರ ಗುರುತಿನ ಚೀಟಿ ಪಡೆಯಲು, ಕನಿಷ್ಠ 20ಕ್ಕಿಂತ ಹೆಚ್ಚು ಕುರಿ/ಮೇಕೆಗಳನ್ನು ಹೊಂದಿದ್ದಲ್ಲಿ ಅರ್ಹರಿರುತ್ತಾರೆ. ಸಂಚಾರಿ ಕುರಿಗಾರರು ತಮ್ಮ ವ್ಯಾಪ್ತಿಯಲ್ಲಿ ಬರುವ ಪ್ರಾಥಮಿಕ ಪಶು ಚಿಕಿತ್ಸಾಲಯ/ಪಶು ಚಿಕಿತ್ಸಾಲಯ/ಪಶು ಆಸ್ಪತ್ರೆಗಳ ಪಶು ವೈದ್ಯಾಧಿಕಾರಿಗಳು/ಮುಖ್ಯ ಪಶು ವೈದ್ಯಾಧಿಕಾರಿಗಳನ್ನು ಕಛೇರಿ ಸಮಯದಲ್ಲಿ ಸಂಪರ್ಕಿಸಿ ನಿಗದಿತ ಅರ್ಜಿ ನಮೂನೆಯನ್ನು ಪಡೆದು ವಲಸೆ ಹೋಗುವುದಕ್ಕೆ ಸಂಬಂಧಪಟ್ಟಂತೆ ಸ್ಥಳೀಯ ಗ್ರಾಮಲೆಕ್ಕಾಧಿಕಾರಿಗಳಿಂದ ಮಹಜರ ಪ್ರಮಾಣ ಪತ್ರ ಪಡೆದು ಹಾಗೂ ಸಂಬಂಧಿಸಿದ ಪಶು ವೈದ್ಯಾಧಿಕಾರಿಗಳಿಂದ ಕನಿಷ್ಠ 20 ಕುರಿ/ಮೇಕೆಗಳನ್ನು ಹೊಂದಿರುವ ದೃಢೀಕರಣ ಪತ್ರ ಪಡೆದು ಸೂಕ್ತ ದಾಖಲಾತಿಗಳೊಂದಿಗೆ ಭರ್ತಿ ಮಾಡಿದ ಅರ್ಜಿಯನ್ನು ಅದೇ ಪಶು ಚಿಕಿತ್ಸಾಲಯ/ಪಶು ಆಸ್ಪತ್ರೆ/ ಕಛೇರಿಗೆ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಕರ್ನಾಟಕ ಕುರಿ ಮತ್ತು ಉಣ್ಣೆ ಅಭಿವೃದ್ಧಿ ನಿಗಮ ನಿಯಮಿತ ಉಪ ನಿರ್ದೇಶಕರ ಕಛೇರಿ, ಬೆಂಗಳೂರು ವಿಭಾಗ, ಮೊಬೈಲ್ ಸಂಖ್ಯೆ: 9740171450 ಕಛೇರಿ ವೇಳೆಯಲ್ಲಿ ಸಂಪರ್ಕಿಸಿ ಮಾಹಿತಿ ಪಡೆಯಬಹುದಾಗಿದೆ ಎಂದು ಕರ್ನಾಟಕ ಕುರಿ ಮತ್ತು ಉಣ್ಣೆ ಅಭಿವೃದ್ಧಿ ನಿಗಮ ನಿಯಮಿತದ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅರ್ಜಿ ಸಲ್ಲಿಕೆ ಅವಧಿ ವಿಸ್ತರಣೆ

**ಚಿಕ್ಕಬಳ್ಳಾಪುರ:** ಜಿಲ್ಲೆಯ ಅಲ್ಪಸಂಖ್ಯಾತರ ಕಲ್ಯಾಣ ಇಲಾಖಾ ವತಿಯಿಂದ ಕಾರ್ಯನಿರ್ವಹಿಸುತ್ತಿರುವ ಅಲ್ಪಸಂಖ್ಯಾತರ ಮೆಟ್ರಿಕ್ ನಂತರ ಬಾಲಕ/ ಬಾಲಕಿಯರ ವಿದ್ಯಾರ್ಥಿನಿಲಯಗಳು ಚಿಕ್ಕಬಳ್ಳಾಪುರ ಮತ್ತು ಚಿಂತಾಮಣಿ ತಾಲ್ಲೂಕು ಹಾಗೂ ಅಲ್ಪಸಂಖ್ಯಾತರ ಮೆಟ್ರಿಕ್ ನಂತರ ಬಾಲಕರ ವಿದ್ಯಾರ್ಥಿನಿಲಯಗಳು ಗೌರಿಬಿದನೂರು ಮತ್ತು ಬಾಗೇಪಲ್ಲಿ ತಾಲ್ಲೂಕುಗಳ 2024-25ನೇ ಶೈಕ್ಷಣಿಕ ಸಾಲಿನ ಪ್ರವೇಶಕ್ಕೆ (ಪಿಯುಸಿ ಮತ್ತು ಪಿಯುಸಿ ಸಮಾನಾಂತರ ಕೋರ್ಸಿನ, ಸಾಮಾನ್ಯ ಪದವಿ ಮಟ್ಟದ ಕೋರ್ಸು, ವೃತ್ತಿಪರ ಕೋರ್ಸು ಮತ್ತು ಸ್ನಾತಕೋತ್ತರ ಕೋರ್ಸಿನ ವಿದ್ಯಾರ್ಥಿಗಳಿಗೆ ಮಾತ್ರ) ಅರ್ಹ ವಿದ್ಯಾರ್ಥಿಗಳಿಂದ ರಾಜ್ಯ ವಿದ್ಯಾರ್ಥಿನಿಲಯ ತಂತ್ರಾಂಶದ ಆನ್ ಲೈನ್ ಅರ್ಜಿಗಳನ್ನು ಅಹ್ವಾನಿಸಲಾಗಿದ್ದು, ಅರ್ಜಿ ಸಲ್ಲಿಸಲು ಕೊನೆಯ ದಿನಾಂಕವನ್ನು ನವೆಂಬರ್ 11 ರವರೆಗೆ ವಿಸ್ತರಿಸಲಾಗಿದೆ. ವಿದ್ಯಾರ್ಥಿನಿಲಯಗಳಲ್ಲಿ ಶೇ.75ರಷ್ಟು ಅಲ್ಪಸಂಖ್ಯಾತರ ವಿದ್ಯಾರ್ಥಿಗಳಿಗೆ (ಮುಸ್ಲಿಂ, ಕ್ರೈಸ್ತ, ಜೈನ್, ಪಾರ್ಸಿ, ಬೌದ್ಧ) ಹಾಗೂ ಶೇ 25ರಷ್ಟು ಹಿಂದುಳಿದ ವರ್ಗ, ಪರಿಶಿಷ್ಠ ಜಾತಿ ಮತ್ತು ಪರಿಶಿಷ್ಠ ಪಂಗಡದ ವಿದ್ಯಾರ್ಥಿಗಳಿಗೆ ನೀಡಲಾಗುವುದು. ಹೆಚ್ಚಿನ ಮಾಹಿತಿಗೆ ಜಿಲ್ಲಾ ಅಲ್ಪಸಂಖ್ಯಾತರ ಅಧಿಕಾರಿಗಳ ಕಚೇರಿ, ಜಿಲ್ಲಾಡಳಿತ ಭವನ, ಎಸ್.ಎ8, 2ನೇ ಮಹಡಿ, ಶಿಡ್ಲಘಟ್ಟ ರಸ್ತೆ, ಚಿಕ್ಕಬಳ್ಳಾಪುರ. ದೂರವಾಣಿ: 08156-277049 ತಾಲ್ಲೂಕು ವಿಸ್ತರಣಾಧಿಕಾರಿಗಳು, ಸಂಬಂಧಿಸಿದ ನಿಲಯ ಪಾಲಕರು ಇವರನ್ನು ಸಂಪರ್ಕಿಸಬಹುದೆಂದು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸಂಚಾರಿ/ವಲಸೆ ಕುರಿಗಾಹಿಗಳ ಗುರುತಿನ ಚೀಟಿ ಪಡೆಯಲು ಅರ್ಜಿ ಆಹ್ವಾನ

**ಮೈಸೂರು:** ಪಶುಪಾಲನೆ ಮತ್ತು ಪಶು ವೈದ್ಯಕೀಯ ಸೇವಾ ಇಲಾಖೆ ಹಾಗೂ ಕರ್ನಾಟಕ ಕುರಿ ಮತ್ತು ಉಣ್ಣೆ ಅಭಿವೃದ್ಧಿ ನಿಗಮ ವತಿಯಿಂದ 2024-25 ನೇ ಸಾಲಿನ ಸಂಚಾರಿ/ ವಲಸೆ ಕುರಿಗಾಹಿಗಳಿಗೆ ಗುರುತಿನ ಚೀಟಿ ಪಡೆಯಲು ಕನಿಷ್ಠ 20 ಕುರಿಗಳನ್ನು ಹೊಂದಿರುವ ಸಂಚಾರಿ/ ವಲಸೆ ಹೋಗುವ ಕುರಿಗಾರರಿಂದ ಅರ್ಜಿ ಆಹ್ವಾನಿಸಲಾಗಿದೆ. ಸಂಚಾರಿ/ವಲಸೆ ಕುರಿಗಾಹಿಗಳು ಗುರುತಿನ ಚೀಟಿಯನ್ನು ಪಡೆಯಲು ತಮ್ಮ ವ್ಯಾಪ್ತಿಗೆ ಬರುವ ಸ್ಥಳೀಯ ಪಶುವೈದ್ಯಾಧಿಕಾರಿಗಳಿಂದ ಮಾಹಿತಿಯೊಂದಿಗೆ ಅರ್ಜಿಯನ್ನು ಪಡೆದು, ಭರ್ತಿ ಮಾಡಿದ ಅರ್ಜಿ ಹಾಗೂ ಅಗತ್ಯ ದಾಖಲೆಗಳೊಂದಿಗೆ ಅಕ್ಟೋಬರ್ 31 ರೊಳಗೆ ಪಶುಪಾಲನೆ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆಯ ತಾಲ್ಲೂಕು ಸಹಾಯಕ ನಿರ್ದೇಶಕರು(ಆಡಳಿತ) ರವರ ಕಚೇರಿಗೆ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಮೈಸೂರು ಜಿಲ್ಲೆಯ 09 ತಾಲ್ಲೂಕುಗಳ ಪಶುಪಾಲನೆ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆಯ ಸಹಾಯಕ ನಿರ್ದೇಶಕರು(ಆಡಳಿತ), ಕರ್ನಾಟಕ ಕುರಿ ಮತ್ತು ಉಣ್ಣೆ ಅಭಿವೃದ್ಧಿ ನಿಗಮದ ಪಶು ಆಸ್ಪತ್ರೆ ಹಾಗೂ ಸಹಾಯಕ ನಿರ್ದೇಶಕರ ಕಛೇರಿ ಅಥವಾ ದೂ.ಸಂ: 9845623137 ನ್ನು ಸಂಪರ್ಕಿಸಬಹುದು ಎಂದು ಕರ್ನಾಟಕ ಕುರಿ ಮತ್ತು ಉಣ್ಣೆ ಅಭಿವೃದ್ಧಿ ನಿಗಮ ನಿ. ದ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸಾರ್ವಜನಿಕರಿಂದ ದೂರು ಸ್ವೀಕಾರ

**ಮೈಸೂರು:** ಕರ್ನಾಟಕ ಲೋಕಾಯುಕ್ತ ಮೈಸೂರು ವಿಭಾಗದ ಅಧಿಕಾರಿಗಳ ವತಿಯಿಂದ ಅಕ್ಟೋಬರ್ 16 ರಂದು ಬೆಳಿಗ್ಗೆ 11 ಗಂಟೆಯಿಂದ ಮಧ್ಯಾಹ್ನ 1 ಗಂಟೆಯವರೆಗೆ ಸರಗೂರು ತಾಲ್ಲೂಕು ತಹಶೀಲ್ದಾರ್‌ರವರ ಕಛೇರಿಯ ಸಭಾಂಗಣದಲ್ಲಿ ದೂರು ಸ್ವೀಕರಿಸುವ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ. ಸರ್ಕಾರಿ ಕಛೇರಿಗಳಲ್ಲಿ ಸಾರ್ವಜನಿಕರ ಅಧಿಕೃತ ಕೆಲಸಗಳ ಅನಗತ್ಯ ವಿಳಂಬ, ಲಂಚದ ಹಣದ ಬೇಡಿಕೆ ಇತ್ಯಾದಿ ತೊಂದರೆಗಳನ್ನು ನೀಡುತ್ತಿರುವ ಬಗ್ಗೆ ಸಂಬಂಧಪಟ್ಟ ಸಾರ್ವಜನಿಕ/ಸರ್ಕಾರಿ ಅಧಿಕಾರಿ/ ನೌಕರರ ವಿರುದ್ಧ ಕ್ರಮಬದ್ಧವಾಗಿ ಭರ್ತಿ ಮಾಡಿದ ದೂರುಗಳನ್ನು ಅಗತ್ಯ ದಾಖಲಾತಿಗಳೊಡನೆ ನೀಡಬಹುದಾಗಿದ್ದು, ಸಾರ್ವಜನಿಕರು ಕರ್ತವ್ಯ ಲೋಪವೆಸಗುವ ಭ್ರ?ಟ ಸರ್ಕಾರಿ ಅಧಿಕಾರಿ / ನೌಕರರ ವಿರುದ್ಧ ಕಾನೂನು ಕ್ರಮ ತೆಗೆದುಕೊಳ್ಳಲು ಈ ಅವಕಾಶವನ್ನು ಸದುಪಯೋಗಪಡಿಸಿಕೊಳ್ಳಬಹುದು ಎಂದು ಮೈಸೂರು ವಿಭಾಗದ ಕರ್ನಾಟಕ ಲೋಕಾಯುಕ್ತ ಪೊಲೀಸ್ ವಿಭಾಗದ ಪೊಲೀಸ್ ಅಧೀಕ್ಷಕರು ತಿಳಿಸಿದ್ದಾರೆ.

## ಚನ್ನಪಟ್ಟಣ ಉಪಚುನಾವಣೆ: ಬಿಡದಿ ತೋಟದ ಮನೆಯಲ್ಲಿ ಸಭೆ

**ರಾಮನಗರ:** ಚನ್ನಪಟ್ಟಣ ಉಪ ಚುನಾವಣೆ ಹಿನ್ನೆಲೆಯಲ್ಲಿ ಕೇಂದ್ರ ಸಚಿವರ ಹೆಚ್ .ಡಿ.ಕುಮಾರಸ್ವಾಮಿ ಬಿಡದಿ ಸಮೀಪದ ಕೇತಿಗಾನಹಳ್ಳಿಯ ತಮ್ಮ ತೋಟದಲ್ಲಿ ಜೆಡಿಎಸ್ ಕಾರ್ಯಕರ್ತರು ಹಾಗೂ ಮುಖಂಡರ ಸಭೆ ನಡೆಸಿದರು. ಸಭೆ ಬಳಿಕ ಮಾತನಾಡಿದ ಹೆಚ್ .ಡಿ.ಕುಮಾರಸ್ವಾಮಿ, ಈಗಾಗಲೇ 5 ಜಿಲ್ಲಾ ಪಂಚಾಯತಿ, ಕ್ಷೇತ್ರ ಹಾಗೂ ಪಟ್ಟಣ ಭಾಗದಲ್ಲಿ ಕಾರ್ಯಕರ್ತರ ಸಭೆ ನಡೆಸಿದ್ದೇವೆ. ಈ ಸಭೆಯಲ್ಲಿ ಹಳ್ಳಿ, ಹೋಬಳಿ, ಪಂಚಾಯಿತಿ ಮಟ್ಟದ ಮುಖಂಡರು ಬಂದಿದ್ದರು. ಚುನಾವಣೆಗೆ ಯಾವ ರೀತಿ ತಯಾರಿ ಮಾಡಿಕೊಳ್ಳಬೇಕು. ಅಭ್ಯರ್ಥಿ ಯಾರಾಗಬೇಕು ಎನ್ನುವುವ ಬಗ್ಗೆ ಸಮಾಲೋಚನೆ ನಡೆಸಿದ್ದೇನೆ. ಜೆಡಿಎಸ್- ಬಿಜೆಪಿ ಎರಡು ಪಕ್ಷಗಳು ಹೊಂದಾಣಿಕೆಯಿಂದ ಕೆಲಸ ಮಾಡಬೇಕು ಎಂದರು. ನವೆಂಬರ್ ಒಳಗೆ ಮಹಾರಾಷ್ಟ್ರ ಹಾಗೂ ಜಾರ್ಖಂಡ್ ರಾಜ್ಯಗಳ ವಿಧಾನಸಭೆ ಚುನಾವಣೆ ನಡೆಯಬೇಕಿದೆ. ಅದೇ ಸಮಯದಲ್ಲಿ ಚನ್ನಪಟ್ಟಣ ಉಪ ಚುನಾವಣೆ ನಡೆಯಬಹುದು. ಇನ್ನು ಒಂದು ವಾರದಲ್ಲಿ ಚುನಾವಣೆ ಘೋಷಣೆಯಾಗಬಹುದು. ಅಂತಿಮವಾಗಿ ದೆಹಲಿ ಮಟ್ಟದಲ್ಲಿ ಬಿಜೆಪಿಯ ಹೈಕಮಾಂಡ್ ಹಾಗೂ ನಾವು ಕೂತು ಚರ್ಚೆ ಮಾಡುತ್ತೇವೆ ಎಂದರು.

ಚನ್ನಪಟ್ಟಣ ಜೆಡಿಎಸ್ ಕ್ಷೇತ್ರ. ಕಳೆದ ಎರಡು ಬಾರಿ ಜೆಡಿಎಸ್ ನಿಂದ ಗೆದ್ದಿದ್ದೇವೆ. ಈ ಹಿಂದಿನಿಂದಲೂ ಇದು ಜೆಡಿಎಸ್ ಭದ್ರಕೋಟೆ. ನಿಖಿಲ್ ಕುಮಾರಸ್ವಾಮಿ ಉಪ ಚುನಾವಣೆಯ ಅಭ್ಯರ್ಥಿ ಆಗಬೇಕು ಎಂಬ ಬಗ್ಗೆ ಕಾರ್ಯಕರ್ತರಿಂದ ಒತ್ತಡ ಇದೆ. 95% ನಾಯಕರು, ಮುಖಂಡರ ಅಭಿಪ್ರಾಯ ಕೂಡ ಇದೆ. ಆದರೆ, ನಾವು ಈಗ ಇರುವ ಸನ್ನಿವೇಶ ನೋಡಿಕೊಂಡು ನಿರ್ಧಾರ ಮಾಡಬೇಕು. ನಾವೀಗ ಎನ್ ಡಿಎ ಭಾಗ. ಎನ್ ಡಿಎ ಅಭ್ಯರ್ಥಿ ಗೆಲ್ಲಬೇಕು. ಹಾಗಾಗಿ ಬಿಜೆಪಿ ನಾಯಕರ ಜೊತೆ ಚರ್ಚಿಸಿ, ಎಲ್ಲರ ಅಭಿಪ್ರಾಯ ಪಡೆದು ಅಭ್ಯರ್ಥಿ ಆಯ್ಕೆ ಮಾಡಲಾಗುವುದು ಎಂದು ಹೇಳಿದರು. ಇನ್ನೊಂದು ವಾರದಲ್ಲಿ ಟಿಕೆಟ್ ಫೈನಲ್ ಆಗುತ್ತದೆ. ಚುನಾವಣೆ ದಿನಾಂಕ 4-5 ದಿನಗಳಲ್ಲಿ ಯಾವಾಗ ಬೇಕಾದರೂ ಘೋಷಣೆ ಆಗಬಹುದು ಎಂದು ತಿಳಿಸಿದರು.

## ಪ್ರವೇಶಾತಿಗೆ ಅರ್ಜಿ ಸಲ್ಲಿಕೆ ಅವಧಿ ವಿಸ್ತರಣೆ

**ಕೋಲಾರ:** ಪ್ರಸಕ್ತ ಸಾಲಿನಲ್ಲಿ ಕೋಲಾರ ಜಿಲ್ಲೆಯ ಅಲ್ಪಸಂಖ್ಯಾತರ ಮೆಟ್ರಿಕ್ ನಂತರ ಬಾಲಕ/ಬಾಲಕಿಯರ ವಿದ್ಯಾರ್ಥಿನಿಲಯಗಳಾದ ಕೋಲಾರ, ಬಂಗಾರಪೇಟೆ, ಮಾಲೂರು ಮತ್ತು ಮುಳಬಾಗಿಲು ತಾಲ್ಲೂಕುಗಳಲ್ಲಿನ ವಿದ್ಯಾರ್ಥಿನಿಲಯಗಳಿಗೆ ಪಿ.ಯು.ಸಿ ಮತ್ತು ಪಿ.ಯು.ಸಿ ಸಮಾನಾಂತರ ಕೋರ್ಸು, ಸಾಮಾನ್ಯ ಪದವಿ ಮಟ್ಟದ ಕೋರ್ಸ್, ವೃತ್ತಿಪರ ಕೋರ್ಸ್ ಮತ್ತು ಸ್ನಾತಕೋತ್ತರ ಕೋರ್ಸಿನ ವಿದ್ಯಾರ್ಥಿಗಳಿಗೆ ರಾಜ್ಯ ವಿದ್ಯಾರ್ಥಿನಿಲಯ (ಎಸ್.ಹೆಚ್.ಪಿ) ತಂತ್ರಾಂಶದ ಮೂಲಕ ಆನ್‌ಲೈನ್‌ನಲ್ಲಿ ಪ್ರವೇಶಾತಿಗೆ ಅರ್ಜಿಗಳನ್ನು ಸಲ್ಲಿಸಲು ದಿನಾಂಕವನ್ನು ವಿಸ್ತರಿಸಲಾಗಿದೆ. ಈ ಅರ್ಜಿ ಸಲ್ಲಿಸಲು ಮತೀಯ ಅಲ್ಪಸಂಖ್ಯಾತರ ವಿದ್ಯಾರ್ಥಿಗಳಿಗೆ ಶೇ.75 ರಷ್ಟು (ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಸಿಖ್, ಬೌದ್ಧ ಮತ್ತು ಪಾರ್ಸಿ) ಹಾಗೂ ಶೇ.25 ರಷ್ಟು ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ಮೀಸಲಾಗಿರುತ್ತದೆ. ವಿದ್ಯಾರ್ಥಿಗಳು ಅರ್ಜಿಗಳನ್ನು ಸಲ್ಲಿಸಲು ರಾಜ್ಯದ ನಿವಾಸಿಯಾಗಿರಬೇಕು, ಹಿಂದಿನ ವರ್ಷದ ತರಗತಿಯಲ್ಲಿ ವಾರ್ಷಿಕ/ ಸೆಮಿಸ್ಟರ್‌ನಲ್ಲಿ ಎಲ್ಲಾ ವಿಷಯದಲ್ಲಿ ಉತ್ತೀರ್ಣರಾಗಿರಬೇಕು, ವಿದ್ಯಾರ್ಥಿಗಳ ಕುಟುಂಬದ ವಾರ್ಷಿಕ ಆದಾಯವು ರೂ. 2.50 ಲಕ್ಷ ಮೀರಿರಬಾರದು, ಮೂಲಪ್ರತಿಯನ್ನು ವಿದ್ಯಾರ್ಥಿಗಳು ವ್ಯಾಸಂಗ ಮಾಡುತ್ತಿರುವ ಕಾಲೇಜಿನ ಪ್ರಾಂಶುಪಾಲರಿಂದ ದೃಢೀಕರಿಸಿ, ಆದಾಯ ಪ್ರಮಾಣ ಪತ್ರ ಹಿಂದಿನ ವರ್ಷದ ಅಂಕಪಟ್ಟಿ, ಆಧಾರ್ ಕಾರ್ಡ್, ಇತರೆ ದಾಖಲೆಗಳನ್ನು ಸಲ್ಲಿಸುವುದು. ರಾಜ್ಯ ವಿದ್ಯಾರ್ಥಿನಿಲಯ ಆನ್‌ಲೈನ್ ಪೋರ್ಟಲ್‌ನಲ್ಲಿ https://shp.karnataka.gov.in ಅರ್ಜಿ ನವೆಂಬರ್ 11 ರೊಳಗೆ ಸಲ್ಲಿಸಬಹುದು. 'ಚ್ಚಿನ ಮಾಹಿತಿಗಾಗಿ ಜಿಲ್ಲಾ ಅಧಿಕಾರಿಗಳ ಕಾರ್ಯಾಲಯ, ಕೋಲಾರ ದೂರವಾಣಿ ಸಂ: 08152-295257 ಮತ್ತು ಜಿಲ್ಲಾ ಮಾಹಿತಿ ಕೇಂದ್ರ, ಕೋಲಾರ -7760391781 ಯನ್ನು ಸಂಪರ್ಕಿಸಬಹುದು ಎಂದು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಗಿರಿವಿಧಾರರು ಕಾನೂನು ಉಲ್ಲಂಘಿಸುವ ಲೇವಾದೇವಿದಾರರಿಗೆ ಸೂಚನೆ

**ಕೋಲಾರ:** ಕೋಲಾರ ಜಿಲ್ಲೆಯಲ್ಲಿ ಕರ್ನಾಟಕ ಲೇವಾದೇವಿ/ಗಿರವಿದಾರರ ಕಾಯ್ದೆ 1961 ಮತ್ತು ನಿಯಮ 1966 ರೀತ್ಯಾ ಪರವಾನಿಗೆ ಪಡೆದು ಕಾರ್ಯ ನಿರ್ವಹಿಸುತ್ತಿರುವ ಗಿರಿವಿದಾರರ/ಲೇವಾದೇವಿದಾರರ ಕಾಯ್ದೆ ಅನುಸಾರ ಎಲ್ಲಾ ಗಿರಿವಿದಾರರುಗಳು/ ಲೇವಾದೇವಿದಾರರುಗಳು ನಿಮ್ಮ ಸಂಸ್ಥೆಯ ಮುಂದೆ ಬಡ್ಡಿ ದರವನ್ನು ಪ್ರಕಟಿಸಲು ಹಾಗೂ ಆಯಾ ದಿನದ ವ್ಯವಹಾರದ ಪಟ್ಟಿಯನ್ನು ಪ್ರದರ್ಶನ ಮಾಡಲು ಹಾಗೂ ನಿಗಧಿತ ಅವಧಿಯೊಳಗೆ ಅಡಮಾನ ಇಟ್ಟಿರುವ ವಸ್ತುಗಳನ್ನು ವಿಲೇವಾರಿ ಸೂಕ್ತ ಕ್ರಮಗಳನ್ನು ಸೂಚಿಸಿದೆ. ತಪ್ಪಿದಲ್ಲಿ ಕರ್ನಾಟಕ ಗಿರವಿದಾರರ ಕಾಯ್ದೆ 1961 ಮತ್ತು ನಿಯಮ 1966 ರೀತ್ಯಾ ಕಾನೂನು ಕ್ರಮವಿಡಲಾಗುವುದೆಂದು ನಗರ ಉಪ-ವಿಭಾಗದ ಲೇವಾದೇವಿಗಾರರ ಸಹಾಯಕ ನಿಬಂಧಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



ವಿಜಯಪುರ ಪಟ್ಟಣ ಸಮೀಪದ ಆವತಿ ಗ್ರಾಮದಲ್ಲಿ ಆರ್ಯ ವೈಶ್ಯ ಸಂಘ ಮತ್ತು ಆರ್ಯ ವೈಶ್ಯ ಮಹಿಳಾ ಸಂಘದ ವತಿಯಿಂದ ಶ್ರೀ ಕನ್ನಿಕಾಪರಮೇಶ್ವರಿ ದೇವಾಲಯದಲ್ಲಿ ಹೆಣ್ಣು ಮಕ್ಕಳಿಗೆ ಕನ್ನಿಕೆ ಪೂಜೆ ಆಯೋಜಿಸಲಾಗಿದ್ದು, ಕನ್ನಿಕಾ ಪರಮೇಶ್ವರಿ ದೇವರಿಗೆ ದರ್ಬಾರ್ ಅಲಂಕಾರ ಕೂಡ ಏರ್ಪಡಿಸಲಾಗಿತ್ತು. ಈ ಸಂದರ್ಭದಲ್ಲಿ ಆರ್ಯ ವೈಶ್ಯ ಸಂಘದ ಅಧ್ಯಕ್ಷ ಎನ್ ಆರ್ ಪ್ರಕಾಶ್, ಕಾರ್ಯದರ್ಶಿ ಎನ್ ಆರ್ ಅಶ್ವಥ್ ನಾರಾಯಣ್ ಮೂರ್ತಿ ಹಾಗೂ ಸಂಘದ ಸದಸ್ಯರುಗಳು ಉಪಸ್ಥಿತರಿದ್ದರು

## ಅರ್ಜಿಅಹ್ವಾನ

**ಮಂಡ್ಯ:** ಮಂಡ್ಯಜಿಲ್ಲೆಯಅಲ್ಪಸಂಖ್ಯಾತರಕಲ್ಯಾಣಇಲಾಖೆಯಡಿಕಾರ್ಯನಿರ್ವಹಿಸುತ್ತಿರುವ ಮೆಟ್ರಿಕ್ ನಂತರದ ಬಾಲಕ / ಬಾಲಕಿಯರ ವಿದ್ಯಾರ್ಥಿನಿಲಯಗಳಿಗೆ (ಪಿ.ಯು.ಸಿ ಮತ್ತು ಪಿ.ಯು.ಸಿ ಸಮಾನಾಂತರ ಕೋರ್ಸಿನ,ಸಾಮಾನ್ಯ ಪದವಿಮಟ್ಟದಕೋರ್ಸ್,ವೃತ್ತಿಪರಕೋರ್ಸ್ಮತ್ತು ಸ್ನಾತಕೋತ್ತರ ಕೋರ್ಸಿನ ವಿದ್ಯಾರ್ಥಿಗಳಿಗೆ ಮಾತ್ರ ) 2024-25 ನೇ ಸಾಲಿನ ಪ್ರವೇಶಾತಿಗೆಆನ್ಲೈನ್ ಮೂಲಕ ಅರ್ಜಿಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲುನವೆಂಬರ್ 11 ರಂದುಕೊನೆಯ ದಿನವಾಗಿದ್ದು,ರಾಜ್ಯ ವಿದ್ಯಾರ್ಥಿನಿಲಯತಂತ್ರಾಂಶ Àhttps://shp.Karnataka.gov.in ವೆಬ್ ಸೈಟ್ ನಲ್ಲಿಅರ್ಜಿ ಸಲ್ಲಿಸಬಹುದು. ಹೆಚ್ಚಿನ ವ ಾಹಿತಿಗಾಗಿವಂಡ್ಯ ಜಿಲ್ಲಾ ಅಲ್ಪಸಂಖ್ಯಾತರ ಅಧಿಕಾರಿಗಳ ಕಛೇರಿದೂ.ಸಂ.08232-297240, ಮಂಡ್ಯ ವಿಭಾಗತಾಲ್ಲೂಕು ವಿಸ್ತರಣಾಧಿಕಾರಿದೂ. ಸಂ.7259138868, ಪಾಂಡವಪುರ ವಿಭಾಗತಾಲ್ಲೂಕು ವಿಸ್ತರಣಾಧಿಕಾರಿದೂ. ಸಂ.8892212574 ಅನ್ನು ಸಂಪರ್ಕಿಸಬಹುದು ವ ಂಡ್ಯಅಲ್ಪಸಂಖ್ಯಾತರಕಲ್ಯಾಣಇಲಾಖೆಯಜಿಲ್ಲಾ ಅಧಿಕಾರಿಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕೋಳಿ ಸಾಕಾಣಿಕೆ ಉಚಿತ ತರಬೇತಿಗೆ ಅರ್ಜಿ ಆಹ್ವಾನ

**ಬೆಂಗಳೂರು ಗ್ರಾಮಾಂತರ:** ಶ್ರೀ ಧರ್ಮಸ್ಥಳ ಮಂಜುನಾಥೇಶ್ವರ ಶಿಕ್ಷಣ ಟ್ರಸ್ಟ್ ಮತ್ತು ಕೆನರಾ ಬ್ಯಾಂಕ್ನ ಸಹಯೋಗದಲ್ಲಿ ನಡೆಸುತ್ತಿರುವ ರುಡ್ಸೆಟ್ ಸಂಸ್ಥೆಯ ವತಿಯಿಂದ ಹಮ್ಮಿಕೊಂಡಿರುವ ಕೋಳಿ ಸಾಕಾಣಿಕೆ ಕುರಿತ 10 ದಿನಗಳ ಉಚಿತ ತರಬೇತಿಯು ಅರ್ಜಿ ಆಹ್ವಾನಿಸಲಾಗಿದ್ದು, ಗ್ರಾಮೀಣ ಆಸಕ್ತ ನಿರುದ್ಯೋಗಿ ಯುವಕ-ಯುವತಿಯರು ಅರ್ಜಿ ಸಲ್ಲಿಸಬಹುದಾಗಿದೆ.

ಆಸಕ್ತರು 18 ರಿಂದ 45 ವರ್ಷ ವಯೋಮಾನದವರಾಗಿದ್ದು, ಕನ್ನಡ ಭಾಷೆ ಓದಲು ಮತ್ತು ಬರೆಯಲು ಬಲ್ಲವರಾಗಿರಬೇಕು. ಅಭ್ಯರ್ಥಿಗಳು ಆಧಾರ್ ಕಾರ್ಡ್ನ್ನು ಹೊಂದಿರಬೇಕು



ಹಾಗೂ ಬಿಪಿಎಲ್ ಕಾರ್ಡ್ ಅನ್ನು ಹೊಂದಿರುವ ಗ್ರಾಮೀಣ ಪ್ರದೇಶದ ಅಭ್ಯರ್ಥಿಗಳಿಗೆ ಆದ್ಯತೆ ನೀಡಲಾಗುವುದು. ತರಬೇತಿಯು ಕಡ್ಡಾಯವಾಗಿ ವಸತಿಯುತವಾಗಿದ್ದು, ತರಬೇತಿಯ ಅವಧಿಯಲ್ಲಿ ಉಚಿತವಾಗಿ ಊಟ ಮತ್ತು ವಸತಿ ನೀಡಲಾಗುವುದು ಹಾಗೂ ತರಬೇತಿ ಪೂರ್ಣಗೊಂಡ ನಂತರ ಕೇಂದ್ರ ಸರ್ಕಾರದ ಗ್ರಾಮೀಣಾಭಿವೃದ್ಧಿ ಸಚಿವಾಲಯದಿಂದ ಪ್ರಮಾಣಪತ್ರವನ್ನು ವಿತರಿಸಲಾಗುವುದು. ಅರ್ಜಿ ಸಲ್ಲಿಸಲು ಅಕ್ಟೋಬರ್ 25 ಕೊನೆಯ ದಿನವಾಗಿದೆ. ಆಸಕ್ತರು ಅರ್ಜಿ ಸಲ್ಲಿಸಲು ಹಾಗೂ ಹೆಚ್ಚಿನ ಮಾಹಿತಿಗಾಗಿ ರುಡ್ಸೆಟ್ ಸಂಸ್ಥೆ, ಅರಿಶಿನಕುಂಟೆ, ನೆಲಮಂಗಲ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ, ಮೊಬೈಲ್ ಸಂಖ್ಯೆ: 9740982585, 9380162042 ಅನ್ನು ಸಂಪರ್ಕಿಸಬಹುದಾಗಿದೆ ಎಂದು ರುಡ್ಸೆಟ್ ಸಂಸ್ಥೆಯ ಬೆಂಗಳೂರು ಶಾಖೆಯ ನಿರ್ದೇಶಕರಾದ ರವಿಕುಮಾರ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮುಳ್ಳುಗಳು ಕಷ್ಟಕದ ಪ್ರತೀಕ, ಮೆಟ್ಟಿ ನಿಲ್ಲುವಂತ ಶಕ್ತಿ ನೀಡುವವಳೇ ಚೌಡೇಶ್ವರಿದೇವಿ

**ತಿಪಟೂರು :** ತಾಲ್ಲೂಕಿನ ದಸರಿಘಟ್ಟ ಆದಿಚುಂಚನಗಿರಿ ಶಾಖಾಮಠದಲ್ಲಿ ದಸರಾ ಹಬ್ಬದ ಪ್ರಯುಕ್ತ ಚೌಡೇಶ್ವರಿ ದೇವಿಯವರ 32ನೇ ವರ್ಷದ ಮುಳ್ಳುಗದ್ದಿಗೆ ಉತ್ಸವ ಹಾಗೂ ಧಾರ್ಮಿಕ ಸಮಾರಂಭವನ್ನು ಹಮ್ಮಿಕೊಳ್ಳಲಾಗಿತ್ತು.

ಶನಿವಾರ ಏರ್ಪಡಿಸಿದ್ದ ಧಾರ್ಮಿಕ ಕಾರ್ಯಕ್ರಮದಲ್ಲಿ ಆದಿಚುಂಚನಗಿರಿ ಪೀಠಾಧ್ಯಕ್ಷ ಡಾ. ನಿರ್ಮಲಾನಂದನಾಥ ಸ್ವಾಮೀಜಿ ಭಕ್ತರನ್ನು ಉದ್ದೇಶಿಸಿ ಆಶೀರ್ವಚನ ನೀಡಿ ಮನುಷ್ಯನಲ್ಲಿ ಕಷ್ಟಕಾರ್ಪಣ್ಯಗಳು ದೂರವಾಗಲು ಭಗವಂತನ ನಾಮಸ್ಮರಣೆ ಅತಿಮುಖ್ಯವಾಗಿದೆ. ಜಗತ್ತಿನ ಸೃಷ್ಟಿಗೆ ಭಗವಂತನೇ ನೇರ ಕಾರಣ. ಮುಳ್ಳುಗಳು ಕಷ್ಟಕದ ಪ್ರತೀಕ. ಅದನ್ನು ಮೆಟ್ಟಿ ನಿಲ್ಲುವಂತ ಶಕ್ತಿ ನೀಡುವವಳೇ ಚೌಡೇಶ್ವರಿದೇವಿ. ದೇವಿ ಪವಾಡದಿಂದ ಮುಳ್ಳುಗಳಂತ ಕಷ್ಟಗಳ ಮೇಲೆ ನಡೆಯುವಾಗ ಆಕೆಯ ಸ್ಮರಣೆ ಮಾಡಿದರೆ ಕಷ್ಟಗಳು ಮಂಜಿನಂತೆ ಕರಗುತ್ತವೆ. ಸಂಸಾರದ ಸಾಗರದಲ್ಲಿ ಸಹ ಕಷ್ಟಗಳು ನಿವಾರಣೆಯಾಗಲು ದೈವೀಭಕ್ತಿ ಅಗತ್ಯ. ಸುಖ ಹಾಗೂ ದುಃಖಗಳು ಬಂದಾಗ ದೇವರ ಸ್ಮರಣೆ ಮಾಡಬೇಕು. ಜಗತ್ತಿನ ಸೃಷ್ಟಿಕರ್ತ ಪರಮಾತ್ಮನಾದ್ದರಿಂದ ಮನುಷ್ಯನಾದವನು ಧರ್ಮದಾನಗಳಿಂದ ಬದುಕಬೇಕು. ವಿಜ್ಞಾನ ಎಷ್ಟೇ ಮುಂದುವರೆದರೂ ಜ್ಞಾನವೆಂಬುದು ಮಸುಕಾಗಿದೆ. ಪ್ರಕೃತಿಯ ಮುಂದೆ ಮನುಷ್ಯ ಕ್ಷಣಿಕನಾಗಿದ್ದಾನೆ. ಅಂತಃಕರಣ ಶುದ್ಧಿಗೊಂಡರೆ ಮತ್ತಷ್ಟು ಶಕ್ತಿ ಪಡೆಯಬಹುದು. ಮನುಷ್ಯನ ಪಯಣ ಯಾವಾಗಲೂ ಒಳ್ಳೆಯ ದಿಕ್ಕಿನಲ್ಲಿ ಸಾಗಲಿ. ದ್ವೇಷ, ಅಸೂಹೆ, ಸ್ವಾರ್ಥತೆಯನ್ನು ಬಿಟ್ಟು ನಡೆದಾಗ ದೇವಿಯ ಆಶೀರ್ವಾದದಿಂದ ಜಯ ಸಾಧ್ಯವಾಗುತ್ತದೆ. ನಮ್ಮ ಕ್ಷೇತ್ರದ ಚೌಡೇಶ್ವರಿ ದೇವಿಗೆ ಅನೇಕರು ಭಕ್ತರಾಗಿದ್ದು ಶ್ರೀಕ್ಷೇತ್ರ ದಸರೀಘಟ್ಟ ಪುಣ್ಯಕ್ಷೇತ್ರದ ಅಭಿವೃದ್ದಿಗೆ ಚಂದ್ರಶೇಖರನಾಥ ಸ್ವಾಮೀಜಿ, ಟ್ರಸ್ಟಿಗಳು, ಗ್ರಾಮಸ್ಥರು ಇಲ್ಲಿನ ರಾಜಕಾರಣಿಗಳು ಶ್ರದ್ಧೆಯಿಂದ ಕೆಲಸ ಮಾಡುತ್ತಿದ್ದಾರೆ ಎಂದರು.



ವಕೀಲ ಡಿ.ಎಲ್.ಜಗದೀಶ್ ಮಾತನಾಡಿ ನವರಾತ್ರಿಯ ಸಂದರ್ಭದಲ್ಲಿ ಮನುಷ್ಯನಲ್ಲಿರುವ ಕೆಟ್ಟ ಗುಣಗಳನ್ನು ಹೋಗಲಾಡಿಸಿ ಉತ್ತಮ ಜೀವನವನ್ನು ನಡೆಸಲು ದೇವಿಯ ಆಶೀರ್ವಾದ ಅತ್ಯವಶ್ಯವಾಗಿದೆ. ಪ್ರತಿಯೊಬ್ಬರಲ್ಲಿಯೂ ಆಧ್ಯಾತ್ಮಿಕತೆಯ ಕಡೆಗೆ ಒಲವು ಹೆಚ್ಚಾಗಿದ್ದು, ಶ್ರದ್ಧಾ ಭಕ್ತಿಯಿಂದ ನಡೆದಾಗ ದೇವಿಯೂ ಎಂದಿಗೂ ಯಾರನ್ನು ಕೈಬಿಡುವುದಿಲ್ಲ. ಆದಿಚುಂಚನಗಿರಿ ಮಠಗಳು ದೇಶದಾದ್ಯಂತ ಭಕ್ತರಿಗೆ ಅನೇಕ ಸೌಕರ್ಯಗಳನ್ನು ನೀಡುತ್ತಿದ್ದು ಇನ್ನೂ ಹೆಚ್ಚಿನ ಶಾಖಾಮಠಗಳು ಸ್ಥಾಪನೆಯಾಗಲಿ ಎಂದರು.

ಸಮಾರಂಭದಲ್ಲಿ ಬಿಜಿಎಸ್ ಶಿಕ್ಷಣ ಸಂಸ್ಥೆಯ ವ್ಯವಸ್ಥಾಪಕ ನಿರ್ದೇಶಕರಾದ ಪ್ರಕಾಶನಾಥ ಸ್ವಾಮೀಜಿ, ದಸರೀಘಟ್ಟ ಶಾಖಾಮಠದ ಚಂದ್ರಶೇಖರನಾಥ ಸ್ವಾಮೀಜಿ, ಮಂಗಳೂರು ಶಾಖಾಮಠದ ಡಾ.ಧರ್ಮಪಾಲನಾಥ ಸ್ವಾಮೀಜಿ, ಹಾಸನದ ಶಂಭುನಾಥ ಸ್ವಾಮೀಜಿ, ಹೊಸಕೊಪ್ಪಲು ಮಠದ ಶ್ರೀ ಬಸವೇಶ್ವರಚೈತನ್ಯ ಸ್ವಾಮೀಜಿ, ಚೈತನ್ಯನಾಥ ಸ್ವಾಮೀಜಿ, ಮಠದ ಟ್ರಸ್ಟಿ ಡಾ. ಜಿತೇಂದ್ರ, ಗುಡಿಗೌಡ ಕುಮಾರಸ್ವಾಮಿ, ಶ್ರೀರಂಗ ಆಸ್ಪತ್ರೆಯ ವೈದ್ಯ ಡಾ.ವಿವೇಚನ್, ಸೇರಿದಂತೆ ಗ್ರಾಮಸ್ಥರು ಸಾವಿರಾರು ಭಕ್ತಾಧಿಗಳು ಇದ್ದರು.

ದಸರಿಘಟ್ಟ ಆದಿಚುಂಚನಗಿರಿ ಶಾಖಾಮಠದಲ್ಲಿ ದಸರಾ ಹಬ್ಬದ ಪ್ರಯುಕ್ತ ಮುಳ್ಳುಗದ್ದಿಗೆ ಆದಿಚುಂಚನಗಿರಿ ಪೀಠಾಧ್ಯಕ್ಷ ಡಾ. ನಿರ್ಮಲಾನಂದನಾಥ ಸ್ವಾಮೀಜಿ ಪೂಜೆ ಸಲ್ಲಿಸುತ್ತಿರುವುದು.

## ಚೌಡೇಶ್ವರಿದೇವಿ ಮುಳ್ಳುಗದ್ದಿಗೆ ಉತ್ಸವ



**ತಿಪಟೂರು :** ನಾಡಿನ ಶಕ್ತಿದೇವತೆಗಳಲ್ಲಿ ಒಂದಾದ ತಾಲ್ಲೂಕಿನ ದಸರೀಘಟ್ಟದ ಆದಿಚುಂಚನಗಿರಿ ಶಾಖಾಮಠದ ಚೌಡೇಶ್ವರಿ ದೇವಿಯ ಮುಳ್ಳುಗದ್ದಿಗೆ ಉತ್ಸವ ಆಳೆತ್ತರದ ಗಟ್ಟಿಕಾರೆಮುಳ್ಳಿನ ರಾಶಿಯ ಮೇಲೆ ವಿಜಯದಶಮಿಯ ಶನಿವಾರ ಅತ್ಯಂತ ವೈಭವ ಮತ್ತು ಭಕ್ತಿ ಪರಾಕಾಷ್ಠೆಯಿಂದ ನಡೆಯಿತು. ಸುಮಾರು 10 ಮತ್ತು 8 ಅಡಿಯಷ್ಟು ಉದ್ದ-ಅಗಲದ 8 ಅಡಿ ಎತ್ತರದ ಜಾಗದಲ್ಲಿ ಆಳೆತ್ತರದಷ್ಟು ಗಟ್ಟಿ ಕಾರೆಮುಳ್ಳಿನ ಗಿಡಗಳನ್ನು ರಾಶಿ ಹಾಕಲಾಗುತ್ತದೆ. ಈ ಮುಳ್ಳಿನ ರಾಶಿಯ ಮೇಲೆ ಚೌಡೇಶ್ವರಿ ದೇವಿಯವರ ಉತ್ಸವ ಮೂರ್ತಿಯನ್ನು ಆರೇಳು ಭಕ್ತರು ಹೊತ್ತುಕೊಂಡ ಅತ್ಯಂತ ಭಕ್ತಿಶ್ರದ್ಧೆಯಿಂದ ಸರಾಗವಾಗಿ ಮುಳ್ಳಿನ ರಾಶಿಯನ್ನು ತುಳಿಯುತ್ತಾ ಒಂದು ಭಾಗದಿಂದ ಮತ್ತೊಂದು ಭಾಗಕ್ಕೆ ಮೂರು ಬಾರಿ ಹತ್ತಿ ನಡೆಯುತ್ತಾರೆ. ಇದರ ಜೊತೆಗೆ ಹರಕೆ ಮಾಡಿಕೊಂಡ ಭಕ್ತ ಸಮೂಹವೂ ದೇವಿಯ ಹಿಂದೆ ನಡೆದುಕೊಂಡು ಹೋಗುವ ಮೂಲಕ ತಮ್ಮ ಹರಕೆ ತೀರಿಸಿ ಧನ್ಯತಾಬಾವ ಮೆರೆಯುತ್ತಾರೆ. ಈ ಬಾರಿಯ ಮುಳ್ಳುಗದ್ದುಗೆಗೆ ಸಹಸ್ರಾರು ಮಂದಿ ಭಕ್ತಾಧಿಗಳು ಭಾಗವಹಿಸಿದ್ದರು.

## ಆಯುಧ ಪೂಜೆ ಆಚರಣೆ

**ಮಾಲೂರು:** ಆಯುಧ ಪೂಜೆ ಅಂಗವಾಗಿ ಮಡಿವಾಳ ಮತ್ತು ದೊಡ್ಡದೇನಹಳ್ಳಿ ಗ್ರಾಮದಲ್ಲಿ ಲಾರಿಗಳು ಮತ್ತು ಆಯುಧಗಳಿಗೆ ವಿಶೇಷ ಪೂಜೆ ಸಲ್ಲಿಸಲಾಯಿತು. ಪ್ರತಿವರ್ಷದಂತೆ ಈ ವರ್ಷವು ತಮಗಾಗಿ ದುಡಿದಂತಹ ಲಾರಿಗಳಿಗೆ ಅದ್ದೂರಿಯಾಗಿ ಸಿಂಗರಿಸಿ, ಪೂಜೆಯನ್ನು ನೆರವೇರಸಲಾಯಿತು. ಈ ಸಂದರ್ಭದಲ್ಲಿ ಡಿಸಿಎಂ ಮುನಿರಾಜು ಹಾಗೂ ಮೋಹನ್ ಎಂಟಪ್ರೈಸಸ್ ರವರ ವತಿಯಿಂದ ಲಾರಿ ಕಾರ್ಮಿಕರಿಗೆ ಟೀ-ಶರ್ಟ್ ವಿತರಣೆ ಮಾಡಿ ತೀರ್ಥ ಪ್ರಸಾದವನ್ನು ವಿತರಿಸಲಾಯಿತು.



## ಕೌದಳ್ಳಿ ಬಳಿ ಸ್ಫೋಟಕ ಪತ್ತೆ

**ಚಾಮರಾಜನಗರ :** ಕಾಡು ಹಂದಿ ಹಾವಳಿ ತಡೆಗಟ್ಟಲು ಸಿಡಿಮದ್ದು ಹಾಕುತ್ತಿರುವ ಘಟನೆ ಚಾಮರಾಜನಗರ ಜಿಲ್ಲೆಯ ಹನೂರು ತಾಲ್ಲೂಕಿನ ಕೌದಳ್ಳಿ ಬಳಿ ಪತ್ತೆಯಾಗಿದೆ.



ಚಾಮರಾಜನಗರ ಜಿಲ್ಲೆಯ ಹನೂರು ತಾಲ್ಲೂಕಿನ ಕೌದಳ್ಳಿ ಸಮೀಪದ ದೊಡ್ಡ ಕೆರೆ ಸಮೀಪ ಹಂದಿ ಹಾವಳಿ ತಡೆಗಟ್ಟಲು ಸಾರ್ವಜನಿಕರು ಸ್ಫೋಟಕವನ್ನು ಗುಡ್ಡೆ ಮಾಡಿದ್ದು, ಹಂದಿ ಆಹಾರಕ್ಕಾಗಿ ಬಂದಾಗ ಅದು ಸಿಡಿದು ಸಾವನ್ನಪ್ಪಲಿದೆ. ಶನಿವಾರ ರಾತ್ರಿಯೂ ಸಹ ಕೌದಳ್ಳಿ ಸಮೀಪದ ದೊಡ್ಡಕೆರೆ ಸಮೀಪದ ಮುಸುಕಿನ ಜೋಳದ ಸಿಂಡಿನ ಗುಡ್ಡದ ಕೆಳಗೆ ಸ್ಫೋಟಕ ಇಟ್ಟ ಕಿಡಿಗೇಡಿಗಳ ಕೃತ್ಯಕ್ಕೆ ಕಾಡು ಹಂದಿಯೊಂದು ಬಲಿಯಾಗಿದೆ. ಘಟನಾ ಸ್ಥಳಕ್ಕೆ ಅರಣ್ಯ ಇಲಾಖೆಯ ಸಿಬ್ಬಂದಿಗಳು ಭೇಟಿ ನೀಡಿ ಪರಿಶೀಲಿಸಿ, ಸ್ಫೋಟಕದಿಂದ ಬಲಿಯಾಗಿರುವ ಹಂದಿಯ ಕಳೇಬರವನ್ನು ಸಂಗ್ರಹಿಸಿದರು. ಸಾರ್ವಜನಿಕರು ರಾತ್ರಿವೇಲೆ ಸಂಚಾರ ಮಾಡುವಾಗ ಎಚ್ಚರಿಕೆಯಿಂದ ಸಂಚಾರ ಮಾಡುವಂತೆ ಮನವಿ ಮಾಡಿದ್ದಾರೆ.

## ಮಲೆ ಮಹದೇಶ್ವರಸ್ವಾಮಿ ಕ್ಷೇತ್ರದಲ್ಲಿ ಜಾತ್ರೆ

**ಬೆಂಗಳೂರು:** ಶ್ರೀ ಮಲೈ ಮಹದೇಶ್ವರಸ್ವಾಮಿ ದೇವಸ್ಥಾನವು ಪುರಾತನ ಕಾಲದಿಂದಲೂ ಬಹಳ ಹೆಸರುವಾಸಿಯಾದ ಪರಮ ಪವಿತ್ರ ಕ್ಷೇತ್ರವಾಗಿದೆ. ಈ ಕ್ಷೇತ್ರಕ್ಕೆ ಕರ್ನಾಟಕ, ತಮಿಳುನಾಡು ಹಾಗೂ ಇತರೆ ರಾಜ್ಯಗಳ ನಾನಾ ಕಡೆಗಳಿಂದ ಜಾತ್ರೆಗಳಿಗೆ ಭಕ್ತಾಧಿಗಳು ಆಗಮಿಸಿ ಸೇವಾ ಕೈಂಕರ್ಯಗಳನ್ನು ನೆರವೇರಿಸಿಕೊಂಡು ಪುನೀತರಾಗುತ್ತಿದ್ದಾರೆ. ಈ ದೇವಾಲಯದಲ್ಲಿ 2024 ನೇ ಸಾಲಿನಲ್ಲಿ ವಾರ್ಷಿಕ ಜಾತ್ರೆ, ಕಾರ್ಯಕ್ರಮಗಳು ವಿಜೃಂಭಣೆಯಿಂದ ಜರುಗಲಿವೆ. ಅಕ್ಟೋಬರ್ 29 ರಿಂದ ನವೆಂಬರ್ 2 ರವರೆಗೆ ನಡೆಯಲಿದೆ. ಒಂದನೇ ಕಾರ್ತೀಕ ಸೋಮವಾರ ನವೆಂಬರ್ 3 ರಿಂದ 4ರವರೆಗೆ, ಎರಡನೇ ಕಾರ್ತೀಕ ಸೋಮವಾರ ನವೆಂಬರ್ 10 ರಿಂದ 11ರವರೆಗೆ, ಮೂರನೇ ಕಾರ್ತೀಕ ಸೋಮವಾರ ನವೆಂಬರ್ 17 ರಿಂದ 18 ರವರೆಗೆ, ನಾಲ್ಕನೇ ಕಾರ್ತೀಕ ಸೋಮವಾರ ನವೆಂಬರ್ 24 ರಿಂದ 25 ರವರೆಗೆ ನಡೆಯಲಿದ್ದು, ನವೆಂಬರ್ 29 ರಿಂದ ಡಿಸೆಂಬರ್ 2 ರವರೆಗೆ ಎಣ್ಣೆ ಮಜ್ಜನ ಮತ್ತು ಅಮಾವಾಸ್ಯೆ ಆಚರಿಸಲಾಗುತ್ತದೆ ಎಂದು ಶ್ರೀ ಮಲೈ ಮಹದೇಶ್ವರಸ್ವಾಮಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರದ ಕಾರ್ಯದರ್ಶಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವಿದ್ಯಾರ್ಥಿನಿಲಯಗಳಿಗೆ ಅರ್ಜಿ ಸಲ್ಲಿಸಲು ಅವಧಿ ವಿಸ್ತರಣೆ

**ರಾಮನಗರ:** 2024-25ನೇ ಸಾಲಿನಲ್ಲಿ ರಾಮನಗರ ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ವ್ಯಾಪ್ತಿಯಲ್ಲಿ (ರಾಮನಗರ, ಚನ್ನಪಟ್ಟಣ, ಕನಕಪುರ ಮತ್ತು ಮಾಗಡಿ ತಾಲ್ಲೂಕು) ಬಾಲಕ/ಬಾಲಕಿಯರಿಗೆ ಪ್ರತ್ಯೇಕ ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳು ಕಾರ್ಯನಿರ್ವಹಿಸುತ್ತಿದ್ದು, ಮೆಟ್ರಿಕ್ ನಂತರದ ಕೋರ್ಸುಗಳಲ್ಲಿ (ಪಿಯುಸಿ ಮತ್ತು ಪಿ.ಯು.ಸಿ ಸಮಾನಾಂತರ ಕೋರ್ಸಿನ, ಸಾಮಾನ್ಯ ಪದವಿ ಮಟ್ಟದ ಕೋರ್ಸು, ವೃತ್ತಿಪರ ಕೋರ್ಸು ಮತ್ತು ಸ್ನಾತಕೋತ್ತರ ಕೋರ್ಸು) ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಂದ ಪ್ರವೇಶಾತಿಗಾಗಿ ರಾಜ್ಯ ವಿದ್ಯಾರ್ಥಿನಿಲಯ ತಂತ್ರಾಂಶದಲ್ಲಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಲು ನವೆಂಬರ್ 11ರ ವರೆಗೆ ಅವಧಿ ವಿಸ್ತರಿಸಲಾಗಿದೆ. ಅರ್ಜಿಯನ್ನು https://shp.karnataka.gov.inಮೂಲಕ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗೆ ನಿರ್ದೇಶನಾಲಯದ ವೆಬ್‌ಸೈಟ್ https://dom.karnataka.gov.in, ರಾಮನಗರ ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಅಧಿಕಾರಿಗಳ ಕಚೇರಿ, ಕೊಠಡಿ ಸಂಖ್ಯೆ 308, 2ನೇ ಮಹಡಿ, ಕಂದಾಯಭವನ, ಬಿ.ಎಂ. ರಸ್ತೆ, ರಾಮನಗರ ಇಲ್ಲಿಗೆ ಕಚೇರಿ ವೇಳೆಯಲ್ಲಿ ಖುದ್ದು ಸಂಪರ್ಕಿಸಬಹುದು ಅಥವಾ ದೂ. ಸಂಖ್ಯೆ: 080-27271104, ಅಲ್ಪಸಂಖ್ಯಾತರ ಸಹಾಯವಾಣಿ ಸಂಖ್ಯೆ; 8277799990 ಹಾಗೂ ಹತ್ತಿರದ ಮಾಹಿತಿ ಕೇಂದ್ರವನ್ನು ಸಂಪರ್ಕಿಸುವಂತೆ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ವಾಣಿಜ್ಯ ಸಂಕೀರ್ಣ ವನ್ನು ಲೋಕಾರ್ಪಣೆ ಮಾಡಿ ಸಿಎಂ ಸಿದ್ದರಾಮಯ್ಯ ಭರವಸೆ

# ಸವದತ್ತಿಯಲ್ಲಿ 6 ಸಾವಿರ ಭಕ್ತರು ಉಳಿಯಲು ವ್ಯವಸ್ಥೆ

**ಬೆಳಗಾವಿ:** ಸವದತ್ತಿ ರೇಣುಕಾ ಯಲ್ಲಮ್ಮನ ಗುಡ್ಡದಲ್ಲಿ, ಮಹಿಳಾ ಅಭಿವೃದ್ಧಿ ನಿಗಮದಿಂದ ನಿರ್ಮಿಸಲಾಗಿರುವ ವಾಣಿಜ್ಯ ಸಂಕೀರ್ಣ ವನ್ನು ಲೋಕಾರ್ಪಣೆ ಮಾಡಿ ಮಾತನಾಡಿದ ಸಿಎಂ ಸಿದ್ದರಾಮಯ್ಯ, ಮುಂದಿನ ವರ್ಷದ ವೇಳೆಗೆ 6 ಸಾವಿರ ಭಕ್ತರು ಉಳಿಯಲು ವ್ಯವಸ್ಥೆ ರೂಪಿಸುತ್ತೇವೆ ಎಂದು ಭರವಸೆ ನೀಡಿದ್ದಾರೆ.

ರೇಣುಕಾ ಯಲ್ಲಮ್ಮ ಕ್ಷೇತ್ರದ ಅಭಿವೃದ್ಧಿಗೆ ಸರ್ಕಾರ ಸಿದ್ಧವಾಗಿದೆ. ಇದಕ್ಕೆ ನಿಮ್ಮ ಸಹಕಾರ ಅಗತ್ಯ. ದೇವರು-ಧರ್ಮದ ಹೆಸರಲ್ಲಿ ದೇಶವನ್ನು-ರಾಜ್ಯವನ್ನು ಒಡೆಯುವ ಬಿಜೆಪಿಯನ್ನು ಮೊದಲು ದೂರವಿಡಿ ಎಂದು ಜನರಿಗೆ ಕರೆ ಕೊಟ್ಟಿದ್ದಾರೆ.

ಈ ಮಧ್ಯೆ ಸರ್ಕಾರದ ಶಕ್ತಿ ಯೋಜನೆಯಿಂದಾಗಿ ಇದುವರೆಗೂ ರಾಜ್ಯದಲ್ಲಿ ಮಹಿಳೆಯರು 300 ಕೋಟಿ ಉಚಿತ ಟ್ರಿಪ್ ಮಾಡಿದ್ದಾರೆ. ಇವರಲ್ಲಿ ಲಕ್ಷಾಂತರ ಮಂದಿ ತಾಯಿ ರೇಣುಕಾ ಯಲ್ಲಮ್ಮನ ದರ್ಶನ ಕೂಡ ಪಡೆದಿದ್ದಾರೆ ಎಂದಿದ್ದಾರೆ. ಜೊತೆಗೆ ಗೃಹಲಕ್ಷ್ಮಿ ಹಣವನ್ನು ಕೂಡಿಸಿಟ್ಟು ಎಷ್ಟೋ ಮಹಿಳೆಯರು ಬಳೆ ಅಂಗಡಿ ಹಾಕಿಕೊಂದಿದ್ದಾರೆ, ಟೈಲರಿಂಗ್ ಮೆಷಿನ್ ತಗೊಂಡಿದ್ದಾರೆ. ಇಂಥ ನೂರಾರು ಉದಾಹರಣೆಗಳಿವೆ ಎನ್ನುವ ಮೂಲಕ ಸರ್ಕಾರದ ಯೋಜನೆಯನ್ನು ಸಮರ್ಥಿಸಿಕೊಂಡರು.



## ಶಾಸಕ ಶಿವಲಿಂಗೇಗೌಡ ವಿರುದ್ಧ ರೊಚ್ಚಿಗೆದ್ದ ಜನ!

**ಹಾಸನ :** ತಮ್ಮ ಗ್ರಾಮಕ್ಕೆ ಬರಬೇಕಿದ್ದ ಯೋಜನೆಯವನ್ನು ನಿಲ್ಲಿಸಿದ್ದಾಗಿ ಆರೋಪಿ ಅರಸೀಕೆರೆಯ ಕಾಂಗ್ರೆಸ್ ಶಾಸಕ ಕೆ.ಎಂ. ಶಿವಲಿಂಗೇಗೌಡ ವಿರುದ್ಧ ಗ್ರಾಮಸ್ಥರು ರೊಚ್ಚಿಗೆದ್ದು,



ಘೇರಾವ್ ಹಾಕಿದ ಪ್ರಸಂಗ ಗಂಡಸಿ ಹೋಬಳಿಯ ಕೆಂಕೆರೆ ಗ್ರಾಮದಲ್ಲಿ ನಿನ್ನೆ ರಾತ್ರಿ ನಡೆದಿದೆ. ಗಣಪತಿ ವಿಸರ್ಜನೆ ನಿಮಿತ್ತ ಗ್ರಾಮದಲ್ಲಿ ಹಮ್ಮಿಕೊಂಡಿದ್ದ ಸಂಗೀತ ಕಛೇರಿ ಕಾರ್ಯಕ್ರಮದಲ್ಲಿ ಭಾಗಿಯಾಗಿದ್ದ ಶಾಸಕರನ್ನು ಊರಿನ ಜನ ತರಾಟೆಗೆ ತೆಗೆದುಕೊಂಡಿದ್ದಾರೆ. ಕುರುಬರ ಸಂಘದ ಉಪಾಧ್ಯಕ್ಷ, ಜೆಡಿಎಸ್ ಮುಖಂಡರೂ ಆಗಿರುವ ಕೇಶವಮೂರ್ತಿ ಎಂಬುವವರು ಗ್ರಾಮದ ಕೆರೆಗೆ ಹೇಮಾವತಿ ನೀರನ್ನು ತುಂಬಿಸುವ 22 ಕೋಟಿ ರೂಪಾಯಿ ವೆಚ್ಚದ ಯೋಜನೆಗೆ ಸಿಎಂ ಬಳಿ ಅನುಮತಿಗೆ ಮನವಿ ಮಾಡಿದ್ದರು. ಅದಕ್ಕೆ ಸಿಎಂ ಕೂಡ ಸ್ಪಂದಿಸಿದ್ದರಂತೆ. ಆದರೆ ಇದಕ್ಕೆ ಶಿವಲಿಂಗೇಗೌಡ ಅವರು ಕೆರಳಿ ಯೋಜನೆಯ ಅನುಮತಿಯನ್ನು ರದ್ದು ಮಾಡಿದ್ದಾರೆಂದು ಆರೋಪಿಸಿ ಶಾಸಕರ ಭಾಷಣಕ್ಕೆ ಊರಿನ ಜನ ಅಡ್ಡಿ ಪಡಿಸಿದ್ದಾರೆ. ಅಲ್ಲದೇ ಯೋಜನೆಯನ್ನು ಯಾಕೆ ನಿಲ್ಲಿಸಿದ್ದೀರಿ ಎಂದು ಕ್ಲಾಸ್ ತೆಗೆದುಕೊಂಡಿದ್ದಾರೆ. ಈ ಸಂದರ್ಭದಲ್ಲಿ ಶಾಸಕರ ಬೆಂಬಲಿಗರು ಹಾಗೂ ಗ್ರಾಮಸ್ಥರ ನಡುವೆ ಮಾತಿನ ಚಕಮಕಿ ತೀವ್ರಗೊಂಡಾಗ ಪೊಲೀಸರು ಮಧ್ಯ ಪ್ರವೇಶಿಸಿ ಪರಿಸ್ಥಿತಿ ತಿಳಿಗೊಳಿಸಿದ್ದಾರೆ.

## ಧರ್ಮ ಯಾವುದಾದರೇನು..? ತತ್ವವು ಒಂದೇ- ಡಿಸಿಎಂ ಡಿಕೆಶಿ

**ಬೆಳಗಾವಿ :** ಬಿಜೆಪಿ ಸ್ನೇಹಿತರು ದೇವರು, ಧರ್ಮವನ್ನು ತಮ್ಮ ಆಸ್ತಿ ಎಂದು ಭಾವಿಸಿದ್ದಾರೆ, ಧರ್ಮ ಯಾವುದಾದರೂ ತತ್ವ ಒಂದೇ ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ಅವರು ಗುಡುಗಿದರು. ಜಿಲ್ಲೆಯ ಸವದತ್ತಿ ತಾಲೂಕಿನ ಯಲ್ಲಮ್ಮನಗುಡ್ಡದ ಶ್ರೀರೇಣುಕಾ ಯಲ್ಲಮ್ಮ ಪುಣ್ಯಕ್ಷೇತ್ರದಲ್ಲಿ ಇಂದು ವಿವಿಧ ಅಭಿವೃದ್ಧಿ ಕಾಮಗಾರಿಗಳ ಲೋಕಾರ್ಪಣೆ ಸಮಾರಂಭದಲ್ಲಿ



ಮಾತನಾಡಿ, ರಾಜಕಾರಣದಲ್ಲಿ ಧರ್ಮ ಇರಬೇಕು, ಧರ್ಮದಲ್ಲಿ ರಾಜಕಾರಣ ಇರಬಾರದು. ಈ ವಿಚಾರ ನಾನು ಹಲವು ಬಾರಿ ಹೇಳುತ್ತಿರುತ್ತೇನೆ. ಬಿಜೆಪಿಯವರು ಸದಾ ಧರ್ಮದಲ್ಲಿ ರಾಜಕಾರಣ ಮಾಡುತ್ತಿರುತ್ತಾರೆ ಎಂದು ಕುಟುಕಿದರು. ಕಾಂಗ್ರೆಸ್ ಸರ್ಕಾರ ಮುಜರಾಯಿ ಇಲಾಖೆ ಮೂಲಕ ನಮ್ಮ ದೇವಾಲಯಗಳು ಹಾಗೂ ಧರ್ಮ ರಕ್ಷಣೆ ಮಾಡಿಕೊಂಡು ಬಂದಿದೆ. ಧರ್ಮ ಯಾರೊಬ್ಬರ ಸ್ವತ್ತೂ ಅಲ್ಲ. ಧರ್ಮ ಅವರವರ ವೈಯಕ್ತಿಕ ವಿಚಾರ. ಧರ್ಮ ಯಾವುದಾದರೂ ತತ್ವ ಒಂದೇ, ನಾಮ ನೂರಾದರೂ ದೈವ ಒಂದೇ, ಪೂಜೆ ಯಾವುದಾದರೂ ಭಕ್ತಿಯೊಂದೇ, ಕರ್ಮ ಹಲವಾದರೂ ನಿಷ್ಠೆಯೊಂದೇ, ದೇವರೊಬ್ಬ ನಾಮ ಹಲವು. ನೀವು ಯಾವುದೇ ದೈವವನ್ನು ಆರಾಧಿಸಿ ಧರ್ಮ ಪಾಲನೆ ಮಾಡಬಹುದು ಎಂದರು.

## ಅಭಿವೃದ್ಧಿಗೆ ನಾವು ರೆಡಿ

**ಸವದತ್ತಿ ರೇಣುಕಾ ಯಲ್ಲಮ್ಮ ದೇವಸ್ಥಾನಕ್ಕೆ ಭೇಟಿ ನೀಡಿದ ಸಿಎಂ ಸಿದ್ದರಾಮಯ್ಯ ದರ್ಶನ ಪಡೆದುಕೊಂಡಿದ್ದಾರೆ. ಬಳಿಕ ಶ್ರೀ ರೇಣುಕಾ ಯಲ್ಲಮ್ಮ ದೇವಸ್ಥಾನ ಅಭಿವೃದ್ಧಿ ಪ್ರಾಧಿಕಾರ ಮತ್ತು ಶ್ರೀ ರೇಣುಕಾ ಯಲ್ಲಮ್ಮ ಕ್ಷೇತ್ರ ಪ್ರವಾಸೋದ್ಯಮ ಅಭಿವೃದ್ಧಿ ಮಂಡಳಿ ಸಭೆ ಮಾಡಿದ್ದಾರೆ. ಸವದತ್ತಿ ಕ್ಷೇತ್ರದ ಅಭಿವೃದ್ಧಿಗೆ ನಮ್ಮ ಸರ್ಕಾರ ಸಿದ್ಧವಿದೆ. ಮುಂದಿನ ವರ್ಷದ ವೇಳೆಗೆ 6 ಸಾವಿರ ಭಕ್ತರು ಉಳಿಯಲು ರೇಣುಕಾ ಯಲ್ಲಮ್ಮ ಸನ್ನಿಧಿಯಲ್ಲಿ ವ್ಯವಸ್ಥೆ ರೂಪಿಸುತ್ತೇವೆ ಎಂದು ಸಿಎಂ ಸಿದ್ದರಾಮಯ್ಯ ಭರವಸೆ ನೀಡಿದ್ದಾರೆ. ಕ್ಷೇತ್ರದಲ್ಲಿ ರೋಪ್ ವೇ ಸವಲತ್ತು ಕಲ್ಪಿಸುವುದರಿಂದ ಅನುಕೂಲ ಆಗುತ್ತದೆಯೇ ಎನ್ನುವ ಬಗ್ಗೆ ಪರಿಶೀಲನೆ ನಡೆಸಿ, ಸರ್ಕಾರಕ್ಕೆ ವರದಿ ಸಲ್ಲಿಸುವಂತೆ ಸಿದ್ದರಾಮಯ್ಯ ಸೂಚನೆ ನೀಡಿದ್ದಾರೆ. ಇಂದು ಸವದತ್ತಿ ರೇಣುಕಾ ಯಲ್ಲಮ್ಮ ದೇವಸ್ಥಾನಕ್ಕೆ ಭೇಟಿ ನೀಡಿದ ಸಿಎಂ ಸಿದ್ದರಾಮಯ್ಯ ದರ್ಶನ ಪಡೆದುಕೊಂಡಿದ್ದಾರೆ. ಬಳಿಕ ಶ್ರೀ ರೇಣುಕಾ ಯಲ್ಲಮ್ಮ ದೇವಸ್ಥಾನ ಅಭಿವೃದ್ಧಿ ಪ್ರಾಧಿಕಾರ ಮತ್ತು ಶ್ರೀ ರೇಣುಕಾ ಯಲ್ಲಮ್ಮ ಕ್ಷೇತ್ರ ಪ್ರವಾಸೋದ್ಯಮ ಅಭಿವೃದ್ಧಿ ಮಂಡಳಿ ಸಭೆ ಮಾಡಿದ್ದಾರೆ. ಶ್ರೀ ರೇಣುಕಾ ಯಲ್ಲಮ್ಮ ದೇವಿ ಸನ್ನಿದಿಗೆ ಬರುವ ಭಕ್ತರೆಲ್ಲರಿಗೂ ತಾಯಿಯ ದರ್ಶನ ಕಡ್ಡಾಯವಾಗಿ ಸಿಗುವ ವ್ಯವಸ್ಥೆಯನ್ನು ಪ್ರಥಮ ಆದ್ಯತೆಯಲ್ಲಿ ಒದಗಿಸಬೇಕು. ಭಕ್ತಾದಿಗಳ ಆರೋಗ್ಯಕ್ಕೆ ಪೂರಕವಾದ ವ್ಯವಸ್ಥೆಗಳನ್ನು ಕಲ್ಪಿಸಬೇಕು. ಶೌಚಾಲಯ, ಕುಡಿಯುವ ನೀರು, ವಿದ್ಯುತ್, ಉಳಿಯಲು ಅಚ್ಚುಕಟ್ಟಾದ ವ್ಯವಸ್ಥೆಯನ್ನು ಕಲ್ಪಿಸಬೇಕು. ತಿರುಪತಿ ಮಾದರಿಯಲ್ಲಿ ವ್ಯವಸ್ಥೆಗಳನ್ನು ಕಲ್ಪಿಸಬೇಕು ಎಂದು ಹೇಳಿದ್ದಾರೆ.**

## ಗೃಹಲಕ್ಷ್ಮೀ' ಹಣದಿಂದ ವಿದ್ಯಾರ್ಥಿಗಳಿಗೆ 'ಗ್ರಂಥಾಲಯ' ಕಟ್ಟಿಸಿದ 'ಮಹಾ ತಾಯಿ'!

**ಬೆಳಗಾವಿ:** ರಾಜ್ಯ ಕಾಂಗ್ರೆಸ್ ಸರ್ಕಾರದ ಗ್ಯಾರಂಟಿ ಯೋಜನೆಗಳಲ್ಲೊಂದಾದ ಗೃಹಲಕ್ಷ್ಮಿ ಯೋಜನೆಯ ಹಣದಿಂದ ಮಹಿಳೆಯೊಬ್ಬರು ಮಕ್ಕಳಿಗೆ ಗ್ರಂಥಾಲಯ ನಿರ್ಮಾಣ ಮಾಡಿದ್ದಾರೆ. ಹೌದು, ಬೆಳಗಾವಿಯ ರಾಯಭಾಗ ತಾಲೂಕಿನ ಮಂಟೂರ ಗ್ರಾಮ ಪಂಚಾಯತಿಯ ಮಹಿಳೆ ಮಲ್ಲವ್ವ ಭೀಮಪ್ಪ ಮೇಟಿ, ಗೃಹಲಕ್ಷ್ಮೀಯಿಂದ ಬಂದ ಹಣದಿಂದ ಗ್ರಾಮದಲ್ಲಿ ಸ್ಪರ್ಧಾತ್ಮಕ ಪರೀಕ್ಷೆ ಬರೆಯುವ ವಿದ್ಯಾರ್ಥಿಗಳಿಗೆ ಗ್ರಂಥಾಲಯ ನಿರ್ಮಾಣ ಮಾಡಿದ್ದಾರೆ.



ಈ ಬಗ್ಗೆ ಟ್ವಿಟರ್ ನಲ್ಲಿ ಮಲ್ಲವ್ವ ಮೇಟಿ ಮಾಹಿತಿ ಹಂಚಿಕೊಂಡಿದ್ದು, ಈ ಬಗ್ಗೆ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಚಿವೆ ಲಕ್ಷ್ಮೀ ಹೆಬ್ಬಾಳಕರ್, ಡೆವಲಪ್ಮೆಂಟ್ ಕಮೀಷನರ್ ಉಮಾ ಮಹದೇವನ್ ದಾಸ್ಗುಪ್ತ ಹಾಗೂ ಸಿಎಂ ಸಿದ್ದರಾಮಯ್ಯ ಅವರಿಗೆ ಟ್ಯಾಗ್ ಮಾಡಿದ್ದಾರೆ. ಮಂಟೂರ ಗ್ರಾಮ ಪಂಚಾಯತಿಯ ಮಾಜಿ ಅಧ್ಯಕ್ಷರು ಹಾಗೂ ಹಾಲಿ ಸದಸ್ಯರಾಗಿರುವ ಮಲ್ಲವ್ವ ಭೀಮಪ್ಪ ಮೇಟಿ ಅವರ ಕಾರ್ಯಕ್ಕೆ ಮೆಚ್ಚುಗೆ ವ್ಯಕ್ತವಾಗಿದೆ. 13 ತಿಂಗಳಿನಿಂದ ಗೃಹಲಕ್ಷ್ಮೀ ಹಣ 26 ಸಾವಿರ ರೂಪಾಯಿ ಬಂದಿತ್ತು. ಅದರೊಂದಿಗೆ ಗ್ರಾಮ ಪಂಚಾಯಿತಿ ಮೆಂಬರ್ ಆಗಿರುವ ಕಾರಣಕ್ಕೆ ಗೌರವ ಧನ ಕೂಡ ಸಿಗುತ್ತದೆ. ಈ ಎಲ್ಲಾ ಹಣವನ್ನು ಒಟ್ಟು ಮಾಡಿ ನಾನು ಒಂದು ಸಣ್ಣ ಪ್ರಮಾಣದ ಗ್ರಂಥಾಲಯ ಕಟ್ಟಿದ್ದೇನೆ. ಸಣ್ಣ ಗ್ರಂಥಾಲಯಕ್ಕೆ ಒಂದೂವರೆ ಲಕ್ಷ ರೂಪಾಯಿ ಖರ್ಚಾಗಿದೆ ಎಂದು ಮಲ್ಲವ್ವ ಭೀಮಪ್ಪ ಮೇಟಿ ತಿಳಿಸಿದ್ದಾರೆ.

## ಒಟಿಟಿ ಕಂಟೆಂಟ್.. ಅಗತ್ಯ ಕಾನೂನಿನ ಬಗ್ಗೆ ಪರಿಶೀಲನೆ- ಪ್ರಹ್ಲಾದ್ ಜೋಶಿ

**ಹುಬ್ಬಳ್ಳಿ :** ಒಟಿಟಿ ಪ್ಲಾಟ್ಫಾರ್ಮ್‌ಗಳ ಮೇಲಿನ ಕಂಟೆಂಟ್ಗೆ ಸಂಬಂಧಿಸಿ ಕಾನೂನಿನ ಅಗತ್ಯತೆಯ ಬಗ್ಗೆ ಈಗಾಗಲೇ ಕೇಂದ್ರ ಸರ್ಕಾರ ಕ್ರಮಕ್ಕೆ ನಿರ್ಧರಿಸಿದೆ ಎಂದು ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ ತಿಳಿಸಿದರು. ಇತ್ತೀಚೆಗೆ ಒಟಿಟಿಯಲ್ಲಿ ಬಿಡುಗಡೆಯಾದ 'ಖಅ-814: ದಿ ಕಂದಹಾರ್ ಹೈಜಾಕ್? ಎಂಬ ಸಿರೀಸ್ ನ ವಿರುದ್ಧ ದೇಶಾದ್ಯಂತ ತೀವ್ರ ಟೀಕೆ ವ್ಯಕ್ತವಾಗಿತ್ತು. ಈ ಸಿರೀಸ್ನಲ್ಲಿ ವಿಮಾನ ಹೈಜಾಕರ್ಗಳನ್ನು ಹಿಂದೂಗಳ ಹೆಸರಿನೊಂದಿಗೆ ಸಂಭೋದಿಸಿ ಆ ಮೂಲಕ ನಿಜವಾದ ಹೈಜಾಕರ್ಗಳು ಹಿಂದೂಗಳು ಎಂಬಂತೆ ಬಿಂಬಿಸಲಾಗಿದೆ ಆರೋಪ ಕೇಳಿ ಬಂದಿತ್ತು. ಈ ಕುರಿತು ಪ್ರತಿಕ್ರಿಯೆ ನೀಡಿದ ಅವರು, ಒಟಿಟಿ ವೇದಿಕೆ ಕುರಿತಾದ ಕಂಟೆಂಟ್ ವಿವಾದವು ವಿಶ್ವದಾದ್ಯಂತ ಸಮಸ್ಯೆಯಾಗಿದೆ. ಇನ್ನು ಒಟಿಟಿಗೆ ಸಂಬಂಧಿಸಿದ ಕಂಟೆಂಟ್ಗಳ ಬಗ್ಗೆ ಸಚಿವಾಲಯವು ಸೂಕ್ತ ಕ್ರಮ ತೆಗೆದುಕೊಳ್ಳುತ್ತದೆ. ಇದಕ್ಕಾಗಿ ಸರ್ಕಾರವು ಈಗಾಗಲೇ ಪರಿಶೀಲಿಸುತ್ತಿದೆ ಎಂದರು.



## ಚನ್ನಪಟ್ಟಣಕ್ಕೆ ನಾನೇ ಅಭ್ಯರ್ಥಿ

**ದಾವಣಗೆರೆ:** ಚನ್ನಪಟ್ಟಣ ವಿಧಾನ ಸಭಾ ಕ್ಷೇತ್ರದ ಉಪ ಚುನಾವಣೆಯಲ್ಲಿ ನಾನೇ ಅಭ್ಯರ್ಥಿ ಎಂದು ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಹೇಳಿದ್ದಾರೆ. ನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಚನ್ನಪಟ್ಟಣದಲ್ಲಿ ಯಾರೇ ಅಭ್ಯರ್ಥಿಯಾದರೂ ನಾನೇ ಎನ್ ಡಿಎ ಅಭ್ಯರ್ಥಿ ಎಂದು ಹೇಳುವ ಮೂಲಕ ಕುತೂಹಲ ಮೂಡಿಸಿದರು.

ಇದೇ ವೇಳೆ ಲೋಕಾಯುಕ್ತ ಎಡಿಜಿಪಿ ಚಂದ್ರಶೇಖರ್ ದೂರು ದಾಖಲಿಸಿದ ವಿಚಾರವಾಗಿ ಪ್ರತಿಕ್ರಿಯಿಸಿದ ಅವರು, ನನ್ನ ಮೇಲೆ ಅವರು ದೂರು ದಾಖಲು ಮಾಡಿದ್ದಾರೆ. ಅದಕ್ಕೆ ನಾನು ನ್ಯಾಯಾಲಯದಲ್ಲಿ ಉತ್ತರ ಕೊಡುತ್ತೇನೆ ಎಂದು ತಿಳಿಸಿದರು.

3-4 ಸಾವಿರ ಪುಟಗಳಷ್ಟು ಚಾರ್ಜ್ ಶೀಟ್ ಹಾಕುತ್ತಾರೆ. 12 ವರ್ಷದಿಂದ ನನ್ನ ಮೇಲೆ ಕೇಸ್ ಹಾಗೆ ಉಳಿಸಿಕೊಂಡಿದ್ದಾರೆ. ಈಗ ನನ್ನ ಮೇಲೆ ಕೇಸ್ ಹಾಕಿದ್ದಾರೆ ನ್ಯಾಯಾಲಯದಲ್ಲಿ ಎಲ್ಲ ಚರ್ಚೆ ಆಗಲಿ ಎಂದು ತಿಳಿಸಿದರು.

ಚನ್ನಪಟ್ಟಣ 'ಬೈ ಎಲೆಕ್ಷನ್' ನಲ್ಲಿ ನಾನೆ ಸ್ಪರ್ಧಿಸುತ್ತೇನೆ : ಡಿಸಿಎಂ ಡಿಕೆ ಶಿವಕುಮಾರ್

ಮೈಸೂರು : ಚನ್ನಪಟ್ಟಣ ಉಪಚುನಾವಣೆಗೆ ಸಂಬಂಧಪಟ್ಟಂತೆ ಜೆಡಿಎಸ್ ಹಾಗೂ ಬಿಜೆಪಿ ಮೈತ್ರಿಯಲ್ಲಿ ಅಭ್ಯರ್ಥಿಯ ಕುರಿತಂತೆ ಗೊಂದಲ



ಮೂಡಿದ್ದು, ಇನ್ನೂ ಕೂಡ ಯಾವುದೇ ಅಭ್ಯರ್ಥಿ ಘೋಷಣೆ ಮಾಡಿಲ್ಲ ಆದರೆ ಚನ್ನಪಟ್ಟಣ ಬೈ ಎಲೆಕ್ಷನ್ ನಲ್ಲಿ ನಾನೇ ಸ್ಪರ್ಧಿಸುತ್ತೇನೆ ಎಂದು ಉಪಮುಖ್ಯಮಂತ್ರಿ ಡಿಕೆ ಶಿವಕುಮಾರ್ ಸ್ಫೋಟಕ ಹೇಳಿಕೆ ನೀಡಿದರು.

ಮೈಸೂರಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಚನ್ನಪಟ್ಟಣದಲ್ಲಿ ನಾವು ವ್ಯಕ್ತಿ ಮೇಲೆ ಚುನಾವಣೆ ಮಾಡಲ್ಲ. ಪಕ್ಷದ ಸಿದ್ಧಾಂತದ ಮೇಲೆ ಚುನಾವಣೆ ಮಾಡಲು ಹೊರಟಿದ್ದೇವೆ. ಚನ್ನಪಟ್ಟಣದಿಂದ ನಾನೇ ಸ್ಪರ್ಧಿಸುತ್ತೇನೆ. ಒಕ ಚುನಾವಣೆಯಲ್ಲಿ ಕಡಿಮೆ ಅಂತರದಲ್ಲಿ ಹಿನ್ನಡೆ ಆಗಿತ್ತು. ಒಖಂ ಚುನಾವಣೆಯಲ್ಲಿಯೂ ಹೆಚ್ಚು ಹಿನ್ನಡೆಯಾಗಿತ್ತು. ಈಗ ನಮ್ಮ ಬೇಸ್ ಸ್ಟ್ರಾಂಗ್ ಮಾಡುತ್ತಿದ್ದೇವೆ. ಜನ ಓಟ್ ಹಾಕಿ ಗೆಲ್ಲಿಸುತ್ತಾರೆಂಬ ನಂಬಿಕೆ ನನಗಿದೆ ಎಂದರು.

## ಒಳಮೀಸಲಾತಿಗೆ ಕಾಂಗ್ರೆಸ್ ಮಾತ್ರ ಮೀನಾಮೇಷ ಎಣಿಸುತ್ತಿದೆ

**ಬೆಂಗಳೂರು:** ಒಳಮೀಸಲಾತಿಗೆ ಕಾಂಗ್ರೆಸ್ ಮಾತ್ರ ಮೀನಾಮೇಷ ಎಣಿಸುತ್ತಿದೆ ಎಂದು ವಿಪಕ್ಷ ನಾಯಕ ಆರ್.ಅಶೋಕ್ ಕಿಡಿಕಾರಿದ್ದಾರೆ.

ನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಒಳಮೀಸಲಾತಿಯ ಅಧಿಕಾರವನ್ನು ರಾಜ್ಯ ಸರ್ಕಾರಗಳಿಗೆ ನೀಡಿರುವುದನ್ನು ಸುಪ್ರೀಂ ಕೋರ್ಟ್ ಎತ್ತಿ ಹಿಡಿದಿದೆ. ಆದರೂ ಕಾಂಗ್ರೆಸ್ ಮಾತ್ರ ಮೀನಾಮೇಷ ಎಣಿಸುತ್ತಿದೆ. ಒಳ ಮೀಸಲಾತಿಗೆ ಪ್ರಧಾನಿ ನರೇಂದ್ರ ಮೋದಿಯವರ ಸಹಮತವಿದೆ. ತೆಲಂಗಾಣಕ್ಕೆ ಬಂದಾಗ ಒಳ ಮೀಸಲಾತಿಗೆ ಮೋದಿ ಅನುಮೋದನೆ ನೀಡಿದ್ದರು. ಹಿಂದೆ ಬಿಜೆಪಿ ಸರ್ಕಾರ ಕೂಡ ಈ ಕುರಿತು ಪ್ರಯತ್ನ ಮಾಡಿತ್ತು. ಸಿದ್ದರಾಮಯ್ಯ ಸೇರಿದಂತೆ ಕಾಂಗ್ರೆಸ್ ನಾಯಕರು, ಒಳಮೀಸಲಾತಿ ಬಗ್ಗೆ ದೊಡ್ಡದಾಗಿ ಮಾತನಾಡುತ್ತಾರೆ. ಜಾತಿಗಣತಿಯ ಬಗ್ಗೆ ಶಂಖ ಊದುತ್ತಿರುತ್ತಾರೆ. ಒಳಮೀಸಲಾತಿಗೆ ಕಾಂಗ್ರೆಸ್ ಮಾತ್ರ ಇನ್ನೂ ಮೀನಾಮೇಷ ಎಣಿಸುತ್ತಿದೆ ಎಂದು ದೂರಿದರು.

ರಾಜ್ಯದಲ್ಲಿ ಈಗ ಬರೀ ಎಸ್‌ಐಟಿ ಕಂಡುಬರುತ್ತಿದೆ. ಒಳಮೀಸಲಾತಿ ಮತ್ತು ಜಾತಿಗಣತಿ ವಿಚಾರದಲ್ಲೂ ಕಾಂಗ್ರೆಸ್ ಸರ್ಕಾರ ಎಸ್‌ಐಟಿ ರಚಿಸಿದರೆ ಅಚ್ಚರಿ ಇಲ್ಲ. ಇಲ್ಲಿ ಒಬ್ಬೊಬ್ಬರಿಗೆ ಒಂದೊಂದು ಕಾನೂನು ಅನ್ವಯವಾಗುತ್ತಿದ್ದು, ಎಸ್‌ಐಟಿಯ ಮೇಲೆ ಅನುಮಾನ ಹೆಚ್ಚಾಗಿ ಅದನ್ನೇ ತನಿಖೆ ಮಾಡುವ ಸ್ಥಿತಿ ಬಂದಿದೆ. ಎಸ್‌ಐಟಿ ಪ್ರಕಾರ, ಶಾಸಕ ಮುನಿರತ್ನ ಅವರಿಗೆ ಒಂದು ಕಾನೂನು, ವಿನಯ್ ಕುಲಕರ್ಣಿ ಅವರಿಗೆ ಒಂದು ಕಾನೂನು ಎಂಬಂತಾಗಿದೆ. ಎಸ್ ಐಟಿಗಳ ನಿಜಬಣ್ಣ ಬಯಲು ಮಾಡಲು ಡಬಲ್ ಎಸ್‌ಐಟಿ ಎಂಬ ಘಟಕ ಸ್ಥಾಪಿಸಬೇಕಿದೆ ಎಂದು ವ್ಯಂಗ್ಯವಾಡಿದರು.

**ಕಾಂಗ್ರೆಸ್ ನ್ಯಾಯಾಲಯದ ಸರ್ಟಿಫಿಕೇಟ್ ಬೇಡ:** ಮುಡಾ ಹಾಗೂ ವಾಲ್ಮೀಕಿ ಅಭಿವೃದ್ಧಿ ನಿಗಮದಲ್ಲಿ ಕಾಂಗ್ರೆಸ್ ನಾಯಕರು ಚೆನ್ನಾಗಿ ಹಣ ನುಂಗಿದ್ದಾರೆ. ಇದರ ವಿರುದ್ಧ ಬಿಜೆಪಿ ಸಮರ್ಥವಾಗಿ ಪ್ರತಿಭಟನೆ ಮಾಡಿದೆ. ಬಿ.ಎಸ್ .ಯಡಿಯೂರಪ್ಪನವರ ಪ್ರಕರಣಕ್ಕೆ ನ್ಯಾಯಾಲಯ ತಡೆಯಾಜ್ಞೆ ನೀಡಿದೆ. ಆದರೆ ಮುಡಾ ಹಾಗೂ ವಾಲ್ಮೀಕಿ ಅಭಿವೃದ್ಧಿ ನಿಗಮದ ಹಗರಣದ ತನಿಖೆಗೆ ಯಾವುದೇ ತಡೆ ಇಲ್ಲ. ಈ ದೇಶದಲ್ಲಿ ನ್ಯಾಯಾಂಗವೇ ಉನ್ನತವಾದುದು. ಕಾಂಗ್ರೆಸ್ ನ್ಯಾಯಾಲಯದ ಸರ್ಟಿಫಿಕೇಟ್ ಬಿಜೆಪಿಗೆ ಬೇಕಿಲ್ಲ ಎಂದರು.

## ನವರಾತ್ರಿ ಹಿನ್ನೆಲೆಯಲ್ಲಿ ಗಂಗಾಧರೇಶ್ವರ ಸ್ವಾಮಿ ದೇವಾಲಯದಲ್ಲಿ ವಿಶೇಷ ಪೂಜೆ

**ಮಾಲೂರು:** ತಾಲೂಕಿನ ಮಡಿವಾಳ ಗ್ರಾಮದಲ್ಲಿ ಗಂಗಾಧರೇಶ್ವರ ದೇವಸ್ಥಾನದಲ್ಲಿ 9 ದಿನಗಳ ಕಾಲ ನವರಾತ್ರಿ ಪೂಜೆಯನ್ನು ಸಲ್ಲಿಸಿ ಮಡಿವಾಳದ ಬೀದಿಗಳಲ್ಲಿ ದೇವರನ್ನು ಮೆರವಣಿಗೆ ಮಾಡಲಾಯಿತು. ವಿಜಯದಶಮಿ ಹಾಗೂ ದಸರಾ ಮಹೋತ್ಸವದ ಹಿನ್ನೆಲೆಯಲ್ಲಿ ಎಂ.ವಿ.ಪುಟೀರಪ್ಪ ನವರ ಕುಟುಂಬದಿಂದ ಬನ್ನಿ ಮರಕ್ಕೆ ಪೂಜೆ ಸಲ್ಲಿಸಿ ದಸರಾ ಹಬ್ಬವನ್ನು ವಿಜೃಂಭಣೆಯಿಂದ ಆಚರಿಸಲಾಯಿತು.

ಈ ಸಂದರ್ಭದಲ್ಲಿ ಕಾರ್ಯಕಾರಿ ಮಂಡಳಿ ಅಧ್ಯಕ್ಷರಾದ ಮಂಜುನಾಥ ,ಕಾರ್ಯದರ್ಶಿ ಕೆ.ವೆಂಕಟೇಶ್, ಖಜಾಂಚಿ ರಾಮೇಗೌಡ, ಸದಸ್ಯರಾದ ಕೆ.ಉಮೇಶ್, ಎಂ.ಬಸವಗೌಡ, ಮರಿಯಪ್ಪ, ನಾರಾಯಣಸ್ವಾಮಿ, ಆರ್ .ಎ.ವೆಂಕಟೇಶ್, ಅರ್ಚಕರಾದ ಸುಬ್ರಮಣ್ಯಂ, ಕೆ. ನಾರಾಯಣಪ್ಪ, ಚೊಕಂಡಹಳ್ಳಿ ನಾರಾಯಣ ರೆಡ್ಡಿ ಹಾಗೂ ಮಡಿವಾಳ ಚೊಕಂಡಹಳ್ಳಿ ಗ್ರಾಮಸ್ಥರು ಇದ್ದರು.



# ಚಾಮರಾಜನಗರ ಜಿಲ್ಲೆಯಲ್ಲಿ ಜಿಟಿ ಜಿಟಿ ಮಳೆ



**ಚಾಮರಾಜನಗರ :** ಕರ್ನಾಟಕ ತಮಿಳುನಾಡು ಗಡಿ ಭಾಗದಲ್ಲಿ ಮೋಡ ಕವಿದ ವಾತಾವರಣ ಇದ್ದು, ಗಡಿ ಚಾಮರಾಜನಗರ ಜಿಲ್ಲೆಯಲ್ಲಿ ಜಿಟಿ ಜಿಟಿ ಮಳೆಯಾಗುತ್ತಿದೆ.

ಕರ್ನಾಟಕ ತಮಿಳುನಾಡು ಗಡಿ ಚಾಮರಾಜನಗರ ಜಿಲ್ಲೆಯಲ್ಲಿ ಮುಂಜಾನೆಯಿಂದಲೇ ಮೋಡ ಕವಿಡ ವಾತಾವರಣ ಇದ್ದು,ತಂಪಿನ ವಾತಾವರಣ ಇದೆ. ಚಾಮರಾಜನಗರ ಜಿಲ್ಲೆಗೆ ಹೊಂದಿಕೊಂಡಿರುವ ತಮಿಳುನಾಡಿನ ತಾಳವಾಡಿ ತಾಲ್ಲೂಕಿನಲ್ಲಿ ಧಾರಾಕಾರ ಮಳೆಯಾಗುತ್ತಿದ್ದು, ಮಳೆಯ ನೀರು ಕಾಲುವೆ ಯಂತೆ ಹರಿಯುತ್ತಿದೆ.

ತಾಳವಾಡಿ ತಾಲ್ಲೂಕಿನ ಕಲ್ಬಂಡಿಪುರ, ಕೋಡಿಪುರಂ, ಚಿಕ್ಕಳ್ಳಿ,ದೊಡ್ಡಪುರ, ಗುಮ್ಮಟಾಪುರ , ತಾಳವಾಡಿ ಹಾಗೂ ಇನ್ನಿತರ ಕಡೆ ಮಳೆಯಾಗುತ್ತಿದ್ದು, ದೊಡ್ಡಪುರ ನಡುವೆ ರಸ್ತೆಯ ಮೇಲೆ ಮಳೆಯ ನೀರು ಹರಿಯುತ್ತಿರುವುದರಿಂದ ವಾಹನ ಸಂಚಾರಕ್ಕೆ ಅಡ್ಡಿಯಾಗಿದೆ.

ವಾಯುಭಾರ ಕುಸಿತದಿಂದಾಗಿ ಚಾಮರಾಜನಗರ ಜಿಲ್ಲೆ ಹಾಗೂ ಅಕ್ಕ ಪಕ್ಕ ಪ್ರದೇಶದಲ್ಲಿ ಮಳೆಯಾಗುವ ಸಾಧ್ಯತೆ ಇದೆ ಎಂದು ಹವಮಾನ ಇಲಾಖೆ ಮುನ್ಸೂಚನೆ ನೀಡಿದೆ. ಪ್ರಸ್ತುತ ಚಾಮರಾಜನಗರ ಜಿಲ್ಲೆಯಲ್ಲಿ ಮಲೆನಾಡಿನ ವಾತಾವರಣ ಬಂದಿದೆ.

## ಮಹದೇಶ್ವರ ಬೆಟ್ಟದಲ್ಲಿ ವಿಜಯದಶಮಿ ಅಂಗವಾಗಿ ಕುದುರೆ ಉತ್ಸವ

**ಚಾಮರಾಜನಗರ:** ದೇಶದ ಎಲ್ಲದೆ ವಿಜಯ ದಶಮಿ ಆಚರಣೆ ಸಂದರ್ಭದಲ್ಲಿ ಕರ್ನಾಟಕ ತಮಿಳುನಾಡು ಗಡಿ ಚಾಮರಾಜನಗರ ಜಿಲ್ಲೆಯ ಪವಾಡ ಪುರುಷ ನೆಲೆಸಿರುವ ಪ್ರಸಿದ್ದ ಧರ್ಮಿಕಯಾತ್ರಾ ಸ್ಥಳ ಮಲೆಮಹದೇಶ್ವರ ಬೆಟ್ಟದಲ್ಲಿ ವಿಜಯ ದಶಮಿ ಅಂಗವಾಗಿ ಕುದುರೆ ಉತ್ಸವ ಹಾಗೂ ಚಿನ್ನದ ತೇರು ಸೇವೆ ನಡೆಯಿತು. ಚಾಮರಾಜನಗರ ಜಿಲ್ಲೆಯ ಹನೂರು ತಾಲ್ಲೂಕಿನ ಮಲೆಮಹದೇಶ್ವರ ಬೆಟ್ಟದಲ್ಲಿ ಶನಿವಾರ ರಾತ್ರಿ ವಿಜಯ ದಶಮಿ ಅಂಗವಾಗಿ ಸಾವಿರಾರು ಭಕ್ತರ ಸಮ್ಮುಖದಲ್ಲಿ ಸಾಲೂರು ಮಠಾಧಿಪತಿ ಡಾ. ಶಾಂತಮಲ್ಲಿಕಾರ್ಜುನ ಸ್ವಾಮಿ ಸಾನಿಧ್ಯದಲ್ಲಿ ಮಹದೇಶ್ವರ ಸ್ವಾಮಿಗೆ ಕುದುರೆ ಉತ್ಸವ ಜೊತೆಗೆ ಚಿನ್ನದ ತೇರು ಸೇವೆ ನಡೆಯಿತು. ರಾಜ್ಯದ ವಿವಿದೆಡೆಗಳಿಂದ ಸಾವಿರಾರು ಸಂಖ್ಯೆಯಲ್ಲಿ ಭಕ್ತರು ಆಗಮಿಸಿ ವಿಜಯ ದಶಮಿ ಸಂಭ್ರಮಿಸಿದರು.



## ಕಾವೇರಿ ಪುತ್ಥಳಿ ಅನಾವರಣಗೊಳಿಸಿದ ಮಾಜಿ ಶಾಸಕ ಸಿ.ಎಸ್.ಪುಟ್ಟರಾಜು

**ಮಂಡ್ಯ:** ತಾಲೂಕಿನ ಸಂಪಳಿ ಗ್ರಾಮದಲ್ಲಿ ನಾಲ್ವಡಿ ಕೃಷ್ಣರಾಜ ಒಡೆಯರ್,ಸರ್ ಎಂ ವಿಶ್ವೇಶ್ವರಯ್ಯಮತ್ತು ಕಾವೇರಿ ಮಾತೆ ಪುತ್ಥಳಿ ಯನ್ನು ಮಾಜಿ ಶಾಸಕ ಸಿ ಎಸ್ ಪುಟ್ಟರಾಜು ಉದ್ಘಾಟಿಸಿದರು. ನಂತರ ಮಾತನಾಡಿ ಆಧುನಿಕ ಕನ್ನಡ ನಾಡಿನ ನಿರ್ಮಾತೃ ಶ್ರೀ ನಾಲ್ವಡಿ ಕೃಷ್ಣರಾಜ ಒಡೆಯರ್ ಹಾಕಿರುವ ಅಡಿಪಾಯದ ಮೇಲೆ ಇಂದು ಭವ್ಯ ಸೌಧಗಳಾಗಿವೆ ಗ್ರಾಮೀಣ ಭಾಗಗಳ ಜೀವನವೇ ಕನ್ನಂಬಾಡಿ ಕಟ್ಟೆ ಕಟ್ಟಿ ಈ ಭಾಗದ ರೈತರ ಅನ್ನದಾತರಾಗಿದ್ದಾರೆ ಇವರ ಸಾಧನೆಗಳು ಅನನ್ಯವಾಗಿದೆ ಇಂತಹ ಮಹನೀಯರ ಪುತ್ಥಳಿ ಅನಾವರಣ ಈ ಗ್ರಾಮದಲ್ಲಿ ನಡೆದಿದೆ ಇವರ ಆದರ್ಶಗಳನ್ನು ಹಿಂದಿನ ಯುವ ಜನತೆ ಮೈಗೊಳಿಸಿಕೊಳ್ಳಬೇಕು ಎಂದರು.

ರೈಸ್ ಮಿಲ್ ಬಸವರಾಜು ಮಾತನಾಡಿ ಏಷ್ಯಾ ಖಂಡದಲ್ಲೇ ಮೊದಲ ಜಲವಿದ್ಯುತ್ ಯೋಜನೆಯನ್ನು ನಾಲ್ವಡಿ ಕೃಷ್ಣರಾಜ ಒಡೆಯರ್ ಗೆ ಸಲ್ಲುತ್ತದೆ ಸರ್ ಎಂ ವಿಶ್ವೇಶ್ವರಯ್ಯನವರು ದಿವಾನರಾಗಿದ್ದ ಕಾಲದಲ್ಲಿ ಜನರಿಗೆ ಉದ್ಯೋಗಕ್ಕಾಗಿ ಹಲವು ಕಾರ್ಖಾನೆಗಳನ್ನು ಮಹಾರಾಜರ ಧನ ಸಹಾಯ ಪಡೆದು ಸ್ಥಾಪಿಸಿದರು ಇಂತಹ ಮಹನೀಯರ ಪುತ್ಥಳಿಯನ್ನು ನಮ್ಮ ಗ್ರಾಮದಲ್ಲಿ ನಿರ್ಮಿಸಿ ಎಲ್ಲರಿಗೂ ಆದರ್ಶ ಪ್ರಾಯಾರಾಗಿದ್ದಾರೆ ಎಂದರು. ಮುಖಂಡರಾದ ಶಿವಶಂಕರ್, ಯೋಗಾನಂದ ,ಮಂಜು, ಜಯರಾಮ್ ,ವೆಂಕಟೇಶ್,ಎಂ ಜವರೇಗೌಡ, ರಾಮಕೃಷ್ಣ ,ಬಸವ ಭಾಗವಹಿಸಿದ್ದರು.



# ಜನತೆಯ ಆಶೀರ್ವಾದ ನನ್ನ ಮೇಲಿರುವವರೆಗೂ ರಾಜೀನಾಮೆ ಕೊಡಲ್ಲ

**ಬೆಳಗಾವಿ:** ರಾಜ್ಯದ ಜನತೆಯ ಆಶೀರ್ವಾದ ನನ್ನ ಮೇಲಿರುವವರೆಗೂ ರಾಜೀನಾಮೆ ನೀಡುವುದಿಲ್ಲ. ಮುಂದಿನ ಮೂರೂವರೆ ವರ್ಷಗಳ ಕಾಲ ನಮ್ಮ ಸರ್ಕಾರ ರಾಜ್ಯದಲ್ಲಿ ಅಧಿಕಾರ ನಡೆಸಲಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಭಾನುವಾರ ಹೇಳಿದರು.

ಬೆಳಗಾವಿಯ ಸವದತ್ತಿಯ ಯಲ್ಲಮ್ಮ ದೇವಸ್ಥಾನದ 31.75 ಕೋಟಿ ರೂ. ಗಳ ಅಭಿವೃದ್ಧಿ ಯೋಜನೆಗಳನ್ನು ಉದ್ಘಾಟಿಸಿದ ಸಿದ್ದರಾಮಯ್ಯ ಅವರು, ಸಭೆಯನ್ನುದ್ದೇಶಿಸಿ ಮಾತನಾಡಿದರು.

ಬಡವರು ಹಾಗೂ ರೈತಾಪಿ ವರ್ಗದವರು ಹೆಚ್ಚು ಭೇಟಿ ನೀಡುವ ಸವದತ್ತಿಯ ಶ್ರೀ ರೇಣುಕಾ ಯಲ್ಲಮ್ಮ ದೇವಸ್ಥಾನ ಕ್ಷೇತ್ರದಲ್ಲಿ ಗುಣಮಟ್ಟದ ಮೂಲಸೌಕರ್ಯಗಳನ್ನು ಒದಗಿಸಲು ತೀರ್ಮಾನಿಸಲಾಗಿದೆ. ಪ್ರವಾಸೋದ್ಯಮ ಮಂಡಳಿ ಹಾಗೂ ಶ್ರೀ ರೇಣುಕಾ ಯಲ್ಲಮ್ಮ ದೇವಸ್ಥಾನದ ಅಭಿವೃದ್ಧಿ ಪ್ರಾಧಿಕಾರದ ವತಿಯಿಂದ ಅಭಿವೃದ್ಧಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವ ಬಗ್ಗೆ ಸಭೆ ನಡೆಸಲಾಗಿದೆ. ಈ ಕ್ಷೇತ್ರಕ್ಕೆ ಸುಮಾರು ಎರಡು ಕೋಟಿ ಭಕ್ತಾದಿಗಳು ವರ್ಷಕ್ಕೆ ಭೇಟಿ ನೀಡುತ್ತಿದ್ದು, ಪ್ರವಾಸಿಗರ ಅನುಕೂಲಕ್ಕಾಗಿ ಕುಡಿಯುವ ನೀರು, ಶೌಚಾಲಯ, ಪಾರ್ಕಿಂಗ್, ತಂಗುದಾಣದ ವ್ಯವಸ್ಥೆಯನ್ನು ಮಾಡಬೇಕಾಗಿದೆ. ಬಡವರು ಹಾಗೂ ರೈತಾಪಿ ವರ್ಗದವರು ಹೆಚ್ಚು ಭೇಟಿ ನೀಡುವ ಈ ಕ್ಷೇತ್ರದಲ್ಲಿ ಗುಣಮಟ್ಟದ ಮೂಲಸೌಕರ್ಯಗಳನ್ನು ಒದಗಿಸಲು ತೀರ್ಮಾನಿಸಲಾಗಿದೆ. ಕ್ಷೇತ್ರದಲ್ಲಿ 1,087 ಎಕರೆ ಪ್ರದೇಶ ಲಭ್ಯವಿದ್ದು, ಮೂಲಸೌಕರ್ಯ



ವ್ಯವಸ್ಥೆ ಕಲ್ಪಿಸುವ ಉದ್ದೇಶಕ್ಕೆ ಈ ಪ್ರದೇಶವನ್ನು ಬಳಸಿಕೊಳ್ಳಲಾಗುವುದು. ಭಕ್ತಾದಿಗಳಿಗೆ ದಾಸೋಹ ವ್ಯವಸ್ಥೆಯಿರುವಂತೆ ರಾಸುಗಳಿಗೂ ಮೇವು ಒದಗಿಸುವ ವ್ಯವಸ್ಥೆಯನ್ನು ಕಲ್ಪಿಸಲು ತೀರ್ಮಾನಿಸಲಾಗಿದೆ ಎಂದು ಹೇಳಿದರು. ಇದೇ ವೇಳೆ ಬಿಜೆಪಿ ವಿರುದ್ಧ ಕಿಡಿಕಾರಿದ ಸಿಎಂ, ಮುಂದಿನ ವರ್ಷದ ವೇಳೆಗೆ 6 ಸಾವಿರ ಭಕ್ತರು ಉಳಿಯಲು ರೇಣುಕಾ ಯಲ್ಲಮ್ಮ ಸನ್ನಿಧಿಯಲ್ಲಿ ವ್ಯವಸ್ಥೆ ರೂಪಿಸಲಾಗುತ್ತದೆ. ಶಕ್ತಿ ಯೋಜನೆಯಿಂದಾಗಿ ಇದುವರೆಗೂ ರಾಜ್ಯದಲ್ಲಿ ಮಹಿಳೆಯರು 300 ಕೋಟಿ ಉಚಿತ ಟ್ರಿಪ್ ಮಾಡಿದ್ದಾರೆ. ಇವರಲ್ಲಿ ಲಕ್ಷಾಂತರ ಮಂದಿ ತಾಯಿ ರೇಣುಕಾ ಯಲ್ಲಮ್ಮನ ದರ್ಶನ ಕೂಡ ಪಡೆದಿದ್ದಾರೆ. ದೇವರು-ಧರ್ಮ ತಮಗೆ ಮಾತ್ರ ಸೇರಿದ್ದು ಎಂದು ಬಿಜೆಪಿಯವರು ಭಯಂಕರ ಮಾತನಾಡ್ತಾರಲ್ಲಾ, ಆದರೆ, ಇದುವರೆಗೂ ದೇವಿಯ ಭಕ್ತರಿಗೆ ನಾವು ಮಾಡಿದಂಥಾ ಕಾರ್ಯಕ್ರಮವನ್ನು ಬಿಜೆಪಿಯವರು ಏಕೆ ಮಾಡಲಿಲ್ಲ? ದೇವರು-ಧರ್ಮದ ಹೆಸರಲ್ಲಿ ದೇಶವನ್ನು - ರಾಜ್ಯವನ್ನು ಒಡೆಯುವ ಬಿಜೆಪಿಯನ್ನು ಮೊದಲು ದೂರ ಇಡಿ. ಇಲ್ಲದಿದ್ದರೆ ನಮ್ಮ ನಾಡೂ ಉಳಿಯಲ್ಲ, ದೇಶವೂ ಉಳಿಯಲ್ಲ. ತಾಯಿ ಯಲ್ಲಮ್ಮ ಶಕ್ತಿ ದೇವತೆ. ಯಾವ ದೇವರೂ ಕೂಡ ಮನುಷ್ಯರನ್ನು ಧರ್ಮದ ಕಾರಣಕ್ಕೆ ದ್ವೇಷಿಸಿ ಎಂದು ಹೇಳುವುದಿಲ್ಲ. ದೇವರ ಹೆಸರಲ್ಲಿ ದ್ವೇಷ ಮಾಡಿ ಎಂದು ಹೇಳುವುದು ಬಿಜೆಪಿ ಮಾತ್ರ. ತಾಯಿ ರೇಣುಕಾ ಯಲ್ಲಮ್ಮ ಯಾವ ಮನುಷ್ಯರನ್ನು ದ್ವೇಷಿಸಿ ಎಂದು ಹೇಳುವುದಿಲ್ಲ ತಾನೆ? ಗೃಹಲಕ್ಷ್ಮಿ ಯೋಜನೆ ಜಾರಿಯಾದರೆ ಅತ್ತೆ ಸೊಸೆ ಜಗಳ ಆಗ್ತದೆ ಎಂದು ಬಿಜೆಪಿಯವರು ಬೊಬ್ಬೆ ಹೊಡೆದರು. ಆದರೆ, ಗೃಹಲಕ್ಷ್ಮಿ ಹಣವನ್ನು ಕೂಡಿಸಿಟ್ಟು ಅತ್ತೆಯರು ಸೊಸೆಯರಿಗೆ ಬಳೆ ಅಂಗಡಿ ಹಾಕಿಕೊಟ್ಟಿದ್ದಾರೆ, ಟೈಲರಿಂಗ್ ಮೆಷಿನ್ ಕೊಡಿಸಿದ್ದಾರೆ. ಇಂಥವು ನೂರಾರು ಉದಾಹರಣೆಗಳಿವೆ. ತಾಯಿ ರೇಣುಕಾ ಯಲ್ಲಮ್ಮ ಕ್ಷೇತ್ರದ ಅಭಿವೃದ್ಧಿಗೆ ನಾವು ರೆಡಿ. ನಿಮ್ಮ ಸಹಕಾರ ಅಗತ್ಯ. ಕ್ಷೇತ್ರದಲ್ಲಿ ಅನಧಿಕೃತವಾಗಿ ಮಳಿಗೆಗಳನ್ನು ಹಾಕಬೇಡಿ. ಅನಧಿಕೃತವಾಗಿ ಇರುವವರಿಗೆ ಬೇರೆ ವ್ಯವಸ್ಥೆ ಮಾಡೋಣ. ಆದರೆ ಅಕ್ರಮವಾಗಿ ಯಾರೂ ಮಳಿಗೆ ಹಾಕದೆ ಸಹಕರಿಸಿ ಎಂದು ಮನವಿ ಮಾಡುತ್ತೇನೆಂದು ಹೇಳಿದರು.

## ಕಾವೇರಿ ಐದನೇ ಹಂತ ನೀರಿನ ಯೋಜನೆ ಲೋಕಾರ್ಪಣೆ

**ಬೆಂಗಳೂರು:** ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ ವತಿಯಿಂದ ಬಿಬಿಎಂಪಿ ವ್ಯಾಪ್ತಿಯ 110 ಹಳ್ಳಿಗಳಿಗೆ ನೀರು ಸರಬರಾಜು ಮಾಡುವ ಕಾವೇರಿ ಐದನೇ ಹಂತ ಕುಡಿಯುವ ನೀರಿನ ಯೋಜನೆ ಲೋಕಾರ್ಪಣೆ ಸಮಾರಂಭವನ್ನು ಅಕ್ಟೋಬರ್ 16 ರಂದು ಬೆಳಿಗ್ಗೆ 10.30 ಗಂಟೆಗೆ ಮಂಡ್ಯ ಜಿಲ್ಲೆಯ ಮಳವಳ್ಳಿ ತಾಲೂಕಿನ ತೊರಕಾಡನಹಳ್ಳಿ (ಟಿ.ಕೆ.ಹಳ್ಳಿ)ಯ ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ ಆವರಣದಲ್ಲಿ ಹಮ್ಮಿಕೊಳ್ಳಲಾಗಿದ್ದು, ಸನ್ಮಾನ್ಯ ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯ ಮತ್ತು ಉಪಮುಖ್ಯಮಂತ್ರಿಗಳು ಹಾಗೂ ಜಲಸಂಪನ್ಮೂಲ ಸಚಿವರು ಹಾಗೂ ಬೆಂಗಳೂರು ನಗರಾಭಿವೃದ್ಧಿ ಸಚಿವರಾದ ಡಿ.ಕೆ.ಶಿವಕುಮಾರ್ ಅವರು ಲೋಕಾರ್ಪಣೆ ಮಾಡಲಿದ್ದಾರೆ. ಮಳವಳ್ಳಿ ವಿಧಾನಸಭಾ ಕ್ಷೇತ್ರದ ಶಾಸಕರಾದ ಪಿ.ಎಂ.ನರೇಂದ್ರಸ್ವಾಮಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಲಿದ್ದಾರೆ. ಕಾರ್ಯಕ್ರಮದಲ್ಲಿ ಕೇಂದ್ರ ಹಣಕಾಸು ಮತ್ತು ಕಾರ್ಪೊರೇಟ್ ವ್ಯವಹಾರಗಳ ಸಚಿವರಾದ ಶ್ರೀಮತಿ ನಿರ್ಮಲಾ ಸೀತಾರಾಮನ್, ಕೇಂದ್ರ ಬೃಹತ್ ಕೈಗಾರಿಕೆ ಮತ್ತು ಉಕ್ಕು ಸಚಿವರಾದ ಹೆಚ್.ಡಿ.ಕುಮಾರಸ್ವಾಮಿ, ಸಣ್ಣ, ಅತಿ ಸಣ್ಣ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಕಾರ್ಮಿಕ ಮತ್ತು ಉದ್ಯೋಗ ರಾಜ್ಯ ಸಚಿವರಾದ ಕು. ಶೋಭಾ ಕರಂದ್ಲಾಜೆ, ಕೇಂದ್ರ ಜಲಶಕ್ತಿ ಮತ್ತು ರೈಲ್ವೇ ರಾಜ್ಯ ಖಾತೆ ಸಚಿವರಾದ ವಿ.ಸೋಮಣ್ಣ ಅವರು ವಿಶೇಷ ಆಹ್ವಾನಿತರಾಗಿ ಭಾಗವಹಿಸಲಿದ್ದಾರೆ. ರಾಜ್ಯ ಸಂಪುಟ ದರ್ಜೆಯ ಸಚಿವರು, ಶಾಸಕರು, ವಿಧಾನಪರಿಷತ್ ಸದಸ್ಯರು, ಹಿರಿಯ ಅಧಿಕಾರಿಗಳು ಸೇರಿದಂತೆ ಗಣ್ಯರು ಉಪಸ್ಥಿತರಿರಲಿದ್ದಾರೆ ಎಂದು ಪ್ರಕಟಣೆ ತಿಳಿಸಿದೆ.

## ನೀರಿನ ಅದಾಲತ್

**ಬೆಂಗಳೂರು:** ಬೆಂಗಳೂರು ಜಲ ಮಂಡಳಿಯ ವಿವಿಧ ಉಪ ವಿಭಾಗಗಳಾದ ಉತ್ತರ-2-1, ದಕ್ಷಿಣ-1-1, ದಕ್ಷಿಣ -2-1, ನೈರುತ್ಯ -1, ನೈರುತ್ಯ - 4, ಪೂರ್ವ -1-2, ಪೂರ್ವ -2-2, ಆಗ್ನೇಯ - 2, ಆಗ್ನೇಯ 5, ಪಶ್ಚಿಮ-1-2 ಮತ್ತು ಪಶ್ಚಿಮ-2-2, ಉಪವಿಭಾಗಗಳಲ್ಲಿ ನೀರಿನ ಬಿಲ್ಲು, ನೀರು ಮತ್ತು ಒಳಚರಂಡಿ ಸಂಪರ್ಕ ಕಲ್ಪಿಸುವಲ್ಲಿನ ವಿಳಂಬ, ಗೃಹ ಬಳಕೆಯಿಂದ ಗೃಹೇತರ ಬಳಕೆ ಪರಿವರ್ತನೆ ವಿಳಂಬ ಮತ್ತಿತರ ಕುಂದು ಕೊರತೆಗಳಿಗೆ ಸಂಬಂಧಿಸಿದ ಸಮಸ್ಯೆಗಳನ್ನು ಪರಿಹರಿಸಲು ಅಕ್ಟೋಬರ್ 10 ರಂದು ನೀರಿನ ಅದಾಲತ್‌ನ್ನು ಹಮ್ಮಿಕೊಳ್ಳಲಾಗಿದೆ. ಯಲಹಂಕ ಓಲ್ಡ್ ಟೌನ್, ಯಲಹಂಕ ನ್ಯೂ ಟೌನ್, ಅಟ್ಟೂರು, ಜೆ.ಪಿ.ನಗರ-2, ಕೊತ್ತನೂರು ದಿಣ್ಣೆ, ವಿಜಯಬ್ಯಾಂಕ್ ಕಾಲೋನಿ, ಅರಕೆರೆ ಮೈಕೋ ಲೇಔಟ್, ಜೆ.ಪಿ.ನಗರ 13, ಜಯನಗರ 4ನೇ ಟಿ ಬ್ಲಾಕ್, ಜಯನಗರ 4ನೇ ಬ್ಲಾಕ್, ಹೊಂಬೇಗೌಡನಗರ, ಬೈರಸಂದ್ರ, ಎಲ್.ಎಲ್. ಆರ್, ಚಿಕ್ಕಲಾಲ್‌ಬಾಗ್, ಬನ್ನಪ್ಪ ಪಾರ್ಕ್, ಸುಧಾಮನಗರ -1, ಕತ್ರಿಗುಪ್ಪೆ, ಹೊಸಕೆರೆಹಳ್ಳಿ, ದೇವಗಿರಿ-1, ಇಟ್ಟಮಡು, ಬನಗಿರಿನಗರ, ಎ.ನಾರಾಯಣಪುರ, ದೊಡ್ಡನಕುಂದಿ, ವಿಜ್ಞಾನನಗರ, ಬಾಣಸವಾಡಿ, ಓ.ಎಂ.ಬಿ.ಆರ್., ಲಿಂಗರಾಜಪುರಂ, ಕಸ್ತೂರಿನಗರ, ಹಲಸೂರು, ದೊಮ್ಮಲೂರು, ಮಾರತ್‌ಹಳ್ಳಿ, ಕೋರಮಂಗಲ- 12, ವಿಜಯನಗರ ಓ.ಎಚ್.ಟಿ, ಮೂಡಲಪಾಳ್ಯ, ನಾಗರಬಾವಿ, ಅನ್ನಪೂರ್ಣೇಶ್ವರಿನಗರ, ಸರ್.ಎಂ.ವಿ ಲೇಔಟ್, ಮೂಡಲಪಾಳ್ಯ ಸೇವಾ ಠಾಣೆಗಳಲ್ಲಿ ಅದಾಲತ್ ನಡೆಯಲಿದೆ. ಸಾರ್ವಜನಿಕರು ಕುಂದು ಕೊರತೆಗಳಿಗೆ ಸಂಬಂಧಿಸಿದಂತೆ ಮಂಡಳಿಯ 24/7 ದೂರು ನಿರ್ವಹಣಾ ಕೇಂದ್ರದ ಸಹಾಯವಾಣಿ 1916ಗೆ ಕರೆ ಮಾಡಿ ದೂರುಗಳನ್ನು ದಾಖಲಿಸಬಹುದು. ಹಾಗೂ ವಾಟ್ಸ್‌ಆಫ್ ಸಂಖ್ಯೆ 8762228888 ಸಂದೇಶದ ಮೂಲಕ ದೂರನ್ನು ಸಲ್ಲಿಸಬಹುದಾಗಿದೆ ಎಂದು ಬೆಂಗಳೂರು ಜಲ ಮಂಡಳಿಯ ಸಾರ್ವಜನಿಕ ಸಂಪರ್ಕಾಧಿಕಾರಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅರ್ಜಿ ಆಹ್ವಾನ

**ಬೆಂಗಳೂರು:** ಕಾರ್ಮಿಕರ ರಾಜ್ಯ ವಿಮಾ ಯೋಜನೆ ವೈದ್ಯಕೀಯ ಸೇವೆಗಳ ಇಲಾಖೆಯಿಂದ ವಿಮಾದಾರರು ಮತ್ತು ಅವರ ಕುಟುಂಬದವರಿಗೆ ದ್ವಿತೀಯ ಹಂತದ ಚಿಕಿತ್ಸೆಯನ್ನು ಕಾರ್ಮಿಕರ ರಾಜ್ಯ ವಿಮಾ ಯೋಜನೆ ವೈದ್ಯಕೀಯ ಸೇವೆಗಳ ಇಲಾಖೆಯ ಜೊತೆ ಖಾಸಗಿ ಆಸ್ಪತ್ರೆಗಳೊಂದಿಗೆ 2024 ಡಿಸೆಂಬರ್ 01 ರಿಂದ 2026ರ ನವೆಂಬರ್ 30 ರವರೆಗೆ 2 ವರ್ಷದ ಅವಧಿಗೆ ಹೊಂದಾಣಿಕೆ ಮಾಡಿಕೊಳ್ಳಲು ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಅರ್ಜಿಗಳನ್ನು ಅಕ್ಟೋಬರ್ 30 ರ ಸಂಜೆ 5.30 ರೊಳಗೆ ಸಲ್ಲಿಸಬೇಕು. ಅರ್ಜಿ ನಮೂನೆಗಳನ್ನು ಪಡೆಯಲು ಮತ್ತು ಅರ್ಜಿಗಳನ್ನು ಸಲ್ಲಿಸಲು ಕಾರ್ಮಿಕರ ರಾಜ್ಯ ವಿಮಾ ಯೋಜನೆ ವೈದ್ಯಕೀಯ ಸೇವೆಗಳ ನಿರ್ದೇಶನಲಯ, ಎಸ್. ನಿಜಲಿಂಗಪ್ಪ ರಸ್ತೆ, 2ನೇ ಬ್ಲಾಕ್ ರಾಜಾಜಿನಗರ, ಬೆಂಗಳೂರು 560 010 ಅಥವಾ ದೂರವಾಣಿ ಸಂಖ್ಯೆ: 080-23324216 ಅಥವಾ ಜಾಲತಾಣ https://esisms.karnataka.gov.in ನ್ನು ಸಂಪರ್ಕಿಸಿ ಪಡೆಯಬಹುದಾಗಿದೆ.

## ಬೃಹತ್ ಜಾಗೃತಿ ಜಾಥಾ

**ಬೆಂಗಳೂರು:** ರಾಷ್ಟ್ರೀಯ ಸೇವಾ ಯೋಜನೆ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಹಾಗೂ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಇವರುಗಳ ಸಹಯೋಗದೊಂದಿಗೆ Tobacco Free Youth Campaign 2.0 ಅಂಗವಾಗಿ ಬೃಹತ್ ಜಾಗೃತಿ ಜಾಥಾ ಕಾರ್ಯಕ್ರಮವನ್ನು ಅಕ್ಟೋಬರ್ 15 ರಂದು ಬೆಳಿಗ್ಗೆ 11 ಗಂಟೆಗೆ ವಿಧಾನಸೌಧದ ಗಾಂಧಿ ಪ್ರತಿಮೆಯ ಮುಂಭಾಗದಿಂದ ಶ್ರೀ ಕಂಠೀರವ ಕ್ರೀಡಾಂಗಣದವರೆಗೆ ಹಮ್ಮಿಕೊಳ್ಳಲಾಗಿದೆ. ಬೃಹತ್ ಜಾಗೃತಿ ಜಾಥಾ ಕಾರ್ಯಕ್ರಮಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಚಾಲನೆ ನೀಡಲಿದ್ದಾರೆ. ಕಾರ್ಯಕ್ರಮದಲ್ಲಿ ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖಾ ಸಚಿವರಾದ ದಿನೇಶ್ ಗುಂಡೂರಾವ್, ಸರ್ಕಾರದ ಮುಖ್ಯ ಕಾರ್ಯದರ್ಶಿ ಡಾ. ಶಾಲಿನಿ ರಜನೀಶ್, ಹಾಗೂ ಮತ್ತಿತರ ಗಣ್ಯರ ಸಮ್ಮುಖದಲ್ಲಿ 5000ಕ್ಕೂ ಹೆಚ್ಚು ಎನ್.ಎಸ್.ಎಸ್. ಸ್ವಯಂ ಸೇವಕರು / ವಿದ್ಯಾರ್ಥಿಗಳು ಭಾಗವಹಿಸಲಿದ್ದಾರೆ. ಹೆಚ್ಚಿನ ಮಾಹಿತಿಗಾಗಿ ಡಾ. ಪ್ರತಾಪ್ ಲಿಂಗಯ್ಯ, ರಾಜ್ಯ ಎನ್. ಎಸ್. ಎಸ್. ಅಧಿಕಾರಿ, ಮೊಬೈಲ್ ಸಂಖ್ಯೆ: 9742301000 ಸಂಪರ್ಕಿಸಬಹುದಾಗಿದೆ.

# ಬೆಂಗಳೂರು-ತುಮಕೂರು ಹೆದ್ದಾರಿಯಲ್ಲಿ ಟ್ರಾಫಿಕ್ ಜಾಮ್

**ನೆಲಮಂಗಲ:** ಸಾಲು ಸಾಲು ರಜೆ ಇರುವ ಹಿನ್ನೆಲೆಯಲ್ಲಿ ಬೆಂಗಳೂರು -ತುಮಕೂರು ರಾಷ್ಟ್ರೀಯ ಹೆದ್ದಾರಿಯಲ್ಲಿ ಸಂಚಾರ ದಟ್ಟಣೆ ಹೆಚ್ಚಾಗಿದೆ.

ಶುಕ್ರವಾರ ಆಯುಧ ಪೂಜೆ, ಶನಿವಾರ ವಿಜಯದಶಮಿ ಇರುವ ಕಾರಣ ಭಾರೀ ಸಂಖ್ಯೆಯಲ್ಲಿ ಊರಿನತ್ತ ಜನ ಕಾರಿನಲ್ಲಿ ಪ್ರಯಾಣಿಸುತ್ತಿದ್ದಾರೆ.

ನೆಲಮಂಗಲ ಬಳಿ ಕಿಲೋಮೀಟರ್ ದೂರದವರೆಗೆ ಟ್ರಾಫಿಕ್ ಜಾಮ್ ಉಂಟಾಗಿದೆ. ನೆಲಮಂಗಲ ಕುಣಿಗಲ್ ಬೈಪಾಸ್ ನಿಂದ ಅರಿಶಿನುಕುಂಟೆವರೆಗೂ ವಾಹನಗಳು ಸಾಲುಗಟ್ಟಿ ನಿಂತಿವೆ.

ಪ್ರತಿಬಾರಿಯೂ ಹಬ್ಬ ಹರಿದಿನಗಳಲ್ಲಿ ಬೆಂಗಳೂರು- ತುಮಕೂರು ರಸ್ತೆಯಲ್ಲಿ ಟ್ರಾಫಿಕ್ ಜಾಮ್ ಸಾಮಾನ್ಯ. ಗೊರಗುಂಟೆ ಪಾಳ್ಯ ಮೂಲಕ 18 ಜಿಲ್ಲೆಗಳಿಗೆ ವಾಹನಗಳು ಸಂಚರಿಸುವ ಕಾರಣ ಈ ರಸ್ತೆಯಲ್ಲಿ ವಾಹನ ದಟ್ಟಣೆ ಯಾವಾಗಲೂ ಜಾಸ್ತಿ ಇರುತ್ತದೆ.



# 2 ಟಿಪ್ಪರ್ ಲಾರಿ, ಕಾರು ನಡುವೆ ಭೀಕರ ರಸ್ತೆ ಅಪಘಾತ; ಇಬ್ಬರು ಗಂಭೀರ

**ಆನೇಕಲ್:** ಎರಡು ಟಿಪ್ಪರ್ ಲಾರಿಗಳು ಹಾಗೂ ಕಾರಿನ ನಡುವೆ ಸರಣಿ ಅಪಘಾತ ಸಂಭವಿಸಿದ ಪರಿಣಾಮ ಇಬ್ಬರು ಗಂಭೀರ ಗಾಯಗೊಂಡ ಘಟನೆ ಬೆಂಗಳೂರು ಗ್ರಾಮಾಂತರ ಜಿಲ್ಲೆ ಹೊಸಕೋಟೆ ಕೋಲಾರ ಹೆದ್ದಾರಿಯ ಗೊಟ್ಟಿಪುರ ಗೇಟ್ ಬಳಿ ನಡೆದಿದೆ.

ಇಂದು ಮುಂಜಾನೆ ಸಮಯದಲ್ಲಿ ಈ ಘಟನೆ ನಡೆದಿದ್ದು, ಎರಡು ಲಾರಿಗಳ ನಡುವೆ ಸಿಲುಕಿ ಕಾರು ನಜ್ಜುಗುಜ್ಜಾಗಿದೆ. ಘಟನೆಯಲ್ಲಿ ಕಾರಿನಲ್ಲಿದ್ದ ಇಬ್ಬರಿಗೂ ಸಹ ಗಂಭೀರ ಗಾಯಗಳಾಗಿದೆ. ಇನ್ನು ಗಾಯಾಳುಗಳನ್ನು ಹೊಸಕೋಟೆ ಸಮೀಪದ ಖಾಸಗಿ ಆಸ್ಪತ್ರೆಗೆ ದಾಖಲಿಸಲಾಗಿದೆ. ಅಪಘಾತ ಹಿನ್ನೆಲೆ ಹೊಸಕೋಟೆ ಹೆದ್ದಾರಿಯಲ್ಲಿ ಕಿಲೋಮೀಟರ್ ಗಟ್ಟಲೆ ಟ್ರಾಫಿಕ್ ಜಾಮ್ ಉಂಟಾಗಿತ್ತು.



ಸ್ಥಳಕ್ಕೆ ಹೊಸಕೋಟೆ ಸಂಚಾರಿ ಪೋಲೀಸರು ಭೇಟಿ ನೀಡಿ ವಾಹನಗಳನ್ನು ಹೆದ್ದಾರಿಯಿಂದ ಪಕ್ಕಕ್ಕೆ ನಿಲ್ಲಿಸಿ ಟ್ರಾಫಿಕ್ ಜಾಮ್ ಕ್ಲಿಯರ್ ಮಾಡಿದ್ದಾರೆ. ಘಟನೆ ಸಂಬಂಧ ಹೊಸಕೋಟೆ ಸಂಚಾರಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಿಕೊಂಡು ತನಿಖೆ ಮುಂದುವರಿಸಲಾಗಿದೆ.

# ಬಿಳಿಗಿರಿ ರಂಗನಬೆಟ್ಟದ ಅಂಚೆ ಕಚೇರಿ ಮೇಲ್ದರ್ಜೆಗೆ

**ಚಾಮರಾಜನಗರ:** ಶಾಖಾ ಅಂಚೆ ಕಚೇರಿಯಾಗಿರುವ ಬಿಳಿಗಿರಿ ರಂಗನಬೆಟ್ಟದ ಅಂಚೆ ಕಚೇರಿಯನ್ನು ಉಪ ಅಂಚೆ ಕಚೇರಿಯನ್ನಾಗಿ ಮೇಲ್ದರ್ಜೆಗೆ ಏರಿಸಲು ಪರಿಶೀಲನೆ ನಡೆಸಿ ಅಗತ್ಯ ಕ್ರಮ ಕೈಗೊಳ್ಳುವುದಾಗಿ ಕರ್ನಾಟಕ ವೃತ್ತದ ಮುಖ್ಯ ಪೋಸ್ಟ್ ಮಾಸ್ಟರ್ ಜನರಲ್ ಶ್ರೀ .ಎಸ್. ರಾಜೇಂದ್ರ ಕುಮಾರ್ ಭರವಸೆ ನೀಡಿದರು. ಇತ್ತೀಚೆಗೆ ಬಿಳಿಗಿರಿ ರಂಗನಬೆಟ್ಟದ ವಿವೇಕಾನಂದ ಗಿರಿಜನ ಕಲ್ಯಾಣ ಕೇಂದ್ರದಲ್ಲಿ ರಾಷ್ಟ್ರೀಯ ಅಂಚ ಸಪ್ತಾಹದ ಅಂಗವಾಗಿ ನಂಜನಗೂಡು ಅಂಚೆ ವಿಭಾಗದ ವತಿಯಿಂದ ಏರ್ಪಡಿಸಲಾಗಿದ್ದ ಅಂತ್ಯೋದಯ ದಿವಸ್ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡುತ್ತಿದ್ದ ಅವರು ಅಂಚೆ ಇಲಾಖೆಯು ಸಮಾಜದ ಎಲ್ಲಾ ರೀತಿಯ ಜನರಿಗೆ ಸಮಾನವಾದ ಸೇವೆಯನ್ನು ನೀಡುತ್ತಿದೆ ಎಂದು ತಿಳಿಸಿದರು.

ಪ್ರಾಸ್ತವಿಕವಾಗಿ ಮಾತನಾಡಿದ ದಕ್ಷಿಣ ಕರ್ನಾಟಕ ಅಂಚೆ ವಲಯದ ಪೋಸ್ಟ್‌ಮಾಸ್ಟರ್ ಜನರಲ್ ಡಾ. ಚಂದ್ರಶೇಖರ್ ಕಾಕುಮನು ಅವರು ಅಂಚೆ ಇಲಾಖೆಯಲ್ಲಿ ಹಲವು ಜನಪರವಾದ ಉಳಿತಾಯ ಯೋಜನೆಗಳಿದ್ದು ಅವುಗಳ ಉಪಯೋಗವನ್ನು ಎಲ್ಲರೂ ಪಡೆದುಕೊಳ್ಳಬೇಕೆಂದು ತಿಳಿಸಿ ನಮ ಅಂಚೆ ಇಲಾಖೆಯ ಯೋಜನೆಗಳು ಎಷ್ಟರ ಮಟ್ಟಿಗೆ ನಿಮಗೆ ತಲುಪಿವೆ ಎಂಬುದನ್ನು ತಿಳಿದುಕೊಳ್ಳುವ ಉದ್ದೇಶದಿಂದ ಈ ಕಾರ್ಯಕ್ರಮವನ್ನು ಆಯೋಜನೆ ಮಾಡಲಾಗಿದೆ ಎಂದು ಹೇಳಿದರು.

ಅಂಚೆ ಕಚೇರಿಗಳು ಭಾರತ ಸರ್ಕಾರದ ಪ್ರಮುಖ ಕೇಂದ್ರಗಳಾಗಿದ್ದು, ನಿಮ್ಮ ಊರಿನಲ್ಲಿರುವ ಅಂಚೆ ಕಚೇರಿ ಎಷ್ಟರ ಮಟ್ಟಿಗೆ ನಿಮಗೆ ತಲುಪಿದೆ ಎಂಬುದನ್ನು ತಿಳಿದುಕೊಳ್ಳುವುದೇ ಈ ಕಾರ್ಯಕ್ರಮದ ಉದ್ದೇಶ ಎಂದು ತಿಳಿಸಿದ ದಕ್ಷಣ ಕರ್ನಾಟಕ ಅಂಚೆ ವಲಯದ ನಿರ್ದೇಶಕರಾದ ಶ್ರೀ ಸಂದೇಶ್ ಮಹದೇವಪ್ಪ ಅಂಚೆ ಕಚೇರಿಯ ಸದುಪಯೋಗವನ್ನು ಎಲ್ಲರೂ ಪಡೆದುಕೊಳ್ಳಬೇಕೆಂದು ತಿಳಿಸಿದರು.



ಅಂಚೆ ಇಲಾಖೆಯ ಎಲ್ಲಾ ಉನ್ನತ ಅಧಿಕಾರಿಗಳು ಬಿಳಿಗಿರಿ ರಂಗನಬೆಟ್ಟದಲ್ಲಿ ಕಾರ್ಯಕ್ರಮವನ್ನು ಆಯೋಜನೆ ಮಾಡಿದ್ದಕ್ಕಾಗಿ ಧನ್ಯವಾದಗಳನ್ನು ತಿಳಿಸಿದ ಚಾಮರಾಜನಗರ ಜಿಲ್ಲಾ ಬುಡಕಟ್ಟು ಮತ್ತು ಸೋಲಿಗ ಅಭಿವೃದ್ಧಿ ಸಂಘದ ಅಧ್ಯಕ್ಷರಾದ ಡಾ. ಮಾದೇಗೌಡ ಕೇಂದ್ರ ಸರ್ಕಾರದ ಭದ್ರತೆ ಇರುವುದರಿಂದ ಅಂಚೆ ಇಲಾಖೆಯಲ್ಲಿ ತೊಡಗಿಸುವ ಹಣಕ್ಕೆ ರಕ್ಷಣೆ ಇರುತ್ತದೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಸೋಲಿಗ ಬುಡಕಟ್ಟುಗಳಿಗೆ ಸೇರಿದ ಜನರಿಗೆ ಸಾಂಕೇತಿಕವಾಗಿ ಉಳಿತಾಯ ಖಾತೆಯ ಪಾಸ್ ಪುಸ್ತಕ ಮತ್ತು ಗ್ರಾಮೀಣ ಅಂಚೆ ಜೀವಿಮೆಯ ಬಾಂಡ್ ಗಳನ್ನು ವಿತರಿಸಲಾಯಿತು. ಉಳಿತಾಯ ಖಾತೆಗಳು ಮತ್ತು ಗ್ರಾಮೀಣ ಅಂಚೆ ಜೀವ ವಿಮೆಯ ಮೊದಲ ಕಂತಿನ ಹಣವನ್ನು ಅಂಚೆ ಇಲಾಖೆ ಸಿಬ್ಬಂದಿಗಳಾದ ಮಂಜುನಾಥ್, ವಸುಂದರ, ಹರವೆ ಮಹದೇವಸ್ವಾಮಿ, ಎಸ್. ಶ್ರೀನಿವಾಸ್ ಕೊಡುಗೆ ನೀಡಿದರು. ಕಾರ್ಯಕ್ರಮದಲ್ಲಿ ವಿವೇಕಾನಂದ ಗಿರಿಜನ ಕಲ್ಯಾಣ ಕೇಂದ್ರದ ಸುರೇಶ್, ಬಿಳಿಗಿರಿ ರಂಗನಬೆಟ್ಟ ಗ್ರಾಮ ಪಂಚಾಯಿತಿ ಅಧ್ಯಕ್ಷರಾದ ಪ್ರತೀಪ್ ಕುಮಾರ್, ಉಪಾಧ್ಯಕ್ಷೆ ಕಮಲಮ್ಮ, ಹಾಲಿ ಮತ್ತು ಮಾಜಿ ಸದಸ್ಯರುಗಳು ಹಾಗೂ ಗ್ರಾಮದ ಮತ್ತು ಸೋಲಿಗರ ಪೋಡಿಗಳ ಮುಖಂಡರುಗಳು, ಅಂಚೆ ಇಲಾಖೆಯ ಸಹಾಯಕ ನಿರ್ದೇಶಕರಾದ ಶ್ರೀ ಗ್ರೆಗರಿ , ನಂಜನಗೂಡು ಅಂಚೆ ವಿಭಾಗದ ಮಾರುಕಟ್ಟೆ ವ್ಯವಸ್ಥಾಪಕ ಮಹದೇವಪ್ಪ, ಅಂಚೆ ನಿರೀಕ್ಷಕರುಗಳಾದ ಸ್ವಾತಿ, ಪ್ರಧ್ವಿ, ಶ್ರೀದರ್, ಸುಪ್ರಿಯಾ, ಅಂಚೆ ಮೇಲ್ವಿಚಾರಕಾರದ ಭಾಗ್ಯರಾಜು, ಮಹೇಂದ್ರ, ಬಿಳಿಗಿರಿ ರಂಗನಬೆಟ್ಟದ ಅಂಚೆ ಸಿಬ್ಬಂದಿ, ಅಂಚೆ ಇಲಾಖೆಯ ವಿನಯ್, ನಾಗೇಂದ್ರ, ಕುಶಾಲ್, ಹೇಮಂತ್, ಮಹೇಶ್, ರವಿ, ರಾಜೇಂದ್ರ, ಶಿವಪ್ರಸಾದ್ ಮತ್ತು ನೆರೆಯ ಅಂಚೆ ಕಚೇರಿಗಳ ಸಿಬ್ಬಂದಿ ವರ್ಗ ಹಾಜರಿದ್ದರು.

ನಂಜನಗೂಡು ಅಂಚೆ ಅಧೀಕ್ಷಕರಾದ ಶ್ರೀ ಎನ್. ಗೋವಿಂದರಾಜು ಸ್ವಾಗತಿಸಿ, ಸಹಾಯಕ ಅಂಚೆ ಅಧೀಕ್ಷಕರಾದ ಶ್ರೀ ಕೃಷ್ಣದಾಸ್ ವಂದಿಸಿದರು. ಗಿರೀಶ್ ಕಾರ್ಯಕ್ರಮವನ್ನು ನಿರೂಪಿಸಿದರು.

## ಅರ್ಜಿಆಹ್ವಾನ

**ಮಂಡ್ಯ:** ಮಂಡ್ಯಜಂಟಿ ಕೃಷಿ ನಿರ್ದೇಶಕಡಿಕಛೇರಿಯಅಧೀನಕ್ಕೆ ಒಳಪಡುವ ಕಛೇರಿಗಳಲ್ಲಿ 2024-25ನೇ ಸಾಲಿಗೆ ಆತ್ಮಯೋಜನೆಯಡಿ ನೇರಗುತ್ತಿಗೆಆಧಾರದ ಮೇರೆಗೆ ತಾಲ್ಲೂಕು ತಾಂತ್ರಿಕ ವ್ಯವಸ್ಥಾಪಕರು-03 ಹುದ್ದೆ ಮತ್ತು ಸಹಾಯಕ ತಾಂತ್ರಿಕ ವ್ಯವಸ್ಥಾಪಕರು-02 ಹುದ್ದೆಗೆ ತಾತ್ಕಾಲಿಕವಾಗಿ ನೇರಗುತ್ತಿಗೆ ಆಧಾರದ ಮೇರೆಗೆಕಾರ್ಯ ನಿರ್ವಹಿಸುವಲ್ಲಿ ಆಸಕ್ತ ಹಾಗೂ ಅರ್ಹತೆ ಹೊಂದಿರುವ ಅಭ್ಯರ್ಥಿಗಳಿಂದ ಒಟ್ಟು 05 ಹುದ್ದೆಗಳಿಗೆ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ತಾಲ್ಲೂಕುತಾಂತ್ರಿಕ ವ್ಯವಸ್ಥಾಪಕ ಹುದ್ದೆಗೆಕೃಷಿ/ ಕೃಷಿ ಸಂಬಂಧಿತ ವಿಷಯಗಳಲ್ಲಿ ಸ್ನಾತಕೋತ್ತರ ಪದವಿ ಜೊತೆಗೆಕಂಪ್ಯೂಟರ್‌ಜ್ಞಾನ ಹಾಗೂ ಕೃಷಿ ಸಂಬಂಧಿತ ಚಟುವಟಿಕೆಗಳಲ್ಲಿ ಕನಿಷ್ಠ 2 ವರ್ಷಗಳ ಕ್ಷೇತ್ರ ಮಟ್ಟದಲ್ಲಿಕರ್ತವ್ಯ ಸೇವಾ ಅನುಭವ ಹೊಂದಿದ ಮತ್ತುಸ 'ಹಾಯಕತಾಂತ್ರಿಕವ್ಯವಸ್ಥಾಪಕ ಹುದ್ದೆಗೆಕೃಷಿ/ಕೃಷಿ ಸಂಬಂಧಿತ ವಿಷಯಗಳಲ್ಲಿ ಪದವಿ/ಸ್ನಾತಕೋತ್ತರ ಪದವಿ ಪಡೆದುಒಂದು ವರ್ಷದ ಸೇವಾ ಅನುಭವಇರುವ ಅಭ್ಯರ್ಥಿಗಳು ಅರ್ಜಿ ಸಲ್ಲಿಸಬಹುದು. ಅರ್ಜಿ ಸಲ್ಲಿಸಲುಅಕ್ಟೋಬರ್ 25ಕೊನೆಯ ದಿನವಾಗಿದ್ದು,ಆಸಕ್ತರು ಮಂಡ್ಯಜಂಟಿ ಕೃಷಿ ನಿರ್ದೇಶಕರ ಕಚೇರಿಯಲ್ಲಿ ಅರ್ಜಿ ಪಡೆದು, ಪೂರ್ಣ ಮಾಹಿತಿಯೊಂದಿಗೆಸೀಲು ಮಾಡಿದ ಲಕೋಟೆಯಲ್ಲಿಕಚೇರಿಗೆ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗಾಗಿಜಂಟಿ ಕೃಷಿ ನಿರ್ದೇಶಕರಕಛೇರಿಯನ್ನು ಸಂಪರ್ಕಿಸಬಹುದು.



ವಿಜಯಪುರ ಪಟ್ಟಣದ ಪ್ರಮುಖ ಬೀದಿಗಳಲ್ಲಿ ರಾಷ್ಟ್ರೀಯ ಸ್ವಯಂಸೇವಕ ಸಂಘದ ವತಿಯಿಂದ ದಸರೆಯ ಪಥಸಂಚಲನ ಏರ್ಪಡಿಸಲಾಗಿತ್ತು. ಪಟ್ಟಣ ಹಾಗೂ ಸುತ್ತಮುತ್ತಲ ಗ್ರಾಮಗಳ ನೂರಾರು ಮಂದಿ ಕಾರ್ಯಕರ್ತರು ವಾದ್ಯವೃಂದದೊಂದಿಗೆ ದಂಡ ಧಾರಿಗಳಾಗಿ ಪಥಸಂಚಲನೆಯಲ್ಲಿ ಭಾಗವಹಿಸಿದ್ದರು.

## ಬ್ಯೂಟಿ ಪಾರ್ಲರ್ ಉಚಿತ ತರಬೇತಿ

**ಬೆಂಗಳೂರು ಗ್ರಾಮಾಂತರ:** ಶ್ರೀ ಧರ್ಮಸ್ಥಳ ಮಂಜುನಾಥೇಶ್ವರ ಶಿಕ್ಷಣ ಟ್ರಸ್ಟ್ ಮತ್ತು ಕೆನರಾ ಬ್ಯಾಂಕ್ನ ಸಹಯೋಗದಲ್ಲಿ ನಡೆಸುತ್ತಿರುವ ರುಡ್‌ಸೆಟ್ ಸಂಸ್ಥೆಯ ವತಿಯಿಂದ ಹಮ್ಮಿಕೊಂಡಿರುವ ಬ್ಯೂಟಿ ಪಾರ್ಲರ್ ಕುರಿತ 30 ದಿನಗಳ ಉಚಿತ ತರಬೇತಿಯು ನವೆಂಬರ್ 05 ರಿಂದ ಪ್ರಾರಂಭವಾಗಲಿದ್ದು, ಗ್ರಾಮೀಣ ಆಸಕ್ತ ನಿರುದ್ಯೋಗಿ ಯುವತಿಯರು ಅರ್ಜಿ ಸಲ್ಲಿಸಬಹುದಾಗಿದೆ. ಆಸಕ್ತರು 18 ರಿಂದ 45 ವರ್ಷ ವಯೋಮಾನದವರಾಗಿದ್ದು, ಕನ್ನಡ ಭಾಷೆ ಓದಲು ಮತ್ತು ಬರೆಯಲು ಬಲ್ಲವರಾಗಿರಬೇಕು. ಬಿಪಿಎಲ್ ಕಾರ್ಡ್ ಅಥವಾ ಜಾಬ್ ಕಾರ್ಡ್ ಹಾಗೂ ಆಧಾರ್ ಕಾರ್ಡ್ನ್ನು ಕಡ್ಡಾಯವಾಗಿ ಹೊಂದಿರುವ ಗ್ರಾಮೀಣ ಅಭ್ಯರ್ಥಿಗಳಿಗೆ ಆದ್ಯತೆ ನೀಡಲಾಗುವುದು. ಅರ್ಜಿ ಸಲ್ಲಿಸಲು ಅಕ್ಟೋಬರ್ 18 ಕೊನೆಯ ದಿನವಾಗಿದೆ. ತರಬೇತಿಯು ಕಡ್ಡಾಯವಾಗಿ ವಸತಿಯುತವಾಗಿದ್ದು, ತರಬೇತಿಯ ಅವಧಿಯಲ್ಲಿ ಉಚಿತವಾಗಿ ಊಟ ಮತ್ತು ವಸತಿ ನೀಡಲಾಗುವುದು ಹಾಗೂ ತರಬೇತಿ ಪೂರ್ಣಗೊಂಡ ನಂತರ ಕೇಂದ್ರ ಸರ್ಕಾರದ ಗ್ರಾಮೀಣಾಭಿವೃದ್ಧಿ ಸಚಿವಾಲಯದಿಂದ ಪ್ರಮಾಣಪತ್ರವನ್ನು ವಿತರಿಸಲಾಗುವುದು. ಆಸಕ್ತರು ಅರ್ಜಿ ಸಲ್ಲಿಸಲು ಹಾಗೂ ಹೆಚ್ಚಿನ ಮಾಹಿತಿಗಾಗಿ ರುಡ್‌ಸೆಟ್ ಸಂಸ್ಥೆ, ಅರಿಶಿನಕುಂಟೆ, ನೆಲಮಂಗಲ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ, ಮೊಬೈಲ್ ಸಂಖ್ಯೆ: 9380162042, 9740982585 ಅನ್ನು ಸಂಪರ್ಕಿಸಬಹುದಾಗಿದೆ ಎಂದು ರುಡ್‌ಸೆಟ್ ಸಂಸ್ಥೆಯ ಬೆಂಗಳೂರು ಶಾಖೆಯ ನಿರ್ದೇಶಕರಾದ ರವಿಕುಮಾರ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಬಿಳಿಗಿರಿರಂಗನಾಥಸ್ವಾಮಿ ರಾಜಗೋಪುರಕ್ಕೆ ಮೆಟ್ಟಿಲುಗಳ ನಿರ್ಮಾಣ ಕಾಮಗಾರಿ ಪ್ರಾರಂಭ: ಪ್ರವಾಸಿಗರ ಪರದಾಟ

**ಚಾಮರಾಜನಗರ:** ಜಿಲ್ಲೆಯ ಯಳಂದೂರು ತಾಲೂಕಿನ ಬಿಳಿಗಿರಿರಂಗನಬೆಟ್ಟದ ಬಿಳಿಗಿರಿರಂಗನಾಥಸ್ವಾಮಿ ದೇವಸ್ಥಾನದ ರಾಜಗೋಪುರಕ್ಕೆ ಮೆಟ್ಟಿಲುಗಳ ನಿರ್ಮಾಣ ಕಾಮಗಾರಿ ಪ್ರಾರಂಭವಾಗಿದ್ದು ಭಕ್ತರಿಗೆ ಪರ್ಯಾಯ ಮಾರ್ಗವಿಲ್ಲದೇ ಮೆಟ್ಟಿಲುಗಳ ಮೂಲಕ ತೆರಳಲು ತೊಂದರೆಯಾಗುತ್ತಿದೆ.

ಬಿಳಿಗಿರಿರಂಗನಬೆಟ್ಟಕ್ಕೆ ದಿನನಿತ್ಯ ಭಕ್ತರು ಹಾಗೂ ಪ್ರವಾಸಿಗರು ಸಾವಿರಾರು ಸಂಖ್ಯೆಯಲ್ಲಿ ಆಗಮಿಸುತ್ತಾರೆ. ಈಗಾಗಲೇ ದೇವಸ್ಥಾನದ ಜೀರ್ಣೋದ್ಧಾರ, ರಾಜಗೋಪುರ ನಿರ್ಮಾಣ ಮಾಡಲಾಗಿದೆ. ಉಳಿದಂತೆ ರಾಜಗೋಪುರಕ್ಕೆ ಇರುವ ಹಳೆಯ ಮೆಟ್ಟಿಲುಗಳನ್ನು ಕಿತ್ತು ಹಾಕಿ ಹೊಸ ಮೆಟ್ಟಿಗಳು ನಿರ್ಮಾಣ ಕಾಮಗಾರಿ ಆರಂಭಿಸಲಾಗಿದೆ. ಜಿಲ್ಲೆ ಸೇರಿದಂತೆ ರಾಜ್ಯದ ವಿವಿಧೆಡೆಗಳಿಂದ ಬಸ್, ಕಾರುಗಳ ಮೂಲಕ ಆಗಮಿಸುವ ಭಕ್ತರು ಹಾಗೂ ಪ್ರವಾಸಿಗರು ಬೆಟ್ಟದ ರಥದ ಬೀದಿಯಲ್ಲಿ ಇಳಿದು ಮೆಟ್ಟಿಲುಗಳ ಮೂಲಕ ದೇವಸ್ಥಾನಕ್ಕೆ ತೆರಳುವುದು ರೂಢಿ. ಆದರೆ, ಹೊಸ ಮೆಟ್ಟಿಲುಗಳ ನಿರ್ಮಾಣಕ್ಕೆ ಕಾಮಗಾರಿ ಆರಂಭಿಸಿರುವುದರಿಂದ ದೇವಸ್ಥಾನಕ್ಕೆ ತೆರಳಲು ಮೆಟ್ಟಿಲುಗಳಿಲ್ಲ. ಇದರಿಂದ ರಥದ ಬೀದಿಯಿಂದ ರಾಮಮಂದಿರದ ತನಕ ಮೆಟ್ಟಿಲು ಹತ್ತುವ ಭಕ್ತರು ಅಲ್ಲಿಂದ ಮೇಲಕ್ಕೆ ತೆರಳು ಪರದಾಡುವಂತಹ ಪರಿಸ್ಥಿತಿ



ನಿರ್ಮಾಣವಾಗಿದೆ. ಇದರಿಂದ ರಾಮಮಂದಿರದ ಬಳಿಯಿಂದ ಅಕ್ಕಪಕ್ಕದ ಮನೆಯ ಕಿರಿದಾದ ಜಾಗಗಳಲ್ಲಿ ತೆರಳುತ್ತಾರೆ. ಇನ್ನೂ ಕೆಲವರಿಗೆ ಯಾವ ಕಡೆ ಹೋಗಬೇಕು ಎಂದು ಗೊತ್ತಾಗದೇ ಪರದಾಡುವಂತಹ ಪರಿಸ್ಥಿತಿ ನಿರ್ಮಾಣವಾಗಿದೆ. ಈ ಸಂಬಂಧ ದೇವಸ್ಥಾನದ ಆಡಳಿತ ಮಂಡಳಿ ಭಕ್ತರಿಗೆ ಅನುಕೂಲ ಕಲ್ಪಿಸುವ ನಿಟ್ಟಿನಲ್ಲಿ ಪರ್ಯಾಯ ಮಾರ್ಗಗಳ ವ್ಯವಸ್ಥೆ ಕೂಡ ಮಾಡಿಲ್ಲ. ಅಲ್ಲದೇ ಬೆಟ್ಟದಲ್ಲಿರುವ ಬಸ್ ನಿಲ್ದಾಣದ ಬಳಿಯಿಂದ ರಸ್ತೆ ಮೂಲಕ ದೇವಸ್ಥಾನಕ್ಕೆ ತೆರಳಲು ಅವಕಾಶವಿದೆ.

ಅಲ್ಲಿಯೂ ಕೂಡ ಯಾವುದೇ ನಾಮಫಲಕ ಅಳವಡಿಸದ ಕಾರಣ ರಸ್ತೆ ಮೂಲಕ ತೆರಳದೇ ಮೆಟ್ಟಿಲುಗಳ ಬಳಿ ಬರುವ ಭಕ್ತರು ದೇವಸ್ಥಾನಕ್ಕೆ ದಾರಿ ಇಲ್ಲದೇ ಪರದಾಡುತ್ತಿದ್ದಾರೆ. ಇನ್ನಾದರೂ ಸಂಬಂಧಪಟ್ಟವರು ಇತ್ತ ಗಮನಹರಿಸಿ ಮೆಟ್ಟಿಗಳ ಮೂಲಕ ಹತ್ತುವ ಭಕ್ತರಿಗೆ ರಾಮಮಂದಿರದಿಂದ ಮೇಲಕ್ಕೆ ತೆರಳಲು ಪರ್ಯಾಯ ಮಾರ್ಗ ಕಲ್ಪಿಸಬೇಕು. ಇಲ್ಲದಿದ್ದರೆ ಬಸ್ ನಿಲ್ದಾಣದ ಬಳಿಯೇ ನಾಮಫಲಕ ಅಳವಡಿಸಿ ರಸ್ತೆ ಮೂಲಕ ತೆರಳಲು ಅನುಕೂಲ ಕಲ್ಪಿಸಿಕೊಡಬೇಕಿದೆ.

# ಚಿಕ್ಕಬಳ್ಳಾಪುರದಲ್ಲಿ ಕೊಟ್ಪ ದಾಳಿ 22 ಪ್ರಕರಣ ದಾಖಲು; ರೂ.2500 ದಂಡ ಸಂಗ್ರಹಣೆ

**ಚಿಕ್ಕಬಳ್ಳಾಪುರ:** ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ತಂಬಾಕು ನಿಯಂತ್ರಣ ಕೋಶ ಮತ್ತು ತಾಲ್ಲೂಕು ತನಿಖಾದಳ ಚಿಕ್ಕಬಳ್ಳಾಪುರ ಇವರ ವತಿಯಿಂದ ತಂಬಾಕು ಮುಕ್ತ ಯುವ ಅಭಿಯಾನ 2.0 ಕಾರ್ಯಕ್ರಮದ ಪ್ರಯುಕ್ತ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳ ಮತ್ತು ಜಿಲ್ಲಾ ಸರ್ವೇಕ್ಷಣಾಧಿಕಾರಿಗಳ ಮುಂದಾಳತ್ವದಲ್ಲಿ ಕೋಟ್ಪಾದಾಳಿಯನ್ನು ಮಂಗಳವಾರ ಚಿಕ್ಕಬಳ್ಳಾಪುರ ನಗರದ ಬಿ.ಬಿ ರಸ್ತೆ, ಕೆ.ಎಸ್.ಆರ್.ಟಿ.ಸಿ ಬಸ್ ನಿಲ್ದಾಣದಲ್ಲಿ ಹಮ್ಮಿಕೊಳ್ಳಲಾಗಿತ್ತು. ಈ ಸಂದರ್ಭದಲ್ಲಿ ನಿಯಮಬಾಹಿರವಾಗಿ ತಂಬಾಕು ಪದಾರ್ಥಗಳ ಮಾರಾಟ ಮಾಡುತ್ತಿದ್ದ ಅಂಗಡಿ ಮಾಲೀಕರಿಗೆ ದಂಡ ವಿಧಿಸಲಾಯಿತು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಮಹೇಶ್ ಕುಮಾರ್ ಅವರು ಮಾತನಾಡಿ, ತಂಬಾಕಿನಲ್ಲಿ 700 ವಿಷಯುಕ್ತ ರಾಸಾಯನಿಕಗಳಿದ್ದು, ತಂಬಾಕು ಉತ್ಪನ್ನಗಳ ಸೇವನೆಯಿಂದ ದೀರ್ಘಕಾಲದ ಆರೋಗ್ಯ ಸಂಬಂಧಿತ ಕಾಯಿಲೆಗಳು ಬರುತ್ತವೆ. ತಂಬಾಕು ಸೇವನೆಯನ್ನು ತ್ಯಜಿಸಿ ಆರೋಗ್ಯಯುತವಾಗಿ ಬಾಳಬೇಕೆಂದು ಸಲಹೆ ನೀಡಿದರು.

ಜಿಲ್ಲಾ ಸರ್ವೇಕ್ಷಣಾಧಿಕಾರಿ ಡಾ. ಕೃಷ್ಣಪ್ರಸಾದ್ ಅವರು ಮಾತನಾಡಿ, ಸಾರ್ವಜನಿಕ ಪ್ರದೇಶದಲ್ಲಿ ಧೂಮಪಾನನ್ನು ನಿಷೇಧಿಸಿದ್ದು, ಉಲಂಘಿಸಿದಲ್ಲಿ ದಂಡವಿಧಿಸಲಾಗುವುದು. ಅಂಗಡಿ ಮಾಲೀಕರು ಕಡ್ಡಾಯವಾಗಿ ಧೂಮಪಾನ ನಿಷೇಧಿತ ವಲಯ ಎಂಬ ನಾಮಫಲಕನ್ನು ಅಳವಡಿಸಿರಬೇಕು. ಇಲ್ಲವಾದಲ್ಲಿ ಅಂಗಡಿ ಮಾಲೀಕರ



ವಿರುದ್ಧ ಕ್ರಮ ಕೈಗೊಳ್ಳಲಾಗುವುದು. ದಾಳಿ ಸಂದರ್ಭದಲ್ಲಿ ಒಟ್ಟು 22 ಪ್ರಕರಣಗಳಲ್ಲಿ 2500 ದಂಡ ವಿಧಿಸಿ ಸಂಗ್ರಹಣೆ ಮಾಡಲಾಗಿದೆ ಎಂದು ತಿಳಿಸಿದರು. ತಾಲ್ಲೂಕು ಆರೋಗ್ಯಾಧಿಕಾರಿ ಡಾ.ಮಂಜುಳಾ ಅಂಗಡಿ ಮಾಲಿಕರಿಗೆ ಸ್ವಚ್ಛತೆಯ ಬಗ್ಗೆ ಆರೋಗ್ಯ ಶಿಕ್ಷಣ ನೀಡಿದರು. ಜಿಲ್ಲಾ ತಂಬಾಕು ನಿಯಂತ್ರಣ ಕೋಶದ ಸಮಾಜ ಕಾರ್ಯಕರ್ತ ಮಂಜುನಾಥ, ತಾಲ್ಲೂಕ ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ನಾರಯಣಸ್ವಾಮಿ ಮತ್ತು ಗಂಗಾಧರ್ ಪೊಲೀಸ್ ಸಿಬ್ಬಂದಿ ಹಾಜರಿದ್ದರು.

# ಸಂಜೆ ಟಿಪ್ಸ್



## ಟಿರಾದಲ್ಲಿ ಖರೀದಿಸಿ ಅಗಸ್ಟಿನಸ್ ಬೇಡರ್ ಉತ್ಪನ್ನಗಳು

ರಿಲಯನ್ಸ್ ರೀಟೇಲ್ನ ಸೌಂದರ್ಯ ಪ್ಲಾಟ್ಫಾರಂ 'ಟಿರಾ' ಜಾಗತಿಕವಾಗಿ ಮೆಚ್ಚುಗೆ ಪಡೆದ ಐಷಾರಾಮಿ ಚರ್ಮದ ಆರೈಕೆ ಮತ್ತು ಕೂದಲಿನ ಆರೈಕೆಯ ಬ್ರ್ಯಾಂಡ್ ಆಗಿರುವ 'ಅಗಸ್ಟಿನಸ್ ಬೇಡರ್' ಅನ್ನು ಭಾರತದಲ್ಲಿ ಬಿಡುಗಡೆ ಮಾಡಿದೆ. ಅಗಸ್ಟಿನಸ್ ಬೇಡರ್ನ ಉತ್ಪನ್ನಗಳು ಟಿರಾದಲ್ಲಿ ಪ್ರತ್ಯೇಕವಾಗಿ ಲಭ್ಯವಿರಲಿವೆ. 30 ವರ್ಷಗಳ ಸಂಶೋಧನೆ ಮತ್ತು ಉದ್ಯಮದಲ್ಲಿ ಅನ್ವಯಿಕ ವಿಜ್ಞಾನದ ಅತ್ಯುನ್ನತ ಸಾಮರ್ಥ್ಯದ ಬೆಂಬಲದೊಂದಿಗೆ ಪ್ರೀಮಿಯಂ ಮತ್ತು ಪರಿಣಾಮಕಾರಿ ಉತ್ಪನ್ನಗಳನ್ನು ಈ ಬ್ರ್ಯಾಂಡ್ ನೀಡುತ್ತಿದೆ. ವಿಶ್ವಪ್ರಸಿದ್ಧ ಸ್ಟೆಮ್ ಸೆಲ್ ಮತ್ತು ಬಯೋಮೆಡಿಕಲ್ ವಿಜ್ಞಾನಿ ಪ್ರೊಫೆಸರ್ ಅಗಸ್ಟಿನಸ್ ಬೇಡರ್ ಸ್ಥಾಪಿಸಿದ ಈ ಬ್ರ್ಯಾಂಡ್ 2018 ರಲ್ಲಿ ತನ್ನ ಅಪ್ರತಿಮ ನೀಲಿ ಬಾಟಲಿಯಲ್ಲಿ ಬಿಡುಗಡೆಯಾದಾಗಿನಿಂದ ಜಗತ್ತಿನಾದ್ಯಂತ ಗ್ರಾಹಕರನ್ನು ಗಳಿಸಿಕೊಂಡಿದೆ. ಸೆಲೆಬ್ರಿಟಿಗಳು, ಸೌಂದರ್ಯ ತಜ್ಞರು ಮತ್ತು ಚರ್ಮದ ಆರೈಕೆ ಉತ್ಸಾಹಿಗಳು ಇದನ್ನು ಮೆಚ್ಚಿಕೊಂಡಿದ್ದಾರೆ. ಇದರ ಸ್ವಾಮ್ಯದ ಟಿಎಫ್ಸಿ 8ಎ (ಟ್ರಿಗರ್ ಫ್ಯಾಕ್ಟರ್ ಕಾಂಪ್ಲೆಕ್ಸ್) ತಂತ್ರಜ್ಞಾನದೊಂದಿಗೆ, ಅಗಸ್ಟಿನಸ್ ಬೇಡರ್ ಅವರ ಸೂತ್ರಗಳು ಮಾನವ ದೇಹವನ್ನು ನವೀಕರಿಸುವ ಮತ್ತು ಪುನರುಜ್ಜೀವನಗೊಳಿಸುವ, ಸಹಜ ಸಾಮರ್ಥ್ಯವನ್ನು ಬೆಂಬಲಿಸಲು ವಿನ್ಯಾಸಗೊಳಿಸಲಾದ ಉತ್ಪನ್ನಗಳಿಗೆ ಶಕ್ತಿ ನೀಡುತ್ತವೆ. ಪ್ರೀಮಿಯಂ ಕೊಡುಗೆಗಳ ಗುಚ್ಚದಲ್ಲಿ ಅಗಸ್ಟಿನಸ್ ಬೇಡರ್ ಸೇರ್ಪಡೆಯೊಂದಿಗೆ, ಅತ್ಯಾಧುನಿಕ ಚರ್ಮದ ಆರೈಕೆ ಪರಿಹಾರಗಳಿಗಾಗಿ ಉತ್ಸುಕರಾಗಿರುವ ಸೌಂದರ್ಯ ಉತ್ಸಾಹಿಗಳ ವಿಕಸನಗೊಳ್ಳುತ್ತಿರುವ ಭಾರತೀಯ ಸೌಂದರ್ಯ ಮಾರುಕಟ್ಟೆಯನ್ನು ಪೂರೈಸುವ ಬದ್ಧತೆಯನ್ನು ಟಿರಾ ಪುನರುಚ್ಚರಿಸುತ್ತದೆಈ ಕುರಿತು ಮಾತನಾಡಿದ ಟಿರಾ ಸಹ-ಸಂಸ್ಥಾಪಕ ಭಕ್ತಿ ಮೋದಿ, ಟಿರಾದಲ್ಲಿ, ನಾವು ಜಾಗತಿಕ ಮತ್ತು ಸ್ವದೇಶಿ ಬ್ರ್ಯಾಂಡ್ಗಳ ಅತ್ಯುತ್ತಮತೆಯನ್ನು ಭಾರತೀಯ ಗ್ರಾಹಕರಿಗೆ ತರುವ ಗುರಿ ಹೊಂದಿದ್ದೇವೆ. ಭಾರತದಲ್ಲಿ ಅಗಸ್ಟಿನಸ್ ಬೇಡರ್ ಅವರ ಪರಿಚಯವು ಐಷಾರಾಮಿ, ಉನ್ನತ ಕಾರ್ಯಕ್ಷಮತೆಯ ಚರ್ಮದ ಆರೈಕೆಯನ್ನು ನೀಡುವ ನಮ್ಮ ಪ್ರಯತ್ನದಲ್ಲಿ ಮತ್ತೊಂದು ಹೆಜ್ಜೆಯಾಗಿದೆ, ಇದು ಭಾರತದ ಬೆಳೆಯುತ್ತಿರುವ ಸೌಂದರ್ಯ ಪ್ರಿಯರ ಸಮುದಾಯದೊಂದಿಗೆ ಅನುರಣಿಸುತ್ತದೆ' ಎಂದರು.

## ಕ್ಯಾಪ್ಸಿಕಂ ಚಿಕನ್ ಫ್ರೈ

### ಪಾಕ ಶಾಲೆ



### ಬೇಕಿರುವ ಸಾಮಗ್ರಿ

ಚಿಕನ್ -ಅರ್ಧ ಕೆಜಿ, ಕ್ಯಾಪ್ಸಿಕಂ -2, ಈರುಳ್ಳಿ -2, ಟೊಮೆಟೊ -2, ಶುಂಠಿ - ಬೆಳ್ಳುಳ್ಳಿ ಪೇಸ್ಟ್-ಸ್ವಲ್ಪ, ಅರಿಶಿನ ಪುಡಿ -ಒಂದು ಚಮಚ, ಖಾರದಪುಡಿ- ಒಂದು ಚಮಚ, ಕಾಳು ಮೆಣಸಿನ ಪುಡಿ -ಒಂದು ಚಮಚ, ಗರಂ ಮಸಾಲ -ಒಂದು ಚಮಚ, ನಿಂಬೆ ಹಣ್ಣಿನ ರಸ -ಒಂದು ಚಮಚ, ಪುದೀನ -ಒಂದು ಬಟ್ಟಲು, ಕೊತ್ತಂಬರಿ ಸೊಪ್ಪು - ಸ್ವಲ್ಪ, ಉಪ್ಪು- ರುಚಿಗೆ ತಕ್ಕಷ್ಟು,

### ಮಾಡುವ ವಿಧಾನ

ಒಂದು ಪಾತ್ರೆಗೆ ಚಿಕನ್ ಹಾಕಿಕೊಂಡು ನೀರು, ಅರಿಸಿನ ಪುಡಿ, ಸ್ವಲ್ಪ ಉಪ್ಪನ್ನು ಬೆರೆಸಿ ಮುಕ್ಕಾಲು ಭಾಗ ಬೇಯಿಸಿಕೊಳ್ಳಿ.

ಪಕ್ಕದಲ್ಲಿ ಮತ್ತೊಂದು ಪಾತ್ರೆಯನ್ನು ಒಲೆಯ ಮೇಲಿಟ್ಟು ಐದು ಚಮಚ ಎಣ್ಣೆ ಹಾಕಿ, ಹೆಚ್ಚಿದ ಈರುಳ್ಳಿ, ಟೊಮೊಟೊ, ಶುಂಠಿ- ಬೆಳ್ಳುಳ್ಳಿ ಪೇಸ್ಟ್ ಹಾಗೂ ಸ್ವಲ್ಪ ಉಪ್ಪು ಹಾಕಿಕೊಂಡು ಚೆನ್ನಾಗಿ ಫ್ರೈ ಮಾಡಿಕೊಳ್ಳಬೇಕು.

ಇದಕ್ಕೆ ಬೇಯಿಸಿ ಇಟ್ಟುಕೊಂಡಿದ್ದ ಚಿಕನ್ ಅನ್ನು ಹಾಕಿ ಚೆನ್ನಾಗಿ ಮಿಶ್ರಣ ಮಾಡಬೇಕು. ಜತೆಗೆ ಕಾಳು ಮೆಣಸಿನ ಪುಡಿ, ಗರಂ ಮಸಾಲ ಹೆಚ್ಚಿದ ಪುದಿನ, ನಿಂಬೆ ಹಣ್ಣಿನ ರಸವನ್ನು ಹಾಕಿ ಚೆನ್ನಾಗಿ ಮಿಶ್ರಣ ಮಾಡಿ, 10 ನಿಮಿಷ ಒಲೆಯ ಮೇಲೆ ಬಿಡಿ. ಕೊನೆಯಲ್ಲಿ ಕೊತ್ತಂಬರಿ ಸೊಪ್ಪನ್ನು ಉದುರಿಸಿ ಅಲಂಕರಿಸಿದರೆ ರುಚಿಕರವಾದ ಕ್ಯಾಪ್ಸಿಕಂ ಚಿಕನ್ ಫ್ರೈ ಸವಿಯಲು ಸಿದ್ಧ.






# ಒಟಿಟಿಯಲ್ಲೂ ಧೂಳೆಬ್ಬಿಸುತ್ತಿರುವ ಹಾರರ್ ಕಾಮಿಡಿ ಸಿನಿಮಾ ಸ್ತ್ರೀ 2

ಒಟಿಟಿಯಲ್ಲೂ ಧೂಳೆಬ್ಬಿಸುತ್ತಿರುವ ಹಾರರ್ ಕಾಮಿಡಿ ಸಿನಿಮಾವನ್ನು ನೀವೂ ವೀಕ್ಷಿಸಬಹುದು. ಮನೆಯಲ್ಲೇ ಕುಳಿತು ಯಾವುದಾದರೂ ಸಿನಿಮಾ ನೋಡಲು ಬಯಸಿದರೆ ಸ್ತ್ರೀ 2 ಬೆಸ್ಟ್. ಸುಮಾರು ರೂ.870 ಕೋಟಿ ಕಲೆಕ್ಷನ್ ಮಾಡಿದ ಸ್ತ್ರೀ 2 ಸಿನಿಮಾ ಜನಪ್ರಿಯತೆ ಗಳಿಸಿದೆ. ಈ ಹಾರರ್ ಕಾಮಿಡಿ ಸಿನಿಮಾದಲ್ಲಿ ಶ್ರದ್ಧಾ ಕಪೂರ್ ಮತ್ತು ರಾಜ್ಕುಮಾರ್ ರಾವ್ ಪ್ರಮುಖ ಪಾತ್ರಗಳಲ್ಲಿ ನಟಿಸಿದ್ದಾರೆ.

ಸ್ತ್ರೀ ಚಿತ್ರದ ಮುಂದುವರಿದ ಭಾಗವಾಗಿ ಉತ್ತಮ ನಿರೀಕ್ಷೆಯೊಂದಿಗೆ ಈ ವರ್ಷ ಆಗಸ್ಟ್ 15 ರಂದು ಚಿತ್ರ ಬಿಡುಗಡೆಯಾಯಿತು. ಆದರೆ, ಫುಲ್ ಪಾಸಿಟಿವ್ ಟಾಕ್ ನೊಂದಿಗೆ ಕಲೆಕ್ಷನ್ ಸುರಿಮಳೆಯಾಗಿದೆ.

ಈ ಚಿತ್ರವು ಬಂಪರ್ ಬ್ಲಾಕ್ಬಸ್ಟರ್ ಆಗಿದೆ. ಒಟಿಟಿಯಲ್ಲಿ ಕೂಡ ಈಗ ಕಲೆಕ್ಷನ್ ಜೋರಾಗಿದೆ. ಅಕ್ಟೋಬರ್ 10ರಂದು ಅಮೆಜಾನ್ನಲ್ಲಿ ಬಿಡುಗಡೆಯಾಗಿದೆ. ಇದಕ್ಕೂ ಮೊದಲು ರೆಂಟಲ್ ಮೋಡ್ನಲ್ಲಿ ಇದು ಲಭ್ಯವಿತ್ತು. ಈಗ ಹಿಂದಿಯಲ್ಲಿ ಮಾತ್ರ ಲಭ್ಯವಿದೆ. ಕ್ರೇಜ್ಗೆ ತಕ್ಕಂತೆ ಈ ಚಿತ್ರ ಒಟಿಟಿಯಲ್ಲೂ ಉತ್ತಮ ಪ್ರದರ್ಶನ ಕಾಣುತ್ತಿದೆ.

ಪ್ರೈಮ್ ವಿಡಿಯೋ ರಾಷ್ಟ್ರವ್ಯಾಪಿ ಟ್ರೆಂಡಿಂಗ್ನಲ್ಲಿ ಅಗ್ರಸ್ಥಾನವನ್ನು ತಲುಪಿದೆ. ಇದು ಭಾರೀ ವೀಕ್ಷಣೆಗಳನ್ನು ಪಡೆಯುತ್ತಿದೆ. ಸೆಪ್ಟೆಂಬರ್ ಅಂತ್ಯದಲ್ಲಿ ಅಮೆಜಾನ್ ಪ್ರೈಮ್ ವೀಡಿಯೊದಲ್ಲಿ ರೆಂಟಲ್ ಮೋಡ್ನಲ್ಲಿ ಬಿಡುಗಡೆಯಾಗಿದೆ. ಅಕ್ಟೋಬರ್ 10ರಿಂದ ಇದು ಸಾಮಾನ್ಯ ಸ್ಟ್ರೀಮಿಂಗ್ ಮೋಡ್ಗೆ ಬಂದಿದೆ.

ಅಂದಿನಿಂದ ಈ ಸಿನಿಮಾ ಜನಪ್ರಿಯತೆ ಗಳಿಸುತ್ತಿದೆ. ಪ್ರಸ್ತುತ ಇದು ಟಾಪ್ ಪ್ಲೇಸ್ನಲ್ಲಿ ಟ್ರೆಂಡಿಂಗ್ ಆಗಿದೆ. ಸ್ತ್ರೀ ಚಲನಚಿತ್ರದ ಮೊದಲ ಭಾಗವು ಪ್ರಸ್ತುತ ಪ್ರೈಮ್ ವಿಡಿಯೋದಲ್ಲಿ ಮೂರನೇ ಸ್ಥಾನದಲ್ಲಿದೆ. 2018 ರಲ್ಲಿ ಬಿಡುಗಡೆಯಾದ ಈ ಚಿತ್ರ ಈಗ ಟ್ರೆಂಡಿಂಗ್ ಆಗಿದೆ.

ಸ್ತ್ರೀ 2 ಚಿತ್ರವನ್ನು ಅಮರ್ ಕೌಶಿಕ್ ನಿರ್ದೇಶಿಸಿದ್ದಾರೆ. ಕಾಮಿಡಿ ಜೊತೆಗೆ ಹಾರರ್ ಅಂಶಗಳೊಂದಿಗೆ ಮೆಚ್ಚಿಕೊಂಡಿದ್ದಾರೆ. ಮೊದಲ ಭಾಗಕ್ಕಿಂತ ಸೀಕ್ವೆಲ್ ಚೆನ್ನಾಗಿದೆ ಎಂಬ ಮಾತು ಕೇಳಿ ಬರುತ್ತಿದೆ. ಇದು ಆರಂಭದಿಂದಲೂ ಭರ್ಜರಿ ಕಲೆಕ್ಷನ್ ಮಾಡಿದೆ.

ಈ ಚಿತ್ರದಲ್ಲಿ ಶ್ರದ್ಧಾ ಕಪೂರ್ ಮತ್ತು ರಾಜ್ಕುಮಾರ್ ರಾವ್ ಪ್ರಮುಖ ಪಾತ್ರಗಳಲ್ಲಿ ನಟಿಸಿದ್ದರೆ , ಪಂಕಜ್ ತ್ರಿಪಾಠಿ, ಅಪರಶಕ್ತಿ ಖುರಾನಾ, ಅಭಿಷೇಕ್ ಬ್ಯಾನರ್ಜಿ, ಅತುಲ್ ಶ್ರೀವಾತ್ಸವ, ಮುಷ್ತಾಕ್ ಖಾನ್ ಮತ್ತು ಸುನೀತಾ ರಾಜ್ವರ್ ಪ್ರಮುಖ ಪಾತ್ರಗಳನ್ನು ನಿರ್ವಹಿಸಿದ್ದಾರೆ.

## ಏಡಿ ಮಾಂಸ' ಆರೋಗ್ಯಕ್ಕೆ ಒಳ್ಳೆಯದೇ..?



### ಹೆಲ್ತ್ ಟಿಪ್ಸ್

ಆಹಾರ ಬದಲಾಗಬೇಕು. ದೇಹವು ಸದೃಢವಾಗಿರಲು ನಮ್ಮ ಅಭ್ಯಾಸಗಳು ಬದಲಾಗಬೇಕು. ಚಿಕನ್, ಮಟನ್ ಮತ್ತು ಮೀನಿನಂತಹ ಮಾಂಸಾಹಾರಿ ಭಕ್ಷ್ಯಗಳ ಹೊರತಾಗಿ, ಅನೇಕ ಜನರು ಆಹಾರದಲ್ಲಿ ಏಡಿಗಳನ್ನು ಸಹ ತಿನ್ನುತ್ತಾರೆ. ಆದರೆ ಕೆಲವರು ಏಡಿಗಳ ಬಗ್ಗೆ ಕೇಳಿದ್ದಾರೆ, ಆದರೆ ಏಡಿಗಳನ್ನು ಹೆಚ್ಚು ತಿನ್ನುವುದಿಲ್ಲ.
ಏಡಿ ದೇಹಕ್ಕೆ ಒಳ್ಳೆ ಪ್ರೊಟೀನ್ ಏಡಿಗಳಲ್ಲಿರುವ ವಿಟಮಿನ್ ಬಿ 12 ಕೆಂಪು ರಕ್ತ ಕಣಗಳ ಉತ್ಪಾದನೆಯನ್ನು ಸುಧಾರಿಸುತ್ತದೆ. ಇದಲ್ಲದೆ, ಲ್ಯುಕೇಮಿಯಾದಂತಹ ರೋಗಗಳು.. ಏಡಿಗಳು ಕಡಿಮೆ ಮಾಡಲು ಸಹಾಯ ಮಾಡುತ್ತವೆ. ತೂಕ ಇಳಿಸಿಕೊಳ್ಳಲು ಆರೋಗ್ಯಕರ ಆಯ್ಕೆ. ಫೈಬರ್ ಮತ್ತು ಫೈಬರ್ ಜೊತೆಗೆ, ಕ್ಯಾಲ್ಸಿಯಂ ಸಮೃದ್ಧ ಪ್ರೋಟೀನ್ಗಳು ಸಹ ಇರುತ್ತವೆ. ಅವರು ಪಡೆಯುತ್ತಾರೆ. ಥೈರಾಯ್ಡ್ ಗ್ರಂಥಿಯ ಕಾರ್ಯನಿರ್ವಹಣೆಯನ್ನು ಸುಧಾರಿಸುವ ಥೈರಾಯ್ಡ್ ಗ್ರಂಥಿಯ ಆರೋಗ್ಯದಲ್ಲಿ ಏಡಿಗಳು ಪ್ರಮುಖ ಪಾತ್ರವಹಿಸುತ್ತವೆ.
ಏಡಿಗಳೊಂದಿಗೆ ಮೆದುಳಿನ ಆರೋಗ್ಯ, ಹೃದಯವನ್ನು ಬಲಪಡಿಸುತ್ತದೆ ಏಡಿಗಳಲ್ಲಿ ಇರುವ ಒಮೆಗಾ ಮೂರು ಕೊಬ್ಬಿನಾಮ್ಲಗಳು ಹೃದ್ರೋಗಗಳಿಂದ ರಕ್ಷಿಸುತ್ತವೆ. ಅಧಿಕ ರಕ್ತದೊತ್ತಡ ಇರುವವರಿಗೆ ಏಡಿ ಅತ್ಯುತ್ತಮ ಆಯ್ಕೆಯಾಗಿದೆ. ಬಿಪಿಯನ್ನು ಚಿಟಿಕೆಯಷ್ಟು ಸುಲಭವಾಗಿ ಕಡಿಮೆ ಮಾಡುತ್ತದೆ. ಏಡಿಗಳನ್ನು ನಿಯಮಿತವಾಗಿ ತಿನ್ನುವುದು ಮೆದುಳಿನ ಆರೋಗ್ಯವನ್ನು ಸುಧಾರಿಸುತ್ತದೆ. ನೀವು ಮಾಂಸಾಹಾರವನ್ನು ಇಷ್ಟಪಟ್ಟರೆ, ಮನೆಯಲ್ಲಿ ಏಡಿಗಳನ್ನು ಬೇಯಿಸಿ ತಿನ್ನಿ.

# ಮಿಷನ್ 3K - 3000 ಹಾರ್ಟ್ಸ್, ಒನ್ ಬೀಟ್: 24 ಗಂಟೆಗಳಲ್ಲಿ 3,319 ಸಿಪಿಆರ್ ಹೊಸ ಗಿನ್ನೆಸ್ ವಿಶ್ವದಾಖಲೆ ಸ್ಥಾಪಿಸಿದ ಮಣಿಪಾಲ್ ಆಸ್ಪತ್ರೆ




ಮಣಿಪಾಲ್ ಆಸ್ಪತ್ರೆಯು ಮಿಷನ್ 3ಕೆ – 3000 ಹಾರ್ಟ್ಸ್, ಒನ್ ಬೀಟ್ ಅನ್ನು ಯಶಸ್ವಿಯಾಗಿ ಆಯೋಜಿಸುವ ಮೂಲಕ ಪ್ರಮುಖ ಮೈಲಿಗಲ್ಲನ್ನು ಸಾಧಿಸಿದೆ. ಈ ಕಾರ್ಯಕ್ರಮವು ರಿಲೇ ಶೈಲಿಯಲ್ಲಿ ಕಾರ್ಡಿಯೋಪಲ್ಮನರಿ ರೆಸಸಿಟೇಶನ್ (ಅಕಖ) ಅನ್ನು ಪ್ರದರ್ಶಿಸುವ ಮೇಲೆ ಕೇಂದ್ರೀಕೃತವಾಗಿತ್ತು. ಈ ಕಾರ್ಯಕ್ರಮವು ಒಂದೇ ದಿನದಲ್ಲಿ ಅತಿ ಹೆಚ್ಚು ಸಿಪಿಆರ್ ಮಾಡುವ ಹೊಸ ಗಿನ್ನೆಸ್ ವಿಶ್ವ ದಾಖಲೆಯನ್ನು ಸ್ಥಾಪಿಸಿತು. ಸಿಪಿಆರ್ ತರಬೇತಿ ಪಡೆದ ಒಟ್ಟು 3,319 ಮಂದಿ ಇದರಲ್ಲಿ ಪಾಲ್ಗೊಂಡು, ಈ ಹಿಂದೆ 2,619 ಜನರು ಮಾಡಿದ್ದ ಹಳೆಯ ದಾಖಲೆಯನ್ನು ಹಿಂದಿಕ್ಕಿದ್ದಾರೆ.

ಮಿಷನ್ 3ಏ – 3000 ಹಾರ್ಟ್ಸ್, ಒಂದು ಬೀಟ್ ನಲ್ಲಿ, ಪ್ರತಿಯೊಬ್ಬ ಭಾಗವಹಿಸುವವರು 60 ಎದೆಯ ಕಂಪ್ರೆಷನ್ ಗಳನ್ನು ಮಾಡಬೇಕಾಗಿತ್ತು, ಮತ್ತು ಮುಂದಿನ ವ್ಯಕ್ತಿಗೆ ಇದನ್ನು ಪಾಸ್ ಮಾಡಲು ಐದು ಸೆಕೆಂಡ್ಗಿಂತ ಕಡಿಮೆ ಕಾಲಾ ವಕಾಷವಿತ್ತು. ಈ ಕಾರ್ಯಕ್ರಮವು ಓಲ್ಡ್ ಏರ್ಪೋರ್ಟ್ ರಸ್ತೆಯಲ್ಲಿರುವ ಮಣಿಪಾಲ್ ಆಸ್ಪತ್ರೆಯಲ್ಲಿ 24 ಗಂಟೆಗಳ ಕಾಲ ತಡೆರಹಿತವಾಗಿ ನಡೆಯಿತು ಮತ್ತು ಇದು ಸಮಯ ಮತ್ತು ಟೀಮ್ವರ್ಕ್ ಪ್ರಾಮುಖ್ಯತೆಯನ್ನು ಎತ್ತಿ ತೋರಿಸಿತು.

ಈ ಸಾಧನೆಯ ಬಗ್ಗೆ ಮಾತನಾಡುತ್ತಾ ಮಣಿಪಾಲ್ ಆಸ್ಪತ್ರೆಗಳ ಅಧ್ಯಕ್ಷ ಡಾ.ಎಚ್.ಸುದರ್ಶನ್ ಬಲ್ಲಾಳ್, ಮಿಷನ್ 3ಏ – 3000 ಹಾರ್ಟ್ಸ್, ಒನ್ ಬೀಟ್ನಲ್ಲಿ, 2024 ರ ವಿಶ್ವ ಹೃದಯ ದಿನದಂದು ಗಿನ್ನೆಸ್ ವರ್ಲ್ಡ್ ರೆಕಾರ್ಡ್ಸ್ ಅನ್ನು ಸಾಧಿಸುವ ಮೂಲಕ ಈ ಐತಿಹಾಸಿಕ ಘಟನೆಯ ಭಾಗವಾಗಲು ನಾವು ತುಂಬಾ ಹೆಮ್ಮೆಪಡುತ್ತೇವೆ. ಸತತವಾಗಿ 3,000 ಸಿಪಿಆರ್ಗಳನ್ನು ಮಾಡುವ ಮೂಲಕ ದಾಖಲೆಯನ್ನು ಸ್ಥಾಪಿಸುವುದರ ಜೊತೆಗೆ, ಅಕಖ ಜೀವಗಳನ್ನು ಉಳಿಸಬಹುದು ಎಂಬ ಪ್ರಮುಖ ಸಂದೇಶವನ್ನು ನೀಡಲು ನಾವು ಬಯಸುತ್ತೇವೆ. ಯಾರಾದರೂ ಹಠಾತ್ತನೆ ಕುಸಿದು ಬಿದ್ದರೆ ಅಥವಾ ಹೃದಯಾಘಾತಕ್ಕೆ ಒಳಗಾದರೆ, ಸಿಪಿಆರ್ ಅವರನ್ನು ಮತ್ತೆ ಬದುಕಿಸಲು ಸಹಾಯ ಮಾಡುತ್ತದೆ. ಈ ಜೀವ ಉಳಿಸುವ ಕೌಶಲ್ಯವನ್ನು ಕಲಿಯಲು ನಾನು ಪ್ರತಿಯೊಬ್ಬರನ್ನು ಪ್ರೋತ್ಸಾಹಿಸುತ್ತೇನೆ. ಮಣಿಪಾಲ್ ಆಸ್ಪತ್ರೆಗಳು ನಿಮಗೆ ತರಬೇತಿ ನೀಡಲು ಸಿದ್ಧವಾಗಿದೆ ಮತ್ತು ಒಟ್ಟಾಗಿ ನಾವು ಅನೇಕ ಜೀವಗಳನ್ನು ಉಳಿಸಬಹುದು. ಈ ಮಿಷನ್ ಟೀಮ್ವರ್ಕ್ ಶಕ್ತಿಯನ್ನು ತೋರಿಸುತ್ತದೆ ಮತ್ತು ಭಾಗವಹಿಸಿದ ಎಲ್ಲರಿಗೂ ನಾವು ತುಂಬಾ ಕೃತಜ್ಞರಾಗಿದ್ದೇವೆ. ಎಂದರು.

ಮಿಷನ್ 3ಏ – 3000 ಹಾರ್ಟ್ಸ್, ಒನ್ ಬೀಟ್ ಕಾರ್ಯಕ್ರಮವು ಮಣಿಪಾಲ್ ಆಸ್ಪತ್ರೆಯ (ಮೈಸೂರು ಮತ್ತು ಸೇಲಂ ಒಳಗೊಂಡು) ದಕ್ಷಿಣ ಕ್ಲಸ್ಟರ್ನ 12 ಘಟಕಗಳು ಓಲ್ಡ್ ಏರ್ಪೋರ್ಟ್ ರಸ್ತೆಯಲ್ಲಿರುವ ತಂಡವನ್ನು ಸೇರುವ ಮೂಲಕ ಟೀಮ್ವರ್ಕ್ ಅನ್ನು ಎತ್ತಿ ತೋರಿಸಿದೆ.

ಕಾರ್ಯಕ್ರಮವನ್ನು ಚಿಂತನಶೀಲವಾಗಿ ಆಯೋಜಿಸಲಾಗಿತ್ತು ಮತ್ತು ಎಲ್ಲವೂ ಸುಗಮವಾಗಿ ನಡೆಯುವುದನ್ನು ಖಚಿತಪಡಿಸಿಕೊಳ್ಳಲು, ಭಾಗವಹಿಸುವವರು ನಿಗದಿತ ಗುಂಪುಗಳಲ್ಲಿ ಸಮಯಕ್ಕೆ ಸರಿಯಾಗಿ ಆಗಮಿಸಿದರು. ಪ್ರತಿ ನಿಮಿಷಕ್ಕೆ ಸರಾಸರಿ ಮೂರು ಸಿಪಿಆರ್ ಪ್ರದರ್ಶನಗಳೊಂದಿಗೆ, ಮಣಿಪಾಲ್ ಆಸ್ಪತ್ರೆಗಳು ನಿರ್ದಿಷ್ಟ ಸಮಯದಲ್ಲಿ 3,319 ಸಿಪಿಆರ್ಗಳನ್ನು ಪೂರ್ಣಗೊಳಿಸಿತು.

ಈ ಕಾರ್ಯಕ್ರಮವನ್ನು ಯಶಸ್ವಿಗೊಳಿಸಲು ಬೆಂಗಳೂರಿನ 30 ಕ್ಕೂ ಹೆಚ್ಚು ನರ್ಸಿಂಗ್ ಕಾಲೇಜುಗಳು ಒಟ್ಟಾಗಿ ಕೆಲಸ ಮಾಡಿದವು. ಈ ಮಹತ್ವಾಕಾಂಕ್ಷೆಯ ದಾಖಲೆಯ ಪ್ರಯತ್ನಕ್ಕೆ ನರ್ಸ್ ಗಳು ಮತ್ತು ಅರೆವೈದ್ಯರು (ಪ್ಯಾರಾ ಮೆಡಿಕಲ್) ಸೇರಿದಂತೆ ಆಸ್ಪತ್ರೆಯ ಸಿಬ್ಬಂದಿ ಪ್ರಮುಖ ಬೆಂಬಲವನ್ನು ನೀಡಿದರು.

## ಚಳಿಗಾಲದಲ್ಲಿ ಶುಷ್ಕತೆ

### ಬ್ಯೂಟಿ ಟಿಪ್ಸ್



ಚಳಿಗಾಲದಲ್ಲಿ ತುರಿಕೆ ಸಮಸ್ಯೆ ಸಾಮಾನ್ಯ. ದೇಹದ ಪ್ರತಿ ಭಾಗದಲ್ಲೂ ಚರ್ಮ ಬಿರಿದಂತಾಗಿ ತುರಿಕೆ ಶುರುವಾಗುತ್ತದೆ. ಹವಾಮಾನವು ಬಿಸಿಯಿಂದ ತಣ್ಣಗೆ ಬದಲಾದಂತೆ, ಗಾಳಿಯಲ್ಲಿ ತೇವಾಂಶವು ಕಡಿಮೆಯಾಗುತ್ತದೆ. ಇದರಿಂದಾಗಿ ನಮ್ಮ ಚರ್ಮವು ಶುಷ್ಕ ಮತ್ತು ಒರಟಾಗಲು ಪ್ರಾರಂಭಿಸುತ್ತದೆ.ಇದನ್ನು ಶುಷ್ಕತೆ ಎಂದು ಕರೆಯಬಹುದು.

ಈ ಶುಷ್ಕತೆ ನಮ್ಮ ಚರ್ಮದ ಮೇಲೆ ಹೆಚ್ಚು ಪರಿಣಾಮ ಬೀರುತ್ತದೆ. ಚರ್ಮವು ಒರಟು ಮತ್ತು ಬಿಗಿಯಾದಂತೆ ಭಾಸವಾಗುತ್ತದೆ, ನಂತರ ತುರಿಕೆ ಪ್ರಾರಂಭವಾಗುತ್ತದೆ. ಈ ತುರಿಕೆ ಕೆಲವರಲ್ಲಿ ತುಂಬಾ ತೀವ್ರವಾಗಿರುತ್ತದೆ. ಹಾಗಾಗಿ ಚಳಿಗಾಲದಲ್ಲಿ ವಿಶೇಷ ಕಾಳಜಿ ವಹಿಸಬೇಕು.

ಮಾಯಿಶ್ಚರೈಸರ್ ಬಳಸಿ ? ಚಳಿಗಾಲದಲ್ಲಿ ಬಿಸಿನೀರಿನಿಂದ ನೇರವಾಗಿ ಸ್ನಾನ ಮಾಡಿದರೆ ತ್ವಚೆಯ ತೇವಾಂಶ ದೂರವಾಗುತ್ತದೆ. ತುರಿಕೆ ಮತ್ತು ಕಿರಿಕಿರಿಯಂತಹ ಸಮಸ್ಯೆಗಳು ಹೆಚ್ಚಾಗುತ್ತವೆ. ಹಾಗಾಗಿ ಸ್ನಾನ ಮಾಡುವ ಮೊದಲು ಮೇಲೆ ಯಾವುದೇ ಆರ್ದ್ರಕ ತೈಲ ಅಥವಾ ಬಾಡಿ ಲೋಷನ್ ಅನ್ನು ದೇಹದ ಮೇಲೆ ಸಂಪೂರ್ಣವಾಗಿ ಅನ್ವಯಿಸಬೇಕು. ಈ ರೀತಿ ಮಾಡುವುದರಿಂದ ಸ್ನಾನದ ನಂತರ ಕೂಡ ಚರ್ಮವು ಮೃದುವಾಗಿ ಮತ್ತು ತೇವಾಂಶದಿಂದ ಕೂಡಿರುತ್ತದೆ.

ತುಂಬಾ ಬಿಸಿ ನೀರಿನಿಂದ ಸ್ನಾನ ಮಾಡಬೇಡಿ- ಚಳಿಗಾಲದಲ್ಲಿ ಶೀತವನ್ನು ತಪ್ಪಿಸಲು ನಾವು ಬಿಸಿ ನೀರಿನಿಂದ ಸ್ನಾನ ಮಾಡಲು ಇಷ್ಟಪಡುತ್ತೇವೆ. ಆದರೆ ತುಂಬಾ ಬಿಸಿ ನೀರಿನಿಂದ ಸ್ನಾನ ಮಾಡುವುದರಿಂದ ಚರ್ಮ ತೇವಾಂಶವನ್ನು ಕಳೆದುಕೊಳ್ಳುತ್ತದೆ. ಅದು ಒಣಗುತ್ತದೆ ಮತ್ತು ಒರಟಾಗುತ್ತದೆ. ನೈಸರ್ಗಿಕ ಪ್ರೊಟೆಕ್ಟಿವ್ ಆಯಿಲ್ ಮತ್ತು ಲಿಪಿಡ್ಗಳು ಚರ್ಮಕ್ಕೆ ಅವಶ್ಯಕವಾಗಿವೆ. ಆದ್ದರಿಂದ, ಚಳಿಗಾಲದಲ್ಲಿ ಉಗುರು ಬೆಚ್ಚಗಿನ ನೀರಿನಿಂದ ಸ್ನಾನ ಮಾಡಬೇಕು. ಸಾಸಿವೆ ಎಣ್ಣೆಯಿಂದ ಮಸಾಜ್ ಮಾಡಿ ಚಳಿಗಾಲದಲ್ಲಿ ಸಾಸಿವೆ ಎಣ್ಣೆಯನ್ನು ಚರ್ಮಕ್ಕೆ ಹಚ್ಚಿ. ಇದು ಹೆಚ್ಚು ಉಪಯುಕ್ತವಾಗಿದೆ. ಮುಖ ಮತ್ತು ಕುತ್ತಿಗೆಯನ್ನು ಹೊರತುಪಡಿಸಿ ಇಡೀ ದೇಹವನ್ನು ಈ ಎಣ್ಣೆಯಿಂದ ಮಸಾಜ್ ಮಾಡಿ. 24 ಗಂಟೆಗಳಲ್ಲಿ ನಿಮಗೆ ಸಮಯ ಸಿಕ್ಕಾಗಲೆಲ್ಲಾ ಈ ಎಣ್ಣೆ ಮಸಾಜ್ ಮಾಡಬಹುದು.



ಜಯಶ್ರೀ.ಬಿ.ಆರ್
ಖ್ಯಾತ ಜ್ಯೋತಿಷಿ
ದೂರವಾಣಿ–9964739507
www.jyotishyavaastu.com

## ರಾಶಿ ಭವಿಷ್ಯ

**ಮೇಷ:** ಅನಿರೀಕ್ಷಿತ ದ್ರವ್ಯಲಾಭ, ಸ್ಥಿರಾಸ್ತಿ ಮಾರಾಟ, ಮಿತ್ರರಲ್ಲಿ ಸ್ನೇಹವೃದ್ಧಿ, ವಾಹನ ಯೋಗ.

**ವೃಷಭ:** ಶರೀರದಲ್ಲಿ ತಳಮಳ, ವೈದ್ಯರ ಭೇಟಿ, ಆರ್ಥಿಕ ಪರಿಸ್ಥಿತಿ ಬಿಕ್ಕಟ್ಟು, ಮನಕ್ಲೇಶ.

**ಮಿಥುನ:** ಮಂಗಳಕಾರ್ಯಗಳಲ್ಲಿ ಭಾಗಿ, ಚಂಚಲ ಸ್ವಭಾವ, ಆದಾಯಕ್ಕಿಂತ ಖರ್ಚು ಜಾಸ್ತಿ.

**ಕಟಕ:** ಗುರು ಹಿರಿಯರಲ್ಲಿ ಭಕ್ತಿ, ಉದ್ಯೋಗದಲ್ಲಿ ಪ್ರಗತಿ, ಕೋಪ ಜಾಸ್ತಿ, ಪ್ರಭಾವಿಗಳ ಭೇಟಿ.

**ಸಿಂಹ:** ರಫ್ತು ವ್ಯಾಪಾರದಿಂದ ನಷ್ಟ, ದಾಯಾದಿ ಕಲಹ, ವಾಹನ ಅಪಘಾತ, ಸಾಲ ಮಾಡುವ ಸಾಧ್ಯತೆ, ಶತ್ರು ಭಾದೆ.

**ಕನ್ಯಾ:** ವ್ಯಾಪಾರ ವ್ಯವಹಾರಗಳಲ್ಲಿ ಲಾಭ, ಶೀತ ಸಂಬಂಧ ರೋಗಗಳು, ದಾಂಪತ್ಯದಲ್ಲಿ ಪ್ರೀತಿ.

**ತುಲಾ:** ಕೆಲಸ ಕಾರ್ಯಗಳಲ್ಲಿ ವಿಳಂಬ, ಮಾತಿನ ಮೇಲೆ ಹಿಡಿತವಿರಲಿ, ವಿದ್ಯಾರ್ಥಿಗಳಲ್ಲಿ ಆತಂಕ.

**ವೃಶ್ಚಿಕ:** ಮನಸ್ಸಿನಲ್ಲಿ ಗೊಂದಲ, ಋಣ ಭಾದೆ, ಅಭಿವೃದ್ಧಿ ಕುಂಠಿತ, ಹಿತಶತ್ರುಗಳಿಂದ ತೊಂದರೆ, ವ್ಯರ್ಥ ಧನಹಾನಿ.

**ಧನಸ್ಸು:** ಸ್ತ್ರೀಯರಿಗೆ ಧನ ಲಾಭ, ನಿರೀಕ್ಷಿತ ಆದಾಯ, ರಾಜಕೀಯ ಕ್ಷೇತ್ರದಲ್ಲಿ ಕಲಹ, ದೂರ ಪ್ರಯಾಣ, ಋಣ ವಿಮೋಚನೆ.

**ಮಕರ:** ಉತ್ತಮ ಪ್ರಗತಿ, ಕ್ರಯ ವಿಕ್ರಯಗಳಲ್ಲಿ ಎಚ್ಚರ, ಹಳೆ ಸಾಲ ಮರುಪಾವತಿ, ಅನ್ಯರ ಮಾತಿನಿಂದ ಅಸಮಾಧಾನ.

**ಕುಂಭ:** ಹಣ ಬಂದರೂ ಉಳಿಯುವುದಿಲ್ಲ, ವಾಹನ ಯೋಗ, ವಿರೋಧಿಗಳಿಂದ ತೊಂದರೆ.

**ಮೀನ:** ಯತ್ನ ಕಾರ್ಯಗಳಲ್ಲಿ ಅಡೆತಡೆ, ಚೋರ ಭಯ, ಅಧಿಕ ಕೋಪ, ಸ್ತ್ರೀ ಸೌಖ್ಯ, ಸಾಧಾರಣ ಫಲ, ಮನೋವ್ಯಥೆ.

## ವಿಶ್ವ ಗುಣಮಟ್ಟ ದಿನ




ಪ್ರತಿ ವರ್ಷ ಅಕ್ಟೋಬರ್ 14 ರಂದು ಆಚರಿಸಲಾಗುವ ವಿಶ್ವ ಗುಣಮಟ್ಟ ದಿನವು ಉತ್ಪನ್ನಗಳ ಜಾಗತಿಕ ಪ್ರಮಾಣೀಕರಣದ ಅಗತ್ಯತೆ ಮತ್ತು ವಿಶ್ವ ಆರ್ಥಿಕತೆಗೆ ಅದರ ಪ್ರಾಮುಖ್ಯತೆಯ ಬಗ್ಗೆ ಜಾಗೃತಿ ಮೂಡಿಸುತ್ತದೆ. ಈ ದಿನದಂದು, ಇಂಟರ್ನ್ಯಾಷನಲ್ ಎಲೆಕ್ಟ್ರೋಟೆಕ್ನಿಕಲ್ ಕಮಿಷನ್ ಇಂಟರ್ನ್ಯಾಷನಲ್ ಟೆಲಿಕಮ್ಯುನಿಕೇಶನ್ ಯೂನಿಯನ್ ಮತ್ತು ಇಂಟರ್ನ್ಯಾಷನಲ್ ಸ್ಟ್ಯಾಂಡರ್ಡ್ಸ್ ಆರ್ಗನೈಸೇಶನ್ ಸದಸ್ಯರು ಸ್ವಯಂಪ್ರೇರಿತ ತಾಂತ್ರಿಕ ಒಪ್ಪಂದವನ್ನು ರೂಪಿಸುವ ಜಗತ್ತಿನಾದ್ಯಂತ ಸಾವಿರಾರು ತಜ್ಞರ ಸಂಘಟಿತ ಪ್ರಯತ್ನಗಳಿಗೆ ಗೌರವ ಸಲ್ಲಿಸುತ್ತಾರೆ

ವಿಶ್ವ ಮಾನದಂಡಗಳ ದಿನದ ಇತಿಹಾಸವು ಲಂಡನ್ನಲ್ಲಿ 1946 ರ ಸಭೆಗೆ ಹೋಗುತ್ತದೆ, ಇದು ಮುಂದಿನ ವರ್ಷಗಳಲ್ಲಿ ಸ್ಟ್ಯಾಂಡರ್ಡೈಸೇಶನ್ಗಾಗಿ ಅಂತರರಾಷ್ಟ್ರೀಯ ಸಂಸ್ಥೆಯನ್ನು ಹುಟ್ಟುಹಾಕಿತು. ಪ್ರತಿ ವರ್ಷ ಅಕ್ಟೋಬರ್ 14 ರಂದು, I.E.C., I.S.O., I.T.U.,, ಇತರ ಅಂತರರಾಷ್ಟ್ರೀಯ ಪ್ರಮಾಣೀಕರಣ ಸಂಸ್ಥೆಗಳು ಮತ್ತು ಪ್ರಪಂಚದಾದ್ಯಂತದ ಜನರು ತಜ್ಞರು, ಸ್ವಯಂಸೇವಕರು ಮತ್ತು ಪ್ರಪಂಚದಾದ್ಯಂತ ಪ್ರಮಾಣೀಕರಣ ಚಟುವಟಿಕೆಗಳಲ್ಲಿ ತೊಡಗಿರುವ ಎಲ್ಲರ ಸಹಯೋಗದ ಪ್ರಯತ್ನಗಳನ್ನು ಆಚರಿಸುತ್ತಾರೆ, ಜನರ ಗಮನವನ್ನು ಸೆಳೆಯುತ್ತಾರೆ. ಜಾಗತಿಕ ಆರ್ಥಿಕತೆಯ ಮೇಲೆ ಲಿಖಿತ ಮಾನದಂಡಗಳ ಪ್ರಾಮುಖ್ಯತೆ.

ಪ್ರಪಂಚವು ಕ್ಷಿಪ್ರ ಜಾಗತೀಕರಣವನ್ನು ಅನುಭವಿಸುತ್ತಿರುವುದರಿಂದ, ವಿವಿಧ ಮೂಲೆಗಳಲ್ಲಿನ ಮಾರುಕಟ್ಟೆಗಳು ಹೆಚ್ಚು ತೆರೆದುಕೊಳ್ಳುತ್ತಿವೆ, ರಾಷ್ಟ್ರೀಯ ಗಡಿಗಳು ಕಣ್ಮರೆಯಾಗುತ್ತಿವೆ ಮತ್ತು ಹೊಸ ಸವಾಲುಗಳು ಹೊರಹೊಮ್ಮುತ್ತಿವೆ, ಎಲ್ಲಾ ರಾಷ್ಟ್ರಗಳು ಮತ್ತು ಜನರಿಗೆ ಅನ್ವಯವಾಗುವ ತಾಂತ್ರಿಕ ಮಾನದಂಡವು ಪ್ರಸ್ತುತವಾಗಿದೆ. U.S. ನಲ್ಲಿ, ವಾಷಿಂಗ್ಟನ್, D.C.ಯಲ್ಲಿನ ಪ್ರಮಾಣೀಕರಣ ಸಮುದಾಯದಿಂದ ವಿಶ್ವ ಗುಣಮಟ್ಟ ದಿನವನ್ನು ಆಚರಿಸಲಾಗುತ್ತದೆ, ಅಲ್ಲಿ ಪ್ರದರ್ಶನ ಕಾರ್ಯಕ್ರಮವನ್ನು ಸ್ವಾಗತ ಮತ್ತು ಭೋಜನ ಗಾಲಾದೊಂದಿಗೆ ನಡೆಸಲಾಗುತ್ತದೆ.

ಪ್ರಪಂಚದ ಇತರ ಭಾಗಗಳಲ್ಲಿ, ಶೈಕ್ಷಣಿಕ ಸೆಮಿನಾರ್ಗಳು ಮತ್ತು ಸಮ್ಮೇಳನಗಳು ಮತ್ತು ದಿನವನ್ನು ಆಚರಿಸಲು ಪ್ರತಿ ವರ್ಷ ನಡೆಯುವ ಸಾಮಾನ್ಯ ವರ್ಲ್ಡ್ ಸ್ಟ್ಯಾಂಡರ್ಡ್ ಕೋಆಪರೇಷನ್ ಸ್ಪರ್ಧೆಯನ್ನು ಒಳಗೊಂಡಂತೆ ವಿಶ್ವ ಮಾನದಂಡಗಳ ದಿನಕ್ಕೆ ಸಂಬಂಧಿಸಿದಂತೆ ಈವೆಂಟ್ಗಳನ್ನು ಸಹ ನಡೆಸಲಾಗುತ್ತದೆ. I.S.O.ಪ್ರಕಾರ, ಅದರ ಸದಸ್ಯ ರಾಷ್ಟ್ರಗಳ ಪ್ರತಿನಿಧಿಗಳನ್ನು ಒಳಗೊಂಡಿರುವ ಆರ್ಕೆಸ್ಟ್ರಾದಲ್ಲಿ ಕೇವಲ ಕಂಡಕ್ಟರ್ ಆಗಿ ಕಾರ್ಯನಿರ್ವಹಿಸುತ್ತದೆ, ಅಂತರರಾಷ್ಟ್ರೀಯ ಮಾನದಂಡದ ಭಾಗವಾಗಿ ಪ್ರಸ್ತಾಪವನ್ನು ಅಳವಡಿಸಿಕೊಳ್ಳುವ ಪ್ರಕ್ರಿಯೆಯು ನಿರ್ದಿಷ್ಟ ಪ್ರದೇಶದಲ್ಲಿ ನಿರ್ದಿಷ್ಟ ಮಾರುಕಟ್ಟೆ ಅಗತ್ಯವನ್ನು ಪೂರೈಸುವ ಕರಡು ಅಭಿವೃದ್ಧಿಯಿಂದ ಪ್ರಾರಂಭವಾಗುತ್ತದೆ. . ಒಮ್ಮೆ ಅಭಿವೃದ್ಧಿಪಡಿಸಿದ ನಂತರ, ಸದಸ್ಯರು ಉದ್ದೇಶಪೂರ್ವಕವಾಗಿ ಮತ್ತು ನಂತರ ಪ್ರಸ್ತಾಪದ ಮೇಲೆ ಮತ ಚಲಾಯಿಸುತ್ತಾರೆ. ಈ ಪ್ರಕ್ರಿಯೆಯು ಸುಮಾರು ಮೂರು ವರ್ಷಗಳವರೆಗೆ ತೆಗೆದುಕೊಳ್ಳಬಹುದು.

# ಬಾಂಗ್ಲಾದೇಶದ ಬಂದರಕ್ಕೆ ತಲುಪಿದ ಚೀನಾದ ನೌಕಾ ಪಡೆ!

**ಢಾಕಾ (ಬಾಂಗ್ಲಾದೇಶ):** ಬಾಂಗ್ಲಾದೇಶದಲ್ಲಿ ಅಧಿಕಾರ ಬದಲಾವಣೆಯಾದ ನಂತರ ಅದು ಭಾರತ ವಿರೋಧಿ ಆಗಿದೆ. ಬಾಂಗ್ಲಾದೇಶದಲ್ಲಿನ ಹಿಂದುಗಳ ಮೇಲೆ ನಿರಂತರವಾಗಿ ದೌರ್ಜನ್ಯ ನಡೆಯುತ್ತಿದೆ. ಈಗ ಚೀನಾದ ನೌಕಾಪಡೆ ಅಕ್ಟೋಬರ್ 12 ರಂದು ಬಾಂಗ್ಲಾದೇಶದ ಚಿತಗಾವ ಬಂದರಕ್ಕೆ ಭೇಟಿ ನೀಡಿದೆ.

ಬಾಂಗ್ಲಾದೇಶದ ಮಧ್ಯಂತರ ಸರಕಾರ ಅಧಿಕಾರಕ್ಕೆ ಬಂದ ನಂತರ ಇದು ದೇಶಕ್ಕೆ ಬಂದಿರುವ ಮೊದಲ ವಿದೇಶಿ ಪಡೆ ಆಗಿದೆ.

ಚೀನಾದ ರಾಯಭಾರಿಯಿಂದ ಒಂದು ಮನವಿಯಲ್ಲಿ, ಬಾಂಗ್ಲಾದೇಶದ ದೇಶಾಂತರ್ಗತದ ಪರಿಸ್ಥಿತಿಯಲ್ಲಿನ ಬದಲಾವಣೆಯನ್ನು ಲೆಕ್ಕಿಸದೆ ಚೀನಾ ಬಾಂಗ್ಲಾದೇಶ ಸಂಬಂಧ ವಿಕಸಿತಗೊಳಿಸುವುದಕ್ಕಾಗಿ ಚೀನಾದ ವಚನ ಬದ್ಧತೆ ಹಾಗೆಯೇ ಇದೆ. ಚೀನಾ ತನ್ನ ಪಾರಂಪಾರಿಕ ಸ್ನೇಹ ದೃಢಗೊಳಿಸುವುದಕ್ಕಾಗಿ, ಮೈತ್ರಿ ಪೂರ್ಣ ವ್ಯವಹರಿಸಲು ಮತ್ತು ವಿವಿಧ ಕ್ಷೇತ್ರದಲ್ಲಿ ಪರಸ್ಪರ



ಲಾಭದಾಯಕ ಸಹಕಾರ ಹೆಚ್ಚಿಸುವುದಕ್ಕಾಗಿ ಮತ್ತು ಉನ್ನತಮಟ್ಟದ ಸಾರಿಗೆ ಪ್ರಕಲ್ಪಕ್ಕೆ ಪ್ರೋತ್ಸಾಹ ನೀಡುವುದಕ್ಕಾಗಿ ಬಾಂಗ್ಲಾದೇಶದ ಜೊತೆಗೆ ಕಾರ್ಯನಿರ್ವಹಿಸಲು ಉತ್ಸುಕವಾಗಿದೆ.

# ಬ್ರಿಕ್ಸ್ ಸದಸ್ಯತ್ವಕ್ಕಾಗಿ ಅರ್ಜಿ ಸಲ್ಲಿಸಿದ 34 ದೇಶಗಳು!

**ದೆಹಲಿ:** ಅಕ್ಟೋಬರ್ 22 ಮತ್ತು ಅಕ್ಟೋಬರ್ 24ರಂದು ಕಜಾನ್ನಲ್ಲಿ ಬ್ರಿಕ್ಸ್ ಶೃಂಗಸಭೆ ನಡೆಯಲಿದ್ದು, ಹೀಗಾಗಿ ಬ್ರಿಕ್ಸ್ ಸದಸ್ಯತ್ವಕ್ಕಾಗಿ 34 ದೇಶಗಳು ಅಧಿಕೃತವಾಗಿ ಅರ್ಜಿ ಸಲ್ಲಿಸಿದೆ .ಕಜಾನ್ನಲ್ಲಿ ಬ್ರಿಕ್ಸ್ ಶೃಂಗಸಭೆಯಲ್ಲಿ 10 ಹೊಸ ಸದಸ್ಯರು ಮತ್ತು 10 ಪಾಲುದಾರರನ್ನು ಘೋಷಿಸಲಾಗುತ್ತದೆ.ಸಂಘರ್ಷ ಪೀಡಿತ ರಾಷ್ಟ್ರಗಳಾದ ಪ್ಯಾಲೆಸ್ತೀನ್, ಸಿರಿಯಾ ಮತ್ತು ಮ್ಯಾನ್ಮಾರ್ ಕೂಡ ಸದಸ್ಯತ್ವಕ್ಕಾಗಿ ಅರ್ಜಿ ಸಲ್ಲಿಸಿದ್ದು ಒಮ್ಮತದ ಅಭಿಪ್ರಾಯ ನಂತರ ಘೋಷಣೆ ಮಾಡಲಾಗುತ್ತದೆ.

ಪ್ರಧಾನಿ ನರೇಂದ್ರ ಮೋದಿ ಅವರು ಶೃಂಗಸಭೆಯಲ್ಲಿ ಪಾಲ್ಗೊಳ್ಳಲಿದ್ದು, ಮೂರು ತಿಂಗಳ ಅವಧಿಯಲ್ಲಿ ರಷ್ಯಾಕ್ಕೆ ಅವರ ಎರಡನೇ ಭೇಟಿಯಾಗಲಿದೆ. ಮೋದಿ ಇತರ ಸದಸ್ಯರ ನಾಯಕರೊಂದಿಗೆ ದ್ವಿಪಕ್ಷೀಯ ಸಭೆಗಳನ್ನು ನಡೆಸುವ ಸಾಧ್ಯತೆಯಿದೆ. ಪ್ರಸ್ತುತ, ಟರ್ಕಿ ಮತ್ತು ಥೈಲ್ಯಾಂಡ್ ಸದಸ್ಯತ್ವಕ್ಕಾಗಿ ಅರ್ಜಿ ಸಲ್ಲಿಸಿದ್ದವು.

ಹೊಸ ಸದಸ್ಯರಾಗಿ ಪರಿಗಣಿಸಲು ಸುಮಾರು 34 ದೇಶಗಳ ಜೊತೆ ಬ್ರಿಕ್ಸ್ ಚರ್ಚೆ ನಡೆಸಿವೆ. ಇವುಗಳಲ್ಲಿ ಅಲ್ಜೀರಿಯಾ, ಅಜೆರ್ಬೈಜಾನ್, ಬಹ್ರೇನ್, ಬಾಂಗ್ಲಾದೇಶ, ಬೆಲಾರಸ್, ಬೊಲಿವಿಯಾ, ಕ್ಯೂಬಾ, ಚಾಡ್, ರಿಪಬ್ಲಿಕ್ ಆಫ್ ಕಾಂಗೋ, ಈಕ್ವಟೋರಿಯಲ್ ಗಿನಿಯಾ, ಎರಿಟ್ರಿಯಾ, ಹೊಂಡುರಾಸ್, ಇಂಡೋನೇಷಿಯಾ, ಕಝಾಕಿಸ್ತಾನ್ ಸೇರಿವೆ. ಕುವೈತ್, ಲಾವೋಸ್, ಮಲೇಷ್ಯಾ, ಮ್ಯಾನ್ಮಾರ್, ಮೊರಾಕೊ, ನಿಕರಾಗುವಾ, ನೈಜೀರಿಯಾ, ಪಾಕಿಸ್ತಾನ, ಸೆನೆಗಲ್, ದಕ್ಷಿಣ ಸುಡಾನ್, ಶ್ರೀಲಂಕಾ, ಪ್ಯಾಲೆಸ್ಟೈನ್ ರಾಜ್ಯ, ಸಿರಿಯಾ, ಥೈಲ್ಯಾಂಡ್, ಟರ್ಕಿ, ಉಗಾಂಡಾ, ಉಜ್ಬೇಕಿಸ್ತಾನ್, ವೆನೆಜುವೆಲಾ, ವಿಯೆಟ್ನಾಂ ಮತ್ತು ಜಿಂಬಾಬ್ವೆ ಅರ್ಜಿ ಸಲ್ಲಿಸಿವೆ.

# ದೀಪಾವಳಿ ಸಮಯದಲಿ 'ವಿಮಾನಯಾನ ದರ' ಇಳಿಕೆ

**ನವದೆಹಲಿ:** ಈ ದೀಪಾವಳಿ ಋತುವಿನಲ್ಲಿ ವಿಮಾನ ಪ್ರಯಾಣಿಕರಿಗೆ ಗುಡ್ ನ್ಯೂಸ್ ಸಿಕ್ಕಿದೆ. ಅನೇಕ ದೇಶೀಯ ಮಾರ್ಗಗಳಲ್ಲಿ ಸರಾಸರಿ ವಿಮಾನಯಾನ ದರಗಳು ಹಿಂದಿನ ವರ್ಷಕ್ಕೆ ಹೋಲಿಸಿದರೆ ಶೇಕಡಾ 20-25 ರಷ್ಟು ಕುಸಿದಿವೆ ಎಂದು ವಿಶ್ಲೇಷಣೆಯೊಂದು ತಿಳಿಸಿದೆ. ಹೆಚ್ಚಿದ ಸಾಮರ್ಥ್ಯ ಮತ್ತು ತೈಲ ಬೆಲೆಗಳಲ್ಲಿನ ಇತ್ತೀಚಿನ ಕುಸಿತವು ವಿಮಾನ ಟಿಕೆಟ್ ಬೆಲೆಗಳ ಕುಸಿತಕ್ಕೆ ಕಾರಣವೆಂದು ಪರಿಗಣಿಸಲಾಗಿದೆ. ಟ್ರಾವೆಲ್ ಪೋರ್ಟಲ್ ಇಕ್ಸಿಗೊದ ವಿಶ್ಲೇಷಣೆಯು ದೇಶೀಯ ಮಾರ್ಗಗಳಲ್ಲಿ ಸರಾಸರಿ ವಿಮಾನಯಾನವು ಶೇಕಡಾ 20-25 ರಷ್ಟು ಕಡಿಮೆಯಾಗಿದೆ ಎಂದು ತೋರಿಸಿದೆ. ಬೆಲೆಗಳು 30 ದಿನಗಳ ಎಪಿಡಿ (ಸುಧಾರಿತ ಖರೀದಿ ದಿನಾಂಕ) ಆಧಾರದ ಮೇಲೆ ಒನ್-ವೇ ಸರಾಸರಿ ಶುಲ್ಕಕ್ಕಾಗಿವೆ.



# ಸೇನಾ ನೆಲೆಯ ಮೇಲೆ ಹಿಜ್ಬುಲ್ಲಾ ಡ್ರೋನ್ ಅಟ್ಯಾಕ್ 4 ಇಸ್ರೇಲ್ ಸೈನಿಕರು ಬಲಿ

**ಬೈರೂತ್:** ಒಂದು ವರ್ಷ ಕಳೆದರೂ ಇಸ್ರೇಲ್-ಹಮಾಸ್-ಹಿಜ್ಬುಲ್ಲಾ ನಡುವಿನ ದಾಳಿಯ ತೀವ್ರತೆ ಹೆಚ್ಚುತ್ತಲೇ ಇದೆ. ಅ.7ಕ್ಕಿಂತ ಭೀಕರವಾಗಿ ದಾಳಿ ನಡೆಸಲು ಹಮಾಸ್ ಪ್ಲಾನ್ ಮಾಡಿದೆ ಎಂಬ ವದಂತಿ ಹಬ್ಬಿದ ಬೆನ್ನಲ್ಲೇ ಇಸ್ರೇಲ್ ಮೇಲೆ ಭೀಕರ ದಾಳಿ ನಡೆದಿದೆ. ಲೆಬನಾನ್‌ನ ಗಡಿಯುದ್ದಕ್ಕೂ ಬಾಂಬ್ ದಾಳಿಗಳನ್ನು ವಿಸ್ತರಿಸಿದೆ. ಉತ್ತರದ ನೆಲೆಗಳಲ್ಲಿ ಹಿಜ್ಬುಲ್ಲಾ ಡ್ರೋನ್‌ಗಳು ತನ್ನ ನಾಲ್ವರು ಸೈನಿಕರನ್ನು ಹೊಡೆದುರುಳಿಸಿದೆ ಎಂದು ಇಸ್ರೇಲ್ ಮಿಲಿಟರಿ ಹೇಳಿಕೊಂಡಿದೆ.

ಹೈಫಾ ಬಳಿಯ ಬಿನ್ಯಾಮಿನಾದಲ್ಲಿನ ಮಿಲಿಟರಿ ತರಬೇತಿ ಶಿಬಿರದ ಮೇಲಿನ ದಾಳಿಯು ಸೆಪ್ಟೆಂಬರ್ 23 ನಂತರ ಇಸ್ರೇಲ್ ನೆಲೆಯ ಮೇಲೆ ನಡೆದ ಅತ್ಯಂತ ಭೀಕರ ದಾಳಿಯಾಗಿದೆ. ಇದಕ್ಕೆ ಪ್ರತಿಯಾಗಿ ಇಸ್ರೇಲ್, ಲೆಬನಾನ್‌ನಲ್ಲಿ ಹಿಜ್ಬುಲ್ಲಾ ಮೇಲೆ ದಾಳಿ ನಡೆಸಿದ್ದು, ತುರ್ತು ಸೇವೆಗಳಲ್ಲಿ ವ್ಯತ್ಯಯವಾಗಿದ, 60ಕ್ಕೂ ಹೆಚ್ಚು ಮಂದಿ ಗಾಯಗೊಂಡಿದ್ದಾರೆ ಎಂದು ವರದಿಯಾಗಿದೆ. ಈ ನಡುವೆ ಸ್ಥಳಾಂತರಗೊಂಡ ಜನರಿಗೆ ಆಶ್ರಯ ತಾಣವಾಗಿ ಬಳಸಲಾಗುತ್ತಿದ್ದ ಶಾಲೆಯ ಮೇಲೆ ಇಸ್ರೇಲಿ ನಡೆಸಿದ ದಾಳಿಯಿಂದ ಒಂದೇ ಕುಟುಂಬದ 15 ಮಂದಿ ಸಾವನ್ನಪ್ಪಿದ್ದಾರೆ ಎಂದು ಗಾಜಾದ ಅಧಿಕಾರಿಗಳು ತಿಳಿಸಿದ್ದಾರೆ.

ಇತ್ತೀಚೆಗಷ್ಟೇ ಇಸ್ರೇಲ್ ಸೇನೆಯು ಸೆಂಟ್ರಲ್ ಬೈರೂತ್‌ನ ವಿಶ್ವಸಂಸ್ಥೆ ಶಾಂತಿಪಾಲನಾ ಪ್ರಧಾನ ಕಚೇರಿ ಮೇಲೆ ನಡೆಸಿದ ಭೀಕರ ವೈಮಾನಿಕ ದಾಳಿಯಲ್ಲಿ 22 ಮಂದಿ ಹತ್ಯೆಯಾಗಿ, ಸುಮಾರು 117 ಮಂದಿ ಗಾಯಗೊಂಡಿದ್ದರು. ಅದೃಷ್ಟವಶಾತ್ ಈ ದಾಳಿಯಲ್ಲಿ ಹಿಜ್ಬುಲ್ಲಾದ ಉನ್ನತ ಅಧಿಕಾರಿಯೊಬ್ಬರು ಬದುಕುಳಿದಿದ್ದರು. ಈ ಬೆನ್ನಲ್ಲೇ ಇಸ್ರೇಲ್ ವಿರುದ್ಧ ಅಕ್ಟೋಬರ್ 7ಕ್ಕಿಂತಲೂ ಭೀಕರ ದಾಳಿ ನಡೆಸುವುದಾಗಿ ಒಂದು ದಿನದ ಹಿಂದೆಯಷ್ಟೇ ಎಚ್ಚರಿಕೆ ನೀಡಿದರು. ಅದರಂತೆ ಲೆಬನಾನ್‌ನ ಉತ್ತರ ಗಡಿ ಭಾಗಗಳಲ್ಲಿ ಇಸ್ರೇಲ್ ಸೇನೆ ವಿರುದ್ಧ ದಾಳಿ ನಡೆಸಿದ್ದು ನಾಲ್ವರು ಸೈನಿಕರನ್ನು ಹತ್ಯೆಗೈದಿದೆ.

**2.20 ಲಕ್ಷ ಮಂದಿ ಲೆಬನಾನ್‌ನಿಂದ ಸಿರಿಯಾಕ್ಕೆ ಪಲಾಯನ:** ಇತ್ತೀಚಿನ ದಿನಗಳಲ್ಲಿ ಇಸ್ರೇಲ್‌ನ ಯುದ್ಧ ವಿಮಾನಗಳು ಲೆಬನಾನ್‌ನ ಬೆಕಾ ಪ್ರದೇಶ ಮತ್ತು ಬೈರೂತ್‌ನಲ್ಲಿ ವ್ಯಾಪಕವಾದ ವೈಮಾನಿಕ ದಾಳಿಗಳನ್ನು ನಡೆಸಿದೆ. ಮೂಲಸೌಕರ್ಯ ತಾಣಗಳು, ಲಾಂಚರ್‌ಗಳು, ಕಮಾಂಡ್ ಕಂಟ್ರೋಲ್ ಸೆಂಟರ್‌ಗಳು ಹಾಗೂ ಶಸ್ತ್ರಾಸ್ತ್ರಗಳ ಸಂಗ್ರಹಣಾ ಸೌಲಭ್ಯ ಕೇಂದ್ರಗಳನ್ನು ಗುರಿಯಾಗಿಸಿ ದಾಳಿ ನಡೆಸಿವೆ. ಸದ್ಯಕ್ಕೆ ಕದನ ವಿರಾಮ ಘೋಷಣೆಯಾಗುವ ಯಾವುದೇ ಲಕ್ಷಣಗಳು ಕಾಣಿಸುತ್ತಿಲ್ಲ. ಇದರಿಂದ ಭಯಭೀತರಾಗಿರುವ 2.20 ಲಕ್ಷ ಮಂದಿ ಸಿರಿಯಾಕ್ಕೆ ಪಲಾಯನ ಮಾಡಿದ್ದಾರೆ ಎಂದು ವರದಿಗಳು ತಿಳಿಸಿವೆ.



# ಬಾಬಾ ಸಿದ್ಧಿಕಿ ಹತ್ಯೆಗೈದ ಆರೋಪಿ ವಯಸ್ಸು ಧೃಢೀಕರಣ ಪರೀಕ್ಷೆಗೆ ಕೋರ್ಟ್ ಆದೇಶ..!

**ಮಹಾರಾಷ್ಟ್ರ:** ಬಾಬಾ ಸಿದ್ಧಿಕಿಗೆ ಗುಂಡಿಟ್ಟು ಹತ್ಯೆಗೈದ ಪ್ರಕರಣದ ಎರಡನೇ ಆರೋಪಿಯಾಗಿರುವ ಧರ್ಮರಾಜ್ ಕಶ್ಯಪ್ ವಯಸ್ಸಿನ ಬಗ್ಗೆ ಗೊಂದಲಗಳು ಮೂಡಿದ್ದು, ಆರೋಪಿಗೆ ಆಸಿಫಿಕೇಶನ್ ಪರೀಕ್ಷೆಗೆ ಒಳಪಡಿಸಲು ನ್ಯಾಯಾಲಯ ಆದೇಶ ನೀಡಿದೆ. ಆಧಾರ್ ಕಾರ್ಡ್ ಮಾಹಿತಿಯ ಪ್ರಕಾರ ಆರೋಪಿ ಕಶ್ಯಪ್ ವಯಸ್ಸು 19 ವರ್ಷಗಳು ಎಂದು ಪ್ರಾಸಿಕ್ಯೂಟರ್ ನ್ಯಾಯಾಲಯಕ್ಕೆ ತಿಳಿಸಿದ್ದಾರೆ.

ಆದಾಗ್ಯೂ, ಆರೋಪಿ ಧರ್ಮರಾಜ್ ತನ್ನ ವಯಸ್ಸು 17 ಎಂದು ಹೇಳಿದ್ದಾನೆ. ಹೀಗಾಗಿ ಈತನ ವಯಸ್ಸು ಕಂಡುಹಿಡಿಯಲು ಕೋರ್ಟ್ ಆಸಿಫಿಕೇಶನ್ ಪರೀಕ್ಷೆಯ ಆದೇಶ ಮಾಡಿದೆ. ಈ ಆಸಿಫಿಕೇಶನ್ ಪರೀಕ್ಷೆ ಮೂಳೆಗಳ ಪಕ್ವತೆಯನ್ನು ನಿರ್ಣಯಿಸಲು ಬಳಸುವ ವೈದ್ಯಕೀಯ ವಿಧಾನವಾಗಿದೆ. ಈ ವಿಧಾನವನ್ನು ಪ್ರಾಥಮಿಕವಾಗಿ ವ್ಯಕ್ತಿಯ ವಯಸ್ಸನ್ನು ಅಂದಾಜು ಮಾಡಲು ಬಳಸಲಾಗುತ್ತದೆ. ಇದು ಮೂಳೆಗಳ ಎಕ್ಸ್-ರೇ ಚಿತ್ರಗಳನ್ನು ಬಳಸಿ ಮತ್ತು ಕೈಗಳು ಮತ್ತು ಮಣಿಕಟ್ಟು ಮೂಳೆಗಳ ಪರೀಕ್ಷೆ ನಡೆಸಿ ವಯಸ್ಸು ಕಂಡುಹಿಡಿಯುವ ವಿಧಾನವಾಗಿದೆ.

ಇನ್ನು ಪ್ರಕರಣ ಸಂಬಂಧ ಕೊಲೆ ಆರೋಪಿ ಗುರ್ಮೈಲ್ ಸಿಂಗ್ನನ್ನು ಅ.21 ರವರೆಗೆ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿ ಮುಂಬೈ ಕೋರ್ಟ್ ಆದೇಶಿಸಿದೆ.





# ಬಾಬಾ ಸಿದ್ದಿಕಿ ಹತ್ಯೆಗೆ ರಾಹುಲ್ ಗಾಂಧಿ ಕಿಡಿ!

**ಮುಂಬೈ:** ಇಫ್ತಾರ್ ಕೂಟ ಹಾಗೂ ಅದ್ದೂರಿ ಪಾರ್ಟಿಗಳನ್ನು ಆಯೋಜಿಸುವ ಮೂಲಕ ಹೆಸರುವಾಸಿಯಾಗಿದ್ದ ಮಹಾರಾಷ್ಟ್ರದ ಮಾಜಿ ಸಚಿವ ಬಾಬಾ ಸಿದ್ದಿಕಿ ಅವರನ್ನು ಗುಂಡು ಹಾರಿಸಿ ಭೀಕರವಾಗಿ ಹತ್ಯೆ ಮಾಡಲಾಗಿದೆ. ಇದೇ ವಿಚಾರಕ್ಕೆ ಲೋಕಸಭೆ ವಿಪಕ್ಷ ನಾಯಕ ರಾಹುಲ್ ಗಾಂಧಿ ಕಿಡಿಕಾರಿದ್ದಾರೆ.

ಮಾಧ್ಯಮಗಳಿಗೆ ಪ್ರತಿಕ್ರಿಯೆ ಕೊಟ್ಟಿರುವ ರಾಹುಲ್ ಗಾಂಧಿ, ಶಿವಸೇನೆ-ಬಿಜೆಪಿ ಸರ್ಕಾರದ ವಿರುದ್ಧ ಕೆಂಡಕಾರಿದ್ದಾರೆ. ಮಹಾರಾಷ್ಟ್ರದಲ್ಲಿ ಕಾನೂನು ಸುವ್ಯವಸ್ಥೆ ಸಂಪೂರ್ಣ ವಿಫಲವಾಗಿದೆ. ನಾಗರೀಕರಿಗೆ ಶಾಂತಿ ಇಲ್ಲ. ಸಿದ್ದಿಕಿ ಹತ್ಯೆ ನಿಜಕ್ಕೂ ಶೋಚನೀಯ ಹಾಗೂ ನಾವೆಲ್ಲರೂ ತಲೆತಗ್ಗಿಸಬೇಕಾದ ವಿಚಾರ ಎಂದು ರಾಹುಲ್ ಗಾಂಧಿ ಸರ್ಕಾರವನ್ನ ತರಾಟೆಗೆ ತೆಗೆದುಕೊಂಡಿದ್ದಾರೆ.

ಶನಿವಾರ ರಾತ್ರಿ 9.30 ಗಂಟೆ ಸುಮಾರಿಗೆ ಬಾಬಾ ಸಿದ್ದಿಕಿ ಅವರ ಮೇಲೆ ಮೂರು ಬುಲೆಟ್ಗಳನ್ನು ಹಾರಿಸಲಾಗಿತ್ತು. ಅವರ ಮಗ ಜೀಶನ್ ಸಿದ್ದಿಕಿ ಅವರ ಕಚೇರಿಯಲ್ಲಿ ಈ ದಾಳಿ ನಡೆದಿತ್ತು. ಜೀಶನ್ ಬಾಂದ್ರಾ ಪೂರ್ವದ ಶಾಸಕರಾಗಿದ್ದಾರೆ. ಘಟನೆ ಸಂಬಂಧ ಪೊಲೀಸರು ಇಬ್ಬರನ್ನು ವಶಕ್ಕೆ ಪಡೆದಿದ್ದಾರೆ.



# ಲೆಬನಾನ್ ನಿಂದ ಶಾಂತಿಪಾಲಕರ ತೆರವಿಗೆ ಇಸ್ರೇಲ್ ಆಗ್ರಹ

**ಟೆಲ್ಅವೀವ್:** ದಕ್ಷಿಣ ಲೆಬನಾನ್ನಲ್ಲಿ ನಿಯೋಜನೆಗೊಂಡಿರುವ ವಿಶ್ವಸಂಸ್ಥೆ ಶಾಂತಿಪಾಲಕರನ್ನು ತಕ್ಷಣವೇ ಹಾನಿಯ ಮಾರ್ಗದಿಂದ ತೆರವುಗೊಳಿಸುವಂತೆ ಇಸ್ರೇಲ್ ಪ್ರಧಾನಿ ಬೆಂಜಮಿನ್ ನೆತನ್ಯಾಹು ರವಿವಾರ ವಿಶ್ವಸಂಸ್ಥೆಯನ್ನು ಆಗ್ರಹಿಸಿದ್ದಾರೆ.ಇಸ್ರೇಲ್ ದಾಳಿಯಲ್ಲಿ ಶಾಂತಿಪಾಲನಾ ಪಡೆಯ ಐವರು ಯೋಧರು ಗಾಯಗೊಂಡರೂ ದಕ್ಷಿಣ ಲೆಬನಾನ್ನಲ್ಲಿನ ತನ್ನ ಕಾರ್ಯಾಚರಣೆ ಸ್ಥಗಿತಗೊಳಿಸಲು ಯುಎನ್ ಐಎಫ್ಐಎಲ್ ನಿರಾಕರಿಸಿತ್ತು.ರವಿವಾರ ಸಂಪುಟ ಸಭೆಯಲ್ಲಿ ಮಾತನಾಡಿದ ನೆತನ್ಯಾಹು ' ಶಾಂತಿಪಾಲನಾ ಪಡೆಯನ್ನು ವಿಶ್ವಸಂಸ್ಥೆ ಪ್ರಧಾನ ಕಾರ್ಯದರ್ಶಿ ತಕ್ಷಣವೇ ವಾಪಾಸು ಕರೆಸಿಕೊಳ್ಳಬೇಕು. ಈ ಕುರಿತು ಈಗಾಗಲೇ ನಾವು ಹಲವು ಬಾರಿ ಯುಎನ್ಐಎಫ್ಐಎಲ್ ಅನ್ನು ಕೋರಿದ್ದರೂ ಅವರು ನಿರಾಕರಿಸಿದ್ದು ಇದು ಹಿಜ್ಬುಲ್ಲಾ ಗುಂಪಿನವರಿಗೆ ಮಾನವ ಗುರಾಣಿಯನ್ನು ಒದಗಿಸಿದಂತಾಗಿದೆ. ಶಾಂತಿಪಾಲನಾ ಯೋಧರನ್ನು ಹಿಜ್ಬುಲ್ಲಾ ಒತ್ತೆಯಾಳಾಗಿ ಇರಿಸಿಕೊಳ್ಳುವ ಅಪಾಯವನ್ನೂ ತಳ್ಳಿಹಾಕಲಾಗದು. ಶಾಂತಿಪಾಲನಾ ಯೋಧರು ಗಾಯಗೊಂಡಿರುವುದಕ್ಕೆ ನಾವು ವಿಷಾದಿಸುತ್ತೇವೆ. ನಮ್ಮ ಕಾರ್ಯಾಚರಣೆಯ ಸಂದರ್ಭ ಈ ರೀತಿ ಗಾಯಗೊಳ್ಳುವುದನ್ನು ತಡೆಯಲು ಗರಿಷ್ಟ ಪ್ರಯತ್ನ ಮಾಡುತ್ತಿದ್ದೇವೆ. ಆದರೆ ಇದಕ್ಕೆ ಸರಳ ದಾರಿಯೆಂದರೆ ಶಾಂತಿಪಾಲನಾ ಪಡೆಯನ್ನು ಲೆಬನಾನ್ನಿಂದ ತೆರವುಗೊಳಿಸುವುದು' ಎಂದು ನೆತನ್ಯಾಹು ಹೇಳಿದ್ದಾರೆ.



# ಬಾಬಾ ಸಿದ್ದಿಕಿ ಹತ್ಯೆ ಆರೋಪಿ ಅಪ್ರಾಪ್ತನಲ್ಲ, ಸತ್ಯ ಹೊರಬಿದ್ದಿದ್ದೇಗೆ?

**ಮುಂಬೈ:** ಮುಂಬೈನಲ್ಲಿ ಎನ್‌ಸಿಪಿ ನಾಯಕ ಬಾಬಾ ಸಿದ್ದಿಕಿ ಮೇಲೆ ಗುಂಡಿನ ದಾಳಿ ನಡೆಸಿದ ಆರೋಪಿ ಧರ್ಮರಾಜ್ ಕಶ್ಯಪ್ ಅಪ್ರಾಪ್ತನಲ್ಲ ಎನ್ನುವ ಮಾಹಿತಿ ಲಭ್ಯವಾಗಿದೆ. ಆರೋಪಿಯ ಮೂಳೆ ಪರೀಕ್ಷೆಯಲ್ಲಿ ಆತ ಅಪ್ರಾಪ್ತನಲ್ಲ ಎಂಬುದು ದೃಢಪಟ್ಟಿದೆ. ನ್ಯಾಯಾಲಯದ ಆದೇಶದ ಮೇರೆಗೆ ಈ ಪರೀಕ್ಷೆ ನಡೆಸಲಾಗಿದ್ದು, ಭಾನುವಾರ ತಡರಾತ್ರಿ ವರದಿ ಹೊರಬಿದ್ದಿದೆ. ನ್ಯಾಯಾಲಯಕ್ಕೆ ಹಾಜರಾದಾಗ, ಧರ್ಮರಾಜ್ ಕಶ್ಯಪ್ ತನ್ನ ವಕೀಲರ ಮೂಲಕ ತಾನು ಅಪ್ರಾಪ್ತ ಎಂದು ಹೇಳಿಕೊಂಡಿದ್ದ. ಆತನಿಗೆ 19 ವರ್ಷ, ಸತ್ಯಾಸತ್ಯತೆಯನ್ನು ಖಚಿತಪಡಿಸಿಕೊಳ್ಳಲು, ನ್ಯಾಯಾಲಯವು ಧರ್ಮರಾಜ್‌ನ ವಯಸ್ಸಿಗೆ ಸಂಬಂಧಿಸಿದ ವೈದ್ಯಕೀಯ ಪರೀಕ್ಷೆಗೆ ಆದೇಶಿಸಿತು. ಭಾನುವಾರವೇ ಧರ್ಮರಾಜ್ ಪರೀಕ್ಷೆ ನಡೆದಿದ್ದು, ಅದರ ವರದಿಯೂ ತಡರಾತ್ರಿ ಬಂದಿತ್ತು. ಧರ್ಮರಾಜ್ ಅವರನ್ನು ಅಕ್ಟೋಬರ್ 21ರವರೆಗೆ ಪೊಲೀಸ್ ಕಸ್ಟಡಿಗೆ ನೀಡಲಾಗಿದೆ. ಇವರೊಂದಿಗೆ ಗುರ್ಮೈಲ್ ಸಿಂಗ್ ಕೂಡ ಇದೇ 21ರವರೆಗೆ ನ್ಯಾಯಾಂಗ ಬಂಧನದಲ್ಲಿರಲಿದ್ದಾರೆ. ಎನ್‌ಸಿಪಿ ನಾಯಕ ಬಾಬಾ ಸಿದ್ದಿಕಿ ಅವರನ್ನು ಶನಿವಾರ ರಾತ್ರಿ ಗುಂಡಿಕ್ಕಿ ಹತ್ಯೆ ಮಾಡಲಾಗಿದೆ. ಭದ್ರತೆಗೆ ನಿಯೋಜನೆಗೊಂಡಿದ್ದ ಮೂವರು ಕಾನ್‌ಸ್ಟೆಬಲ್‌ಗಳು ಇಬ್ಬರು ಶೂಟರ್‌ಗಳನ್ನು ಸ್ಥಳದಲ್ಲೇ ಹಿಡಿದಿದ್ದರು. ಹರಿಯಾಣ ನಿವಾಸಿ ಗುರ್ಮೈಲ್ ಬಲ್ಜೀತ್ ಸಿಂಗ್ (23) ಮತ್ತು ಉತ್ತರ ಪ್ರದೇಶದ ಧರ್ಮರಾಜ್ ರಾಜೇಶ್ ಕಶ್ಯಪ್ (19) ಎಂದು ಗುರುತಿಸಲಾಗಿದೆ. ಮೂರನೇ ಆರೋಪಿ ಪ್ರವೀಣ್ ಲೋಂಕರ್ ನನ್ನು ಭಾನುವಾರ ರಾತ್ರಿ ಪುಣೆಯಲ್ಲಿ ಬಂಧಿಸಲಾಗಿದೆ. ಪೊಲೀಸರು ಶುಭಂ ಲೋಂಕರ್, ಶಿವಕುಮಾರ್ ಗೌತಮ್ ಮತ್ತು ಜೀಶನ್ ಅಖ್ತರ್ ಅವರನ್ನು ಹುಡುಕುತ್ತಿದ್ದಾರೆ. ಪ್ರವೀಣ್ ಮತ್ತು ಶುಭಂ ಲೋಂಕರ್ ಸಹೋದರರು. ಲಾರೆನ್ಸ್ ಬಿಷ್ಣೋಯ್ ಮತ್ತು ಅವರ ಸಹೋದರ ಅನ್ಮೋಲ್ ಬಿಷ್ಣೋಯ್ ಅವರನ್ನು ಟ್ಯಾಗ್ ಮಾಡುವ ಮೂಲಕ ಶುಭಂ ಲೋಂಕರ್ ಹೆಸರಿನಲ್ಲಿ ಫೇಸ್‌ಬುಕ್ ಖಾತೆಯಲ್ಲಿ ಪೋಸ್ಟ್ ಬರೆದು ಬಾಬಾ ಸಿದ್ದಿಕಿ ಹತ್ಯೆಯ ಹೊಣೆಹೊತ್ತಿದ್ದಾರೆ. ಮೂಲಗಳ ಪ್ರಕಾರ, ಪ್ರವೀಣ್ ಮತ್ತು ಶುಭಂ ಪ್ರಮುಖ ಸಂಚುಕೋರರು ಎಂದು ಪರಿಗಣಿಸಲಾಗಿದೆ. ಇಬ್ಬರೂ ಉಳಿದ 4 ಆರೋಪಿಗಳನ್ನು ಸೇರಿಸಿಕೊಂಡಿದ್ದರು. ಬಾಬಾ ಸಿದ್ದಿಕಿ ಮೇಲೆ ಆರು ಗುಂಡುಗಳನ್ನು ಹಾರಿಸಲಾಗಿತ್ತು ಅದರಲ್ಲಿ ಮೂರು ಗುಂಡುಗಳು ಅವರಿಗೆ ತಗುಲಿದ್ದವು. ಗಾಯಗೊಂಡ ಸ್ಥಿತಿಯಲ್ಲಿ ಬಾಬಾ ಸಿದ್ದಿಕಿಯನ್ನು ಲೀಲಾವತಿ ಆಸ್ಪತ್ರೆಗೆ ಕರೆದೊಯ್ಯಲಾಯಿತು, ಆದರೆ ಪ್ರಾಥಮಿಕ ಪರೀಕ್ಷೆಯ ನಂತರ ವೈದ್ಯರು ಅವರು ಸಾವನ್ನಪ್ಪಿದ್ದಾರೆ.ಲಿವುಡ್ ಇಂಡಸ್ಟ್ರಿಯ ಅನೇಕ ಪ್ರಸಿದ್ಧ ವ್ಯಕ್ತಿಗಳು ಲೀಲಾವತಿ ಆಸ್ಪತ್ರೆಗೆ ಭೇಟಿ ನೀಡಿದ್ದರು.

# ಡಿಫ್ತೀರಿಯಾದಿಂದ 100ಕ್ಕೂ ಹೆಚ್ಚು ಮಕ್ಕಳು ದಾರುಣ ಸಾವು

**ಪಾಕಿಸ್ತಾನ:** ಪಾಕಿಸ್ತಾನದಕರಾಚಿಯಲ್ಲಿಡಿಫ್ತೀರಿಯಾಕಾಯಿಲೆಯಿಂದಸುಮಾರು 100 ಕ್ಕೂಹೆಚ್ಚುಮಕ್ಕಳುಸಾವನ್ನಪ್ಪಿದ್ದಾರೆಎಂದುವರದಿಯಾಗಿದೆ.

ಡಿಫ್ತಿರಿಯಾವು ಗಂಭೀರ ಮತ್ತು ಸಾಂಕ್ರಾಮಿಕ ರೋಗವಾಗಿದ್ದು, ಡಿಫ್ತಿರಿಯಾ ಆಂಟಿಟಾಕ್ಸಿನ್ (ಡಿಎಟಿ) ಲಸಿಕೆಯ ಕೊರತೆಯಿಂದ ಮಕ್ಕಳು ಮೃತಪಟ್ಟಿದ್ದಾರೆ ಎನ್ನಲಾಗುತ್ತಿದೆ.

ವ್ಯಾಕ್ಸಿನೇಷನ್ ಸಹಾಯದಿಂದ ಇದನ್ನು ತಡೆಯಬಹುದು. ಆದರೆ, ಕರಾಚಿ ಮತ್ತು ಸಿಂಧ್ನ ಇತರ ಭಾಗಗಳಲ್ಲಿ ಈ ರೋಗದ ವಿರುದ್ಧ ಅಗತ್ಯವಿರುವ ಆಂಟಿಟಾಕ್ಸಿನ್ ಔಷಧಿಗಳ ಕೊರತೆ ಈ ಕಾಯಿಲೆಯನ್ನು ಮತ್ತಷ್ಟು ಹೆಚ್ಚಿಸಿದೆ ಎಂದು ವರದಿಯಾಗಿದೆ.

ಕಳೆದ ವರ್ಷ, ಸಿಂಧ್ನ ಸಾಂಕ್ರಾಮಿಕ ರೋಗಗಳ ಆಸ್ಪತ್ರೆಯಲ್ಲಿ 140 ಡಿಫ್ತೀರಿಯಾ ಪ್ರಕರಣಗಳು ದಾಖಲಾಗಿದ್ದವು, ಅದರಲ್ಲಿ 52 ಮಕ್ಕಳು ಮೃತಪಟ್ಟಿದ್ದರು. ಈ ವರ್ಷ 100 ಕ್ಕೂ ಹೆಚ್ಚು ಮಕ್ಕಳು ಡಿಫ್ತೀರಿಯಾದಿಂದ ಸಾವನ್ನಪ್ಪಿದ್ದಾರೆ. ಇಡೀ ಸಿಂಧ್ನಲ್ಲಿ ಆಂಟಿಟಾಕ್ಸಿನ್ ಔಷಧಿ ಲಭ್ಯವಿಲ್ಲ ಎಂದು ಸಾಂಕ್ರಾಮಿಕ ರೋಗ ತಜ್ಞರು ಹೇಳುತ್ತಾರೆ. ಒಂದು ಮಗುವಿಗೆ ಚಿಕಿತ್ಸೆ ನೀಡಲು 0.25 ಮಿಲಿಯನ್ ಪಾಕಿಸ್ತಾನಿ ರೂಪಾಯಿ (ಸುಮಾರು ?1.2 ಲಕ್ಷ) ಮೌಲ್ಯದ ಆಂಟಿಟಾಕ್ಸಿನ್ ಔಷಧದ ಅಗತ್ಯವಿದೆ ಎಂದು ವರದಿಯಾಗಿದೆ.



ವಿಶ್ವ ಆರೋಗ್ಯ ಸಂಸ್ಥೆ ಪ್ರಕಾರ, ಡಿಫ್ತಿರಿಯಾ ಗಂಟಲು ಮತ್ತು ಉಸಿರಾಟದ ಪ್ರದೇಶದ ಮೇಲೆ ಪರಿಣಾಮ ಬೀರುತ್ತದೆ. ಇದರ ಲಕ್ಷಣಗಳು ನೋಯುತ್ತಿರುವ ಗಂಟಲು, ಜ್ವರ, ಕತ್ತಿನ ಗ್ರಂಥಿಗಳ ಊತ ಮತ್ತು ದೌರ್ಬಲ್ಯ. ಸಕಾಲಿಕ ಚಿಕಿತ್ಸೆ ನೀಡದಿದ್ದರೆ, ಸುಮಾರು 30% ಪ್ರಕರಣಗಳಲ್ಲಿ ಡಿಫ್ತಿರಿಯಾ ಮಾರಕವಾಗಬಹುದು. ಅದರಲ್ಲೂ ಚಿಕ್ಕ ಮಕ್ಕಳು ಇದರಿಂದ ತುಂಬಾ ತೊಂದರೆ ಅನುಭವಿಸಬೇಕಾಗುತ್ತದೆ ಎಂದು ತಜ್ಞರು ಹೇಳಿದ್ದಾರೆ.

ಡಿಫ್ತಿರಿಯಾವನ್ನು ಲಸಿಕೆ ಮೂಲಕ ತಡೆಯಬಹುದು, ಆದರೆ ಇದಕ್ಕೆ ಸಕಾಲಿಕ ವ್ಯಾಕ್ಸಿನೇಷನ್ ಮತ್ತು ಬೂಸ್ಟರ್ ಡೋಸ್ ಅಗತ್ಯವಿರುತ್ತದೆ. ಖೈಬರ್ ಪಖ್ತುಂಖ್ವಾ ನಿರ್ದೇಶಕ ವಿಸ್ತರಿತ ಇಮ್ಯುನೈಸೇಶನ್ ಪ್ರೋಗ್ರಾಂ ಮೊಹಮ್ಮದ್ ಆರಿಫ್ ಖಾನ್ ಹೇಳುವ ಪ್ರಕಾರ, ಡಿಫ್ತಿರಿಯಾ ಏಕಾಏಕಿ ತಡೆಗಟ್ಟುವ ಏಕೈಕ ಮಾರ್ಗವೆಂದರೆ ಸರಿಯಾದ ಸಮಯದಲ್ಲಿ ಲಸಿಕೆ ನೀಡುವುದಾಗಿದೆ.

# ಕಿರುಕುಳದ ದೂರು ನೀಡಿ ಕೆಲವೇ ದಿನಗಳಲ್ಲಿ ಯುವತಿಗೆ ಬೆಂಕಿ ಹಚ್ಚಿದ ಆರೋಪಿಯ ಮಗ

**ದೆಹಲಿ:** ವ್ಯಕ್ತಿಯೊಬ್ಬರು ಯುವತಿಗೆ ಕಿರುಕುಳ ನೀಡಿದ್ದಕ್ಕೆ ಆಕೆ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ್ದಳು. ಆರೋಪಿಯ ಮಗ ಆಕೆಗೆ ಬೆಂಕಿ ಹಚ್ಚಿರುವ ಘಟನೆ ಮಧ್ಯಪ್ರದೇಶದಲ್ಲಿ ನಡೆದಿದೆ. ಮಧ್ಯಪ್ರದೇಶದ ಖಾಂಡ್ವಾ ಬಳಿಯ ಹಳ್ಳಿಯೊಂದರಲ್ಲಿ ಈ ಘಟನೆ ನಡೆದಿದೆ. ಅಕ್ಟೋಬರ್ 7 ರಂದು ಯುವತಿ ದೂರು ನೀಡಿದ್ದರು, ಅವರು ಹೊಲದಲ್ಲಿ ಕೆಲಸ ಮಾಡುತ್ತಿರುವ ಸಂದರ್ಭದಲ್ಲಿ ಆರೋಪಿ ಆಕೆಗೆ ಕಿರುಕುಳ ನೀಡಿದ್ದ. ಆತನನ್ನು ಬಂಧಿಸಿ ಅಕ್ಟೋಬರ್ 8ರಂದು ಜಾಮೀನಿನ ಮೇಲೆ ಬಿಡುಗಡೆ ಮಾಡಲಾಗಿತ್ತು. ಯುವತಿಯ ಕುಟುಂಬದವರಿಗೆ ಆತ ಬೆದರಿಕೆ ಹಾಕಿದ್ದ. ಶುಕ್ರವಾರ ಮಂಗೀಲಾಲ್ ಅವರ ಮಗ ಅರ್ಜುನ್ ಮಹಿಳೆಯ ಮನೆಗೆ ಹೋಗಿ ಆಕೆಯ ಮೇಲೆ ಪೆಟ್ರೋಲ್ ಸುರಿದು ಬೆಂಕಿ ಹಚ್ಚಿದ್ದಾನೆ. ಆಕೆ ತಪ್ಪಿಸಿಕೊಂಡು ಹೊರಗೆ ಬಂದಿದ್ದು, ಕೂಡಲೇ ಕುಟುಂಬದವರು ಆಸ್ಪತ್ರೆಗೆ ಕರೆದೊಯ್ದಿದ್ದಾರೆ, ಮಹಿಳೆಯನ್ನು ಇಂದೋರ್‌ನ ಆಸ್ಪತ್ರೆಗೆ ದಾಖಲಿಸಲಾಗಿದೆ. ದೇಹದ ಶೇ.27ರಷ್ಟು ಭಾಗಕ್ಕೆ ಸುಟ್ಟ ಗಾಯಗಳಾಗಿದ್ದು, ಸ್ಥಿತಿ ಗಂಭೀರವಾಗಿದೆ. ಅರ್ಜುನ್ ವಿರುದ್ಧ ಭಾರತೀಯ ನ್ಯಾಯ ಸಂಹಿತಾ (ಬಿಎನ್‌ಎಸ್) ಸೆಕ್ಷನ್ 109 ರ ಅಡಿಯಲ್ಲಿ ಕೊಲೆ ಯತ್ನದ ಆರೋಪ ಹೊರಿಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ಲಿಫ್ಟ್‌ನಲ್ಲಿ ಮೈ ಮುಟ್ಟಿ ಕಿರುಕುಳ ಕೊಟ್ಟವನ ಗ್ರಹಚಾರ ಬಿಡಿಸಿದ ಮಹಿಳೆ ಹೆಚ್ಚಾಗಿ ಜನಜಂಗುಳಿ ಸ್ಥಳಗಳಲ್ಲಿ, ಬಸ್, ಟ್ರೈನ್‌ಗಳಲ್ಲಿ ಕೆಲ ಕಾಮುಕರು ಬೇಕು ಬೇಕಂತಲೇ ಹೆಣ್ಣು ಮಕ್ಕಳ ಮೈ ಮುಟ್ಟಿ ಅನುಚಿತವಾಗಿ ವರ್ತಿಸುತ್ತಿರುತ್ತಾರೆ. ಪ್ರತಿನಿತ್ಯ ಇಂತಹ ಸಾಕಷ್ಟು ಘಟನೆಗಳು ನಡೆಯುತ್ತಲೇ ಇರುತ್ತವೆ. ಇದೀಗ ಇಲ್ಲೊಂದು ಇಂತಹದ್ದೇ ಘಟನೆ ನಡೆದಿದ್ದು, ವ್ಯಕ್ತಿಯೊಬ್ಬ ಲಿಫ್ಟ್‌ನಲ್ಲಿದ್ದ ಒಂಟಿ ಮಹಿಳೆಯ ಮೈ ಮುಟ್ಟಿ ಅಸಭ್ಯವಾಗಿ ವರ್ತಿಸಿದ್ದಾನೆ. ಇದರಿಂದ ಕೋಪಗೊಂಡ ಆ ದಿಟ್ಟ ಹೆಣ್ಣು ಆತನ ಖಾಸಗಿ ಅಂಗಕ್ಕೆ ಜಾಡಿಸಿ ಒದ್ದು ತಕ್ಕ ಶಾಸ್ತಿ ಮಾಡಿದ್ದಾಳೆ. ಈ ವಿಡಿಯೋ ಇದೀಗ ಸಿಕ್ಕಾಪಟ್ಟೆ ವೈರಲ್ ಆಗಿದ್ದು, ಆ ಮಹಿಳೆಯ ಈ ದಿಟ್ಟ ನಡೆಗೆ ಭಾರೀ ಶ್ಲಾಘನೆ ವ್ಯಕ್ತವಾಗುತ್ತಿದೆ. ಕುರಿತ ವಿಡಿಯೋವನ್ನು ಖಿಜಈಂಜಟಿ ಹೆಸರಿನ ಎಕ್ಸ್ ಖಾತೆಯಲ್ಲಿ ಹಂಚಿಕೊಳ್ಳಲಾಗಿದ್ದು, "'ತುಂಬಾ ಪರಿಪೂರ್ಣವಾದ ಕಿಕ್! ಮಹಿಳೆಯರೆಲ್ಲರೂ ಇದೇ ರೀತಿ ತಮ್ಮ ಸ್ವ-ರಕ್ಷಣೆಯನ್ನು ಮಾಡಿಕೊಳ್ಳಬೇಕು'' ಎಂಬ ಶೀರ್ಷಿಕೆಯನ್ನು ಬರೆದುಕೊಂಡಿದ್ದಾರೆ. ವೈರಲ್ ಆಗುತ್ತಿರುವ ವಿಡಿಯೋದಲ್ಲಿ ಲಿಫ್ಟ್ ಒಳಗೆ ಪ್ರವೇಶಿಸಿದ ಒಂಟಿ ಮಹಿಳೆಯ ಮೈ ಮುಟ್ಟಿ ವ್ಯಕ್ತಿಯೊಬ್ಬ ಅನುಚಿತವಾಗಿ ವರ್ತಿಸುತ್ತಿರುವ ದೃಶ್ಯವನ್ನು ಕಾಣಬಹುದು. ಆತ ಮೈ ಮುಟ್ಟಲು ಯತ್ನಿಸಿದಾಗ ಆತನ ಕಪಾಳಕ್ಕೆ ಬಾರಿಸಿ, ಖಾಸಗಿ ಅಂಗಕ್ಕೆ ಸರಿಯಾಗಿ ಒದ್ದು ಬುದ್ಧಿ ಕಲಿಸಿದ್ದಾಳೆ.

# 50 ವರ್ಷಗಳ ಬಳಿಕ ಸಹರಾ ಮರುಭೂಮಿಯಲ್ಲಿ ಜೀವ ಜಲ

**ದೆಹಲಿ:** ಹಲವು ದಶಕಗಳ ಬಳಿಕ ಸಹರಾ ಮರುಭೂಮಿಯಲ್ಲಿ ಧಾರಾಕಾರ ಮಳೆ ಸುರಿದಿದೆ. ಮರುಭೂಮಿಯ ತಾಳೆ ಮರಗಳು, ಮರಳು ದಿಬ್ಬಗಳ ನಡುವೆ ಜೀವ ಜಲ ಹರಿದು ಬಂದಿದ್ದು ಇದರಿಂದ ಜನ ಸಖತ್ ಖುಷಿಯಾಗಿದ್ದಾರೆ.

ಮೊರಾಕ್ಕೊದ ಆಗ್ನೇಯ ದಿಕ್ಕಿನಲ್ಲಿರುವ ಮರುಭೂಮಿ ಜಗತ್ತಿನಲ್ಲೇ ಅತಿ ಶುಷ್ಕ ಪ್ರದೇಶಗಳಲ್ಲಿ ಒಂದಾಗಿದೆ.

ಇಲ್ಲಿ ಮಳೆ ತೀರಾ ಅಪರೂಪ. ಮೊರಾಕ್ಕೋ ಸರ್ಕಾರದ ಪ್ರಕಾರ, ಇತ್ತೀಚೆಗೆ ಎರಡು ದಿನ ಇಲ್ಲಿನ ಕೆಲವು ಭಾಗಗಳಲ್ಲಿ ಸುರಿದ ಮಳೆ ವಾರ್ಷಿಕ ಮಳೆಯ ಸರಾಸರಿ ಪ್ರಮಾಣವನ್ನು ಮೀರಿಸಿದೆ. ಇಲ್ಲಿ ವಾರ್ಷಿಕವಾಗಿ ಸರಾಸರಿ 250 ಮಿಲಿ ಮೀಟರ್ಗಿಂತ (10 ಇಂಚು) ಕಡಿಮೆ ಮಳೆ ಬೀಳುತ್ತದೆ.

ಹಲವು ದಶಕಗಳ ನಂತರ ಮರುಭೂಮಿ ಸಸ್ಯವರ್ಗ, ಮರಳು ದಿಬ್ಬಗಳ ನಡುವೆ ನೀರು ನಿಂತಿರುವ ದೃಶ್ಯಗಳು ನೋಡಲು ಮೋಹಕವಾಗಿದ್ದು, ಮರುಭೂಮಿಯಲ್ಲಿ ವಾಸಿಸುವ ಜನರು ಭೇಟಿ ನೀಡುವ ಪ್ರವಾಸಿಗರಿಗರು ಈ ದೃಶ್ಯವನ್ನು ಕಣ್ತುಂಬಿಕೊಂಡು ಖುಷಿಪಟ್ಟಿದ್ದಾರೆ.

ನಾವು ಇಂಥ ದೃಶ್ಯವನ್ನು ನೋಡಿ 30ರಿಂದ 50 ವರ್ಷಗಳೇ ಆದವು ಎಂದು ಮೊರಾಕ್ಕೋ ಹವಾಮಾನ ನಿರ್ದೇಶನಾಲಯದ ಅಧಿಕಾರಿ ಹೊಸ್ಸೈನ್ ಯಾಬೆಬ್ ಹೇಳಿದರು. ಹವಾಮಾನದ ಪರಿಭಾಷೆಯಲ್ಲಿ ಇದನ್ನು ಉಷ್ಣವಲಯದ ಚಂಡಮಾರುತಗಳು ಎನ್ನಬಹುದು. ಈಗ ಸುರಿದ ಮಳೆಯಿಂದಾಗಿ ಗಾಳಿಯಲ್ಲಿ ಹೆಚ್ಚು ತೇವಾಂಶವಿರಲಿದ್ದು, ಈ ಪ್ರದೇಶದ ಹವಾಗುಣದಲ್ಲಿ ಮುಂದಿನ ಹಲವು ತಿಂಗಳು ಮತ್ತು ವರ್ಷಗಳಲ್ಲಿ ಬದಲಾವಣೆಯಾಗಲಿದೆ. ಇದರಿಂದಾಗಿ ಹೆಚ್ಚೆಚ್ಚು ಆವಿಯಾಗುವಿಕೆ ಪ್ರಕ್ರಿಯೆ ನಡೆದ ಭವಿಷ್ಯದಲ್ಲಿ ಅಧಿಕ ಮಳೆಯಾಗುವ ಸಾಧ್ಯತೆಯೂ ಇದೆ ಎಂದು ಅವರು ಹೇಳಿದರು. ನಿರಂತರವಾಗಿ ಕಳೆದ 6 ವರ್ಷಗಳಿಂದಲೂ ಮೊರಾಕ್ಕೋ ತೀವ್ರ ಬರ ಎದುರಿಸುತ್ತಿದೆ. ನೀರಿಲ್ಲದೆ ಜನರು ತಮ್ಮ ಜಮೀನುಗಳನ್ನು ಪಾಳುಬಿಟ್ಟಿದ್ದಾರೆ. ಪೇಟೆ, ಪಟ್ಟಣಗಳಲ್ಲಿ ನೀರಿನ ಬಳಕೆಗೆ ಮಿತಿ ಹೇರಲಾಗಿದೆ. ಹೀಗಾಗಿ ಈಗ ಸುರಿದ ಮಳೆಯಿಂದಾಗಿ ಅಂತರ್ಜಲ ವೃದ್ಧಿಸಲಿದೆ. ಇದರೊಂದಿಗೆ ಮುಂದಿನ ದಿನಗಳಲ್ಲಿ ಮರುಭೂಮಿಯಲ್ಲಿ ವಾಸಿಸುವ ಜನರ ನೀರಿನ ಬವಣೆ ನೀಗಿಸುವ ನಿರೀಕ್ಷೆ ಮೂಡಿಸಿದೆ.



# ವಿಶ್ವಸಂಸ್ಥೆ ಶಾಂತಿಪಾಲನಾ ಪಡೆ ಮೇಲಿನ ದಾಳಿಗೆ ವ್ಯಾಪಕ ಖಂಡನೆ

**ವಿಶ್ವಸಂಸ್ಥೆ:** ಹಿಜ್ಬುಲ್ಲಾ ವಿರುದ್ಧದ ಇಸ್ರೇಲ್ ಮಿಲಿಟರಿ ಕಾರ್ಯಾಚರಣೆಯ ನಡುವೆಯೇ ಲೆಬನಾನ್ನಲ್ಲಿ ನಿಯೋಜನೆಗೊಂಡಿರುವ ವಿಶ್ವಸಂಸ್ಥೆಯ ಶಾಂತಿಪಾಲನಾ ನಿಯೋಗದ ಮೇಲೆ ಇತ್ತೀಚೆಗೆ ನಡೆದ ದಾಳಿಯನ್ನು ಭಾರತ ಸಹಿತ ಹಲವು ದೇಶಗಳು ಬಲವಾಗಿ ಖಂಡಿಸಿವೆ.

ಇಂತಹ ಕೃತ್ಯಗಳು ತಕ್ಷಣವೇ ನಿಲ್ಲಬೇಕು ಮತ್ತು ಇದರ ಬಗ್ಗೆ ಸೂಕ್ತವಾಗಿ ತನಿಖೆ ನಡೆಯಬೇಕು ಎಂದು ಲೆಬನಾನ್ನಲ್ಲಿರುವ ವಿಶ್ವಸಂಸ್ಥೆ ಶಾಂತಿಪಾಲನಾ ಪಡೆಗೆ ಯೋಧರನ್ನು ಕಳುಹಿಸಿರುವ ದೇಶಗಳು ಆಗ್ರಹಿಸಿವೆ.

ಭಾರತ, ಇಂಡೊನೇಶ್ಯಾ, ಇಟಲಿ, ಘಾನಾ, ನೇಪಾಳ, ಮಲೇಶ್ಯಾ, ಸ್ಪೇನ್, ಫ್ರಾನ್ಸ್ ದೇಶಗಳು ನೂರಾರು ಯೋಧರನ್ನು ಶಾಂತಿಪಾಲನಾ ಪಡೆಗೆ (ಯುಎನ್ಐಎಫ್ಐಎಲ್) ರವಾನಿಸಿವೆ. ದಕ್ಷಿಣ ಲೆಬನಾನ್ನಲ್ಲಿ ಇರಾನ್ ಬೆಂಬಲಿತ ಹಿಜ್ಬುಲ್ಲಾ ಗುಂಪಿನ ಮೇಲೆ ಇಸ್ರೇಲ್ ಇತ್ತೀಚೆಗೆ ನಡೆಸಿದ ದಾಳಿಯಲ್ಲಿ ಕನಿಷ್ಠ 5 ಶಾಂತಿಪಾಲಕರು ಗಾಯಗೊಂಡಿದ್ದರು.

ಇಸ್ರೇಲ್ ಮಿಲಿಟರಿಯು ಶಾಂತಿಪಾಲನಾ ಪಡೆಯ ಯೋಧರ ಮೇಲೆ ಉದ್ದೇಶಪೂರ್ವಕ ಗುಂಡಿನ ದಾಳಿ ನಡೆಸಿದ್ದು ಈ ಕೃತ್ಯವು ಲೆಬನಾನ್, ಮಧ್ಯಪ್ರಾಚ್ಯದಲ್ಲಿ ಶಾಶ್ವತ ಶಾಂತಿಗೆ ತೊಡಕಾಗಲಿದೆ ಎಂದು ಯುಎನ್ ಐಎಫ್ಐಎಲ್ ಆರೋಪಿಸಿದೆ.

ಶನಿವಾರ ಮೂರು ಪ್ರದೇಶಗಳ ಮೇಲೆ ಇಸ್ರೇಲ್



ನಡೆಸಿದ ವೈಮಾನಿಕ ದಾಳಿಯಲ್ಲಿ ಕನಿಷ್ಠ 15 ಮಂದಿ ಮೃತಪಟ್ಟಿರುವುದಾಗಿ ಲೆಬನಾನ್ ನ ಆರೋಗ್ಯ ಇಲಾಖೆ ಹೇಳಿದೆ.

ಶಾಂತಿಪಾಲನಾ ಪಡೆಗೆ ಯೋಧರನ್ನು ಕಳುಹಿಸಿರುವ 40 ದೇಶಗಳು 'ಯುಎನ್ಐಎಫ್ಐಎಲ್ ನ ಉದ್ದೇಶ ಮತ್ತು ಕಾರ್ಯಾಚರಣೆಗೆ ತಮ್ಮ ಸಂಪೂರ್ಣ ಬೆಂಬಲವನ್ನು ಪುನರುಚ್ಚರಿಸಿವೆ. ದಕ್ಷಿಣ ಲೆಬನಾನ್ ಮತ್ತು ಮಧ್ಯಪ್ರಾಚ್ಯದಲ್ಲಿ ಶಾಶ್ವತ ಶಾಂತಿ ಮತ್ತು ಸ್ಥಿರತೆಯನ್ನು ತರುವ ಪ್ರಧಾನ ಉದ್ದೇಶ ಹೊಂದಿರುವ ಶಾಂತಿಪಾಲನಾ ಪಡೆಯ ಉಪಸ್ಥಿತಿಯನ್ನು ಗೌರವಿಸಬೇಕು. ಮತ್ತು ಶಾಂತಿಪಾಲನಾ ಪಡೆಯ ಸಿಬ್ಬಂದಿಯ ಸುರಕ್ಷತೆ ಮತ್ತು ಭದ್ರತೆಯನ್ನು ಎಲ್ಲಾ ಸಮಯದಲ್ಲೂ ಖಾತರಿ ಪಡಿಸಲು ಎಲ್ಲಾ ಪಕ್ಷಗಳೂ ಬದ್ಧವಾಗಬೇಕು ಎಂದು 40 ದೇಶಗಳು ಸಹಿ ಹಾಕಿರುವ ಜಂಟಿ ಹೇಳಿಕೆ ಒತ್ತಾಯಿಸಿದೆ.

ಸಂಜೆ ಮುಗಿಲು

Postal Registration No.KA/BGW-1823/2019-2021, Posted at Patrika Channel, RMS Bhavan, Bengaluru PSO, Mysore Road, Bengaluru- 560020, RNI No.KARKAN/2002/08054

# ನನ್ನ ಸೀರೆ ಬಣ್ಣ ನಿನ್ನ ಹೃದಯಕ್ಕೆ ಮ್ಯಾಚ್ ಆಗುತ್ತೆ ಅಂತ



ಅನುಪಮಾ ಗೌಡ ಹೇಳಿದ್ದು ಯಾರಿಗೆ?

ನಟಿ ನಿರೂಪಕಿಯಾಗಿ ಜನಪ್ರಿಯತೆ ಪಡೆದಿರುವ ಅನುಪಮಾ ಗೌಡ, ಇತ್ತೀಚೆಗೆ ಅದ್ದೂರಿಯಾಗಿ ತಮ್ಮ ಹೊಸ ಮನೆಗೆ ಕಾಲಿಟ್ಟಿದ್ದು, ಮನೆಗೆ 'ನಮ್ಮನೆ' ಎಂದು ನಾಮಕರಣ ಮಾಡಿದ್ದು, ಅದ್ದೂರಿಯಾಗಿ ಗೃಹಪ್ರವೇಶ ಮಾಡಿದ್ದರು.

ಹಲವಾರು ಜನ ಬೆಂಗಳೂರಲ್ಲಿ ತಮ್ಮ ಸ್ವಂತ ಮನೆ ನಿರ್ಮಾಣ ಮಾಡಬೇಕೆಂದು ಕನಸು ಕಾಣುತ್ತಿರುವಾಗ, ಅನುಪಮಾ ತಮ್ಮ ಕಠಿಣ ಪರಿಶ್ರಮದಿಂದ ಇದೀಗ ತಮ್ಮದೇ ಆದ ದೊಡ್ಡದಾದ ಮನೆಯನ್ನು ನಿರ್ಮಿಸಿದ್ದಾರೆ, ಗೃಹಪ್ರವೇಶಕ್ಕೆ ಕಿರುತೆರೆ- ಹಿರಿತೆರೆ ತಾರೆಯರು ಆಗಮಿಸಿ ಶುಭ ಕೋರಿದ್ದರು.

ಸೆಲೆಬ್ರಿಟಿಗಳಾದ ನೇಹಾ ರಾಮಕೃಷ್ಣ, ಅನುಪ್ರಭಾಕರ್, ದಿವ್ಯಾ ಉರುಡುಗ, ಇಶಿತಾ ವರ್ಷ, ಕಿಶನ್ ಬಿಳಗಲಿ, ಕಾರ್ತಿಕ್ ಶರ್ಮಾ, ಕೃಷಿ ತಾಪಂಡ ಮೊದಲಾದವರು ತಮ್ಮ ಗೆಳತಿ ಅನುಪಮಾ ಸಂಭ್ರಮದಲ್ಲಿ ಭಾಗಿಯಾಗಿ ಸಂಭ್ರಮಿಸಿದ್ದರು.

ಇದೀಗ ಅನುಪಮಾ ಸೋಶಿಯಲ್ ಮೀಡಿಯಾದಲ್ಲಿ ಸೀರೆಯುಟ್ಟಿರುವ ಒಂದು ವಿಡಿಯೋ ಶೇರ್ ಮಾಡಿದ್ದು, ನಮ್ಮನೆ ಗೃಹಪ್ರವೇಶದ ಮೊದಲ ದಿನ ಎಂದು ಕ್ಯಾಪ್ಶನ್ ಬರೆದುಕೊಂಡಿದ್ದಾರೆ. ಇದರ ಜೊತೆಗೆ ಅವರು ಬರೆದಿರುವ ಇನ್ನೊಂದು ಕ್ಯಾಪ್ಶನ್ ಬಗ್ಗೆ ಅಭಿಮಾನಿಗಳಲ್ಲಿ ಕುತೂಹಲ ಮೂಡಿದೆ.

ಐವರಿ ಬಣ್ಣದ ಬಾರ್ಡರ್ ಮತ್ತು ಪಲ್ಲೂ ಇರುವ ಕೆಂಪು ಬಣ್ಣದ ಮೈಸೂರ್ ಸಿಲ್ಕ್ ಸೀರೆ ಧರಿಸಿರುವ ಅನುಪಮಾ ನನ್ನ ಸೀರೆ ಬಣ್ಣ ನಿನ್ನ ಹೃದಯಕ್ಕೆ ಮ್ಯಾಚ್ ಆಗುತ್ತೆ ಎಂದು ಬರೆದುಕೊಂಡಿದ್ದಾರೆ.

ಅಷ್ಟಕ್ಕೂ ಅನುಪಮಾ ಇದ್ಯಾರಿಗೆ ಈ ರೀತಿಯಾಗಿ ಹೇಳ್ತಿದ್ದಾರೆ ಅಂತ ಅಭಿಮಾನಿಗಳಲ್ಲಿ ಪ್ರಶ್ನೆ ಮೂಡಿದೆ. ಅನುಪಮಾ ಲವ್ವಲ್ಲಿ ಬಿದ್ದೀದ್ದಾರ? ಹೊಸಮನೆಗೆ ಪ್ರವೇಶ ಮಾಡಿರುವ ಅನುಪಮಾ ಸದ್ಯದಲ್ಲೇ ಹೊಸ ಜೀವನಕ್ಕೆ ಪ್ರವೇಶ ಮಾಡುವ ಬಗ್ಗೆ ಗುಟ್ಟು ಬಿಚ್ಚಿಡುತ್ತಿದ್ದಾರ? ಅನ್ನೋದು ಗೊತ್ತಿಲ್ಲ.

ಕಳೆದ ಮೂರು ತಿಂಗಳಿನಿಂದ ಅನುಪಮಾ ರಾಜಾರಾಣಿ ರೀಲೋಡೆಡ್ ಕಾರ್ಯಕ್ರಮದಲ್ಲಿ ನಿರೂಪಕಿಯಾಗಿದ್ದರು. ಆವಾಗ ಸೃಜನ್ ಲೋಕೇಶ್ ಮದ್ವೆ ಬಗ್ಗೆ ಹೇಳಿ ಅನುಪಮಾ ಕಾಲೆಳೆಯುತ್ತಿದ್ದರು. ಅಷ್ಟೇ ಅಲ್ಲ ಮೂವರು ತೀರ್ಪುಗಾರರು ಸಹ ಅನುಪಮಾಗೆ ಪ್ರೀತಿ ಪಾಠ ಮಾಡುತ್ತಿದ್ದರು. ಹಾಗಾಗಿ ಇದೀಗ ಅನುಪಮಾ ಲವ್ವಲ್ಲಿ ಬಿದ್ದಿದ್ದಾರ ಅನ್ನೋ ಅನುಮಾನ ಶುರುವಾಗಿದೆ.

# ಸುದೀಪ್‌ಗೆ ಅವಮಾನ



## ಬಿಗ್ ಬಾಸ್ ತೊರೆಯುವುದರ ಹಿಂದಿದೆ ಶಾಕಿಂಗ್ ವಿಚಾರ

ಕಿಚ್ಚ ಸುದೀಪ್ ಅವರು ಏಕಾಏಕಿ 'ಬಿಗ್ ಬಾಸ್' ನಿರೂಪಣೆಯಿಂದ ಕೆಳಕ್ಕೆ ಇಳಿಯೋ ನಿರ್ಧಾರ ತೆಗೆದುಕೊಂಡಿದ್ದಾರೆ. ಅವರು ಅನೌನ್ಸ್ ಮೆಂಟ್ ಸಾಕಷ್ಟು ಶಾಕಿಂಗ್ ಎನಿಸಿದೆ. ಅವರು ಏಕಾಏಕಿ ಬಿಗ್ ಬಾಸ್ ತೊರೆಯೋ ಹಿಂದೆ ಒಂದು ದೊಡ್ಡ ಕಾರಣ ಇದೆ ಎಂದು ವರದಿ ಆಗಿದೆ. ಈ ಬಗ್ಗೆ ಕನ್ನಡ ಪರ ಹೋರಾಟಗಾರ ರೂಪೇಶ್ ರಾಜಣ್ಣ ಅವರು ಟ್ವೀಟ್ ಮಾಡಿದ್ದಾರೆ.

ಕಿಚ್ಚ ಸುದೀಪ್ ಅವರು ಬಿಗ್ ಬಾಸ್‌ನ 10 ಸೀಸನ್ ಗಳನ್ನು ಯಶಸ್ವಿಯಾಗಿ ನಡೆಸಿಕೊಟ್ಟಿದ್ದಾರೆ. ಅವರು ಈಗ ನಿರೂಪಣೆ ಮಾಡುತ್ತಿರುವುದು 11ನೇ ಸೀಸನ್. ಅವರು 'ಬಿಗ್ ಬಾಸ್ 'ನ ತೊರೆಯುತ್ತಾರೆ ಎಂದು ಯಾರೂ ಊಹಿಸಿರಲಿಲ್ಲ. ಅವರು ಈ ಘೋಷಣೆ ಮಾಡುವುದರ ಹಿಂದೆ ಯಾವುದೋ ಒಂದು ಬಲವಾದ ಕಾರಣವೇ ಇದೆ ಎಂದು ಹೇಳಲಾಗುತ್ತಿದೆ. ಈ ಬಗ್ಗೆ ರೂಪೇಶ್ ರಾಜಣ್ಣ ಟ್ವೀಟ್ ಮಾಡಿದ್ದಾರೆ.

'ಬಿಗ್ ಬಾಸ್ ಎಂಬ ಕಾರ್ಯಕ್ರಮ ನಡೆಸುವ ಕೆಲವು ಕನ್ನಡ ದ್ರೋಹಿಗಳೆ ನಿಮ್ಮ ಆಟಕ್ಕೆ ಸುದೀಪ್ ನಿರೂಪಣೆ ನಿಲ್ಲಿಸಬೇಕಾಯಿತು. ಅವರಿಗೆ ಮಾಡಿದ ಅವಮಾನ ಸಹಿಸುವುದಿಲ್ಲ. ಮುಂಬೈ ಮರಾಠಿ ಹಾಗೂ ತಮಿಳು ನಿರ್ದೇಶಕರೇ ಮೊದಲು ಬಿಗ್ ಬಾಸ್ ಬಿಡಿ, ಇಲ್ಲ ಬಿಗ್ ಬಾಸ್ ನಿಲ್ಲಬೇಕು. ಅಸಲಿ ವಿಷಯ ನಾಳೆ ಮಾತಾಡ್ತೀನಿ' ಎಂದು ರೂಪೇಶ್ ರಾಜಣ್ಣ ಹೇಳಿದ್ದಾರೆ.

ಬಿಗ್ ಬಾಸ್ ಎಂಬ ಕಾರ್ಯಕ್ರಮ ನಡೆಸುವ ಕೆಲವು ಕನ್ನಡ ದ್ರೋಹಿಗಳ ನಿಮ್ಮ ಕಿತ್ತೋದ್ ಆಟಕ್ಕೆ @KicchaSudeep ಬಿಗ್ ಬಾಸ್ ನಿರೂಪಕರಾಗಿ ನಿಲ್ಲಿಸಬೇಕಾಗಿದೆ. ಅವರಿಗೆ ಮಾಡಿದ ಅವಮಾನ ಸಹಿಸೋಲ್ಲ ಎ ಮುಂಬೈ ಮರಾಠಿ ಹಾಗೂ ತಮಿಳ್ ನಿರ್ದೇಶಕ ಮೊದಲು ಬಿಗ್ ಬಾಸ್ ಬಿಡಿ ಇಲ್ಲ ಬಿಗ್ ಬಾಸ್ ನಿಲ್ಲಬೇಕು ಅಸಲಿ ವಿಷಯ ನಾಳೆ ಮಾತಾಡ್ತೀನಿ.@Chakravarthy_dj

ರೂಪೇಶ್ ರಾಜಣ್ಣ ಅವರು ಕನ್ನಡ ಪರ ಹೋರಾಟಗಾರ. ಕನ್ನಡದ ಪರವಾಗಿ ಅವರು ಧ್ವನಿ ಎತ್ತುತ್ತಾರೆ. ಅವರು ಈ ಮೊದಲು ಬಿಗ್ ಬಾಸ್ ಗೂ ಹೋಗಿ ಬಂದಿದ್ದಾರೆ. ಹೀಗಾಗಿ, ಅವರ ಜನಪ್ರಿಯತೆ ಹೆಚ್ಚಿದೆ. ಅಸಲಿಗೆ ಬಿಗ್ ಬಾಸ್ ನಲ್ಲಿ ಏನಾಯ್ತು ಅಲ್ಲಿ ನಡೆದ ಘಟನೆ ಏನು ಎನ್ನುವ ಬಗ್ಗೆ ಕುತೂಹಲ ಮೂಡಿದೆ. ಇಂದು (ಅಕ್ಟೋಬರ್ 14) ರೂಪೇಶ್ ರಾಜಣ್ಣ ಈ ಬಗ್ಗೆ ಘೋಷಣೆ ಮಾಡೋ ಸಾಧ್ಯತೆ ಇದೆ.

ಸುದೀಪ್ ಅವರು ಬಿಗ್ ಬಾಸ್‌ನ ಅತಿಯಾಗಿ ಪ್ರೀತಿಸುತ್ತಾರೆ. ಅವರು ಶೋನ ತೊರೆದಿದ್ದು ಏಕೆ ಎನ್ನುವ ಪ್ರಶ್ನೆ ಅನೇಕರಿಗೆ ಮೂಡಿತ್ತು. ಒಂದೊಮ್ಮೆ ಅವರು ಈ ಘೋಷಣೆ ಮಾಡುವುದಿದ್ದರೂ ಸೀಸನ್ ಕೊನೆಯಲ್ಲಿ ಮಾಡಬೇಕಿತ್ತು. ಅವರು ಈ ರೀತಿ ಮಾಡಿರುವ ಟ್ವೀಟ್ ಸಾಕಷ್ಟು ಅಚ್ಚರಿ ತಂದಿದೆ. ಇದರ ಹಿಂದೆ ಯಾವುದೋ ದೊಡ್ಡ ಘಟನೆ ನಡೆದಿದೆ ಎಂದು ಊಹಿಸಲಾಗುತ್ತಿದೆ.

# ಬಿಗ್ ಬಾಸ್ ಸ್ಪರ್ಧಿಯ ಖಾಸಗಿ ವಿಡಿಯೋ ಲೀಕ್

ಬಿಗ್ ಬಾಸ್ ರಿಯಾಲಿಟಿ ಶೋ ಸ್ಪರ್ಧೆ ವೀಕ್ಷಕರ ಗಮನ ಹಿಡಿದಿಟ್ಟುಕೊಳ್ಳುತ್ತಿದೆ. ಜೊತೆಗೆ ವಿವಾದಕ್ಕೂ ಕಾರಣವಾಗುತ್ತಿದೆ. ಕನ್ನಡ ಬಿಗ್ ಬಾಸ್ ಮೇಲೆ ಮಹಿಳಾ ಆಯೋಗ ಗರಂ ಆಗಿ ವಿವಾದಕ್ಕೆ ಕಾರಣವಾಗಿತ್ತು. ಇತ್ತ ತಮಿಳು ಬಿಗ್ ಬಾಸ್ ಇದೀಗ ಭಾರಿ ವಿವಾದಕ್ಕೆ ಗುರಿಯಾಗಿದೆ. ಇದಕ್ಕೆ ಕಾರಣ ಸ್ಪರ್ಧಿ, ಬಹುಭಾಷಾ ನಟಿ ಒವಿಯಾ. ಒವಿಯಾ ಎಂದೇ ಜನಪ್ರಿಯಾಗಿರುವ ನಟಿ ಹೆಲೆನ್ ನೆಲ್ಸನ್ ಸದ್ಯ ತಮಿಳು ಬಿಗ್ ಬಾಸ್ ರಿಯಾಲಿಟಿ ಶೋನಲ್ಲಿದ್ದಾರೆ. ಆದರೆ ಸ್ಪರ್ಧೆ ತೀವ್ರಗೊಳ್ಳುತ್ತಿದ್ದಂತೆ ಒವಿಯಾ ಅವರದ್ದು ಎನ್ನಲಾದ ಖಾಸಗಿ ವಿಡಿಯೋ ಸೋಶಿಯಲ್ ಮೀಡಿಯಾದಲ್ಲಿ ವೈರಲ್ ಆಗಿದೆ.

ಈ ಬಾರಿ ತಮಿಳು ಬಿಗ್ ಬಾಸ್ ನಿರೂಪಕ ಸೇರಿದಂತೆ ಕೆಲ ಬದಲಾವಣೆಯೊಂದಿಗೆ ಆರಂಭಗೊಂಡಿದೆ. ಆದರೆ ಆರಂಭಗೊಂಡ ಕೆಲವೇ ದಿನಗಳಲ್ಲಿ ತಮಿಳು ಬಿಗ್ ಬಾಸ್ ಸ್ಪರ್ಧಿಯ ಖಾಸಗಿ ವಿಡಿಯೋಗಳು ಲೀಕ್ ಆಗಿದೆ. ಈ ವಿಡಿಯೋಗಳು ಡೀಪ್ ಫೇಕ್ ವಿಡಿಯೋಗಳೇ ಅಥವಾ ಶೂಟ್ ಮಾಡಿರುವ ನಿಜ ವಿಡಿಯೋಗಳೇ ಅನ್ನೋದು ಸ್ಪಷ್ಟವಾಗಿಲ್ಲ. ಆದರೆ ಪುರುಷನ ಜೊತೆ ಅಶ್ಲೀಲವಾಗಿ ಕಾಣಿಸಿಕೊಂಡಿರುವ ವಿಡಿಯೋಗಳು ಬಹುತೇಕ ಎಲ್ಲಾ ಸಾಮಾಜಿಕ ಮಾಧ್ಯಮಗಳಲ್ಲಿ ಹರಿದಾಡುತ್ತಿದೆ.



## ಎಂಎಂಎಸ್ ಕೋಲಾಹಲಕ್ಕೆ ನಟಿ ಒವಿಯಾ ಬೋಲ್ಡ್ ಉತ್ತರ!

ಈ ವಿಡಿಯೋ ಇದೀಗ ತಮಿಳು ಬಿಗ್ ಬಾಸ್ ಮಾತ್ರವಲ್ಲ, ತಮಿಳು, ಮಲೆಯಾಳಂ ಸೇರಿದಂತೆ ಇತರ ಸಿನಿಮಾ ಇಂಡಸ್ಟ್ರಿಯಲ್ಲಿ ಕೋಲಾಹಲ ಸೃಷ್ಟಿಸಿದೆ. ಒವಿಯಾ ವಿಡಿಯೋಗಳನ್ನು ನಕಲಿ ಮಾಡಿ ಈ ರೀತಿ ಹರಿಬಿಡಲಾಗಿದೆಯಾ ಅನ್ನೋ ಪ್ರಶ್ನೆ ಕೂಡ ಕಾಡುತ್ತಿದೆ. ಮೇಲ್ನೋಟಕ್ಕೆ ನಟಿ ಒವಿಯಾ ವಿಡಿಯೋ ಎಂದೇ ಹೇಳಲಾಗುತ್ತಿದೆ.

ಬಿಗ್ ಬಾಸ್ ಸ್ಪರ್ಧಿ ಒವಿಯಾ ವಿಡಿಯೋ ಕೋಲಾಹಲದ ಬೆನ್ನಲ್ಲೇ ಸೋಶಿಯಲ್ ಮೀಡಿಯಾದಲ್ಲಿ ಪೋಸ್ಟ್ ಮಾಡಿದ್ದಾರೆ. ಕೈ ಸನ್ನೆ ಜೊತೆಗೆ ನೀವು ಬಾಯಿ ಮುಚ್ಚಿಕೊಂಡು ಇರಿ ಎಂದು ಬರೆದುಕೊಂಡಿದ್ದಾರೆ. ಇದು ಎಂಎಂಸ್ ಲೀಕ್ ವಿಡಿಯೋಗೆ ನಟಿ ನೀಡಿದ ಬೋಲ್ಡ್ ಉತ್ತರ ಅನ್ನೋ ಮಾತುಗಳು ಕೇಳಿಬರುತ್ತಿದೆ.

ಮೂಲತಃ ಕೇರಳದ ತ್ರಿಶೂರ್ ಜಿಲ್ಲೆಯವರಾಗಿರುವ ಒವಿಯಾ, ಮಲೆಯಾಳಂ ಸಿನಿಮಾ ಮೂಲಕ ಸಿನಿ ಇಂಡಸ್ಟ್ರಿಗೆ ಕಾಲಿಟ್ಟಿದ್ದಾರೆ. ಮಲೆಯಾಳಂ ಸೂಪರ್ ಸ್ಟಾರ್ ನಟ ಪೃಥ್ವಿರಾಜ್ ಸುಕುಮಾರನ್‌ಗೆ ನಾಯಕಿಯಾಗಿ ಕಾಂಗರೋ ಸಿನಿಮಾ ಮೂಲಕ ಬಣ್ಣದ ಜಗತ್ತಿಗೆ ಕಾಲಿಟ್ಟಿದ್ದರು. ಕನ್ನಡ, ತಮಿಳು, ತೆಲುಗು ಸೇರಿ ವಿವಿಧ ಭಾಷೆಗಳಲ್ಲಿ ಒವಿಯಾ ನಾಯಕಿಯಾಗಿ ನಟಿಸಿದ್ದಾರೆ. ಹಲವು ಬಾಕ್ಸ್ ಆಫೀಸ್ ಹಿಟ್ ಚಿತ್ರಗಳನ್ನು ನೀಡಿದ ಹೆಗ್ಗಳಿಕೆಗೆ ಒವಿಯಾ ಪಾತ್ರರಾಗಿದ್ದಾರೆ.

ಒವಿಯಾದ್ದು ಎನ್ನಲಾದ ವಿಡಿಯೋಗಳು ಕುರಿತು ಯಾವುದೇ ಸ್ಪಷ್ಟನೆ ಲಭ್ಯವಾಗಿಲ್ಲ.ಆದರೆ ಘಟನೆ ಮಾತ್ರ ಬಿಗ್ ಬಾಸ್ ಸೇರಿದಂತೆ ಸಿನಿಮಾ ಇಂಡಸ್ಟ್ರಿಯಲ್ಲಿ ಕೆಲ ಗಾಸಿಪ್‌ಗಳಿಗೆ ಕಾರಣವಾಗಿದೆ.

# ನನಗೆ ಐಪಿಎಲ್‌ಗಿಂತಲೂ ಟೆಸ್ಟ್ ಕ್ರಿಕೆಟ್ ಮುಖ್ಯ

## ಬಿಸಿಸಿಐ ಹೊಸ ನಿಯಮದ ಕುರಿತು ಕಮ್ಮಿನ್ಸ್ ರಿಯಾಕ್ಷನ್

2025ರಿಂದ 2027 ಆವೃತ್ತಿಗಳಿಗೆ ಬಿಸಿಸಿಐ ವಿಧಿಸಿರುವ ಹೊಸ ನಿಯಮಗಳ ಕುರಿತು ಆಸೀಸ್ ತಂಡದ ನಾಯಕ ಪ್ಯಾಟ್ ಕಮ್ಮಿನ್ಸ್ ಪ್ರತಿಕ್ರಿಯೆ ನೀಡಿದ್ದು, ನನಗೆ ಐಪಿಎಲ್‌ಗಿಂತಲೂ ಟೆಸ್ಟ್ ಕ್ರಿಕೆಟ್ ಮುಖ್ಯ ಎಂದು ಹೇಳಿದ್ದಾರೆ.

ಹೌದು. ಬಿಸಿಸಿಐ ಹೊಸ ನಿಯಮದ ಫ್ರಾಂಚೈಸಿಗಳು ಖರೀದಿ ಮಾಡಿದ ನಂತರ ವಿದೇಶಿ ಆಟಗಾರರು ಲೀಗ್‌ನಿಂದ ಹಿಂದೆ ಸರಿದರೆ 2 ವರ್ಷಗಳ ಕಾಲ ನಿಷೇಧ ಹೇರಲಾಗುತ್ತದೆ. ವೈದ್ಯಕೀಯ ಮತ್ತು ಫಿಟ್‌ನೆಸ್ ಸಮಸ್ಯೆ ಇರುವ ಆಟಗಾರರಿಗೆ ಮಾತ್ರ ಟೂರ್ನಿಯಿಂದ ಹೊರಗುಳಿಯಲು ಅವಕಾಶವಿರುತ್ತದೆ ಎಂದು ಹೇಳಿದೆ. ಈ ನಿಮಯದ ಬಗ್ಗೆ ಕಮ್ಮಿನ್ಸ್ ಪ್ರತಿಕ್ರಿಯೆ ನೀಡಿದ್ದು, ಇದು ತನ್ನ ಮೇಲೆ ಪರಿಣಾಮ ಬೀರುವುದಿಲ್ಲ ಎಂದು ಕಮ್ಮಿನ್ಸ್ ಹೇಳಿದ್ದಾರೆ.

ಖಾಸಗಿ ವಾಹಿನಿಯೊಂದಕ್ಕೆ ನೀಡಿದ ಸಂದರ್ಶನದಲ್ಲಿ ಮಾತನಾಡಿದ ಅವರು, ಈಗಿನ ಐಪಿಎಲ್ ನಿಯಮಗಳು ಬದಲಾಗಿವೆ. ಈ ಹಿಂದೆಯೂ ನಾನು ಹರಾಜಿನ ನಂತರ ಐಪಿಎಲ್ ನಿಂದ ಹಿಂದೆ ಸರಿದಿಲ್ಲ. ಹಾಗಾಗಿ ಈ ನಿಯಮ ನನ್ನ ಮೇಲೆ ಪರಿಣಾಮ ಬೀರುವುದಿಲ್ಲ. ಆದರೂ ಐಪಿಎಲ್‌ಗೆ ಸಂಬಂಧಿಸಿದ ಒಂದು ಅಂಶವನ್ನು ಪರಿಗಣಿಸುವುದಾದ್ರೆ, ನನಗೆ ಐಪಿಎಲ್‌ಗಿಂತ ಟೆಸ್ಟ್ ಕ್ರಿಕೆಟ್ ತುಂಬಾ ಮುಖ್ಯ ಎಂದು ಹೇಳಿಕೊಂಡಿದ್ದಾರೆ.

2024ರ ಐಪಿಎಲ್‌ನಲ್ಲಿ ಸನ್‌ರೈಸರ್ಸ್ ಹೈದರಾಬಾದ್ ತಂಡವು ಪ್ಯಾಟ್ ಕಮ್ಮಿನ್ಸ್ ಅವರನ್ನು 20.50 ಕೋಟಿ ರೂ.ಗೆ ಖರೀದಿ ಮಾಡಿತು. ಬಳಿಕ ಹೈದರಾಬಾದ್ ತಂಡದ ನಾಯಕನಾಗಿ ಮುನ್ನಡೆಸಿದ ಪ್ಯಾಟ್ ಕಮ್ಮಿನ್ಸ್ ತಂಡವನ್ನು ಫೈನಲ್‌ವರೆಗೆ ಕೊಂಡೊಯ್ದಿದ್ದರು. 31 ವರ್ಷ ವಯಸ್ಸಿನ ಕಮ್ಮಿನ್ಸ್ 2027ರ ವರೆಗೆ ಟೆಸ್ಟ್ ಮತ್ತು ಏಕದಿನ ಪಂದ್ಯಗಳಲ್ಲಿ ಆಸೀಸ್ ತಂಡವನ್ನು ಮುನ್ನಡೆಸಲಿದ್ದಾರೆ.



**ನ.22ರಿಂದ ಬಾರ್ಡರ್ ಗವಾಸ್ಕರ್ ಟ್ರೋಫಿ:** ಮುಂದಿನ ನವೆಂಬರ್‌ನಲ್ಲಿ ಭಾರತ ಆಸ್ಟ್ರೇಲಿಯಾ ಪ್ರವಾಸ ಕೈಗೊಳ್ಳಲಿದೆ. ನ.22 ರಿಂದ 2025ರ ಜನವರಿ 7ರ ವರೆಗೆ ಭಾರತ ಮತ್ತು ಆಸೀಸ್ ನಡುವೆ ಬಾರ್ಡರ್ ಗವಾಸ್ಕರ್ ಟ್ರೋಫಿ ಟೆಸ್ಟ್ ಸರಣಿ ನಡೆಯಲಿದೆ. ಕಳೆದ ವರ್ಷ ಮಾರ್ಚ್‌ನಲ್ಲಿ ನಡೆದ 4 ಪಂದ್ಯಗಳ ಬಾರ್ಡರ್-ಗವಾಸ್ಕರ್ ಟ್ರೋಫಿಯಲ್ಲಿ ಭಾರತ ಸರಣಿ ಗೆದ್ದುಕೊಂಡಿತ್ತು. ಆ ಬಳಿಕ ನಡೆದ ವಿಶ್ವಟೆಸ್ಟ್ ಚಾಂಪಿಯನ್‌ಶಿಪ್ ಫೈನಲ್‌ನಲ್ಲಿ ಪ್ಯಾಟ್ ಕಮ್ಮಿನ್ಸ್ ನಾಯಕತ್ವದ ಆಸೀಸ್ ತಂಡ ಭಾರತ ತಂಡವನ್ನು ಸೋಲಿಸಿ WTC ಟ್ರೋಫಿ ಎತ್ತಿ ಹಿಡಿದಿತ್ತು.

### ಐಪಿಎಲ್‌ನ ಹೊಸ ನಿಯಮಗಳೇನು?

- ಫ್ರಾಂಚೈಸಿಯೊಂದು ಆರ್‌ಟಿಎಂ ಕಾರ್ಡ್‌ನೊಂದಿಗೆ ಒಟ್ಟು 6 ಆಟಗಾರರನ್ನು ಉಳಿಸಿಕೊಳ್ಳಬಹುದು.
- ಅಲ್ಲದೇ ಪ್ರತಿ ಫ್ರಾಂಚೈಸಿ 5 ಕ್ಯಾಪ್ಡ್ (ಭಾರತೀಯ ಮತ್ತು ಸಾಗರೋತ್ತರ) ಮತ್ತು 2 ಅನ್‌ಕ್ಯಾಪ್ಡ್ ಪ್ಲೇಯರ್‌ಗಳನ್ನು ಹೊಂದಬಹುದು.
- ಫ್ರಾಂಚೈಸಿಗಳ ಪರ್ಸ್ ಮೊತ್ತವನ್ನು 100 ಕೋಟಿ ರೂ. ನಿಂದ 120 ಕೋಟಿ ರೂ. ಹೆಚ್ಚಿಸಲಾಗಿದೆ. ಹಾಗಾಗಿ 2025ರ ಐಪಿಎಲ್ ಋತುವಿನಲ್ಲಿ ಸಂಬಳ ಮಿತಿ ಸೇರಿ ಒಟ್ಟು ಪರ್ಸ್ ಮೊತ್ತ 146 ಕೋಟಿ ರೂ., 2026ಕ್ಕೆ 151 ಕೋಟಿ ರೂ., 2027ಕ್ಕೆ 157 ಕೋಟಿ ರೂ.ಗಳಿಗೆ ಹೆಚ್ಚಿಸಲಾಗಿದೆ.
- ಐಪಿಎಲ್ ಇತಿಹಾಸದಲ್ಲಿ ಮೊದಲ ಬಾರಿಗೆ ಪಂದ್ಯ ಶುಲ್ಕವನ್ನು ಪರಿಚಯಿಸಲಾಗಿದೆ. ಈ ಮೂಲಕ ಪ್ರತಿ ಆಟಗಾರನು ಲೀಗ್ ಪಂದ್ಯವೊಂದಕ್ಕೆ 7.5 ಲಕ್ಷ ರೂ. ಹೆಚ್ಚುವರಿ ಪಡೆದುಕೊಳ್ಳಲಿದ್ದಾರೆ.
- ಐಪಿಎಲ್‌ನಲ್ಲಿ ಪಾಲ್ಗೊಳ್ಳಲು ಇಚ್ಚಿಸುವ ವಿದೇಶಿ ಆಟಗಾರರು ಮೆಗಾ ಹರಾಜಿಗೆ ನೋಂದಣಿ ಮಾಡಿಕೊಳ್ಳಬೇಕು. ಇಲ್ಲದಿದ್ದರೆ, ಮುಂದಿನ ವರ್ಷ ಅವರು ಹರಾಜಿನಲ್ಲಿ ನೋಂದಾಯಿಸಲು ಅನರ್ಹರಾಗುತ್ತಾರೆ.
- ಹರಾಜಿನಲ್ಲಿ ಆಯ್ಕೆಯಾದ ಯಾವುದೇ ವಿದೇಶಿ ಆಟಗಾರ, ಬಳಿಕ ಐಪಿಎಲ್ ಆರಂಭಕ್ಕೂ ಮುನ್ನ ತನ್ನನ್ನು ಅಲಭ್ಯಗೊಳಿಸಿದ್ರೆ, ಮುಂದಿನ 2 ಸೀಸನ್ ಗಳಿಗೆ ನಿಷೇಧಿಸಲಾಗುತ್ತದೆ.
- ಅಲ್ಲದೇ ಅಂತಾರಾಷ್ಟ್ರೀಯ ಕ್ರಿಕೆಟ್‌ಗೆ ಗುಡ್‌ಬೈ ಹೇಳಿ 5 ವರ್ಷ ಪೂರೈಸಿದ ಭಾರತೀಯ ಕ್ರಿಕೆಟ್ ಆಟಗಾರರನ್ನ ಅನ್‌ಕ್ಯಾಪ್ಡ್ ಪ್ಲೇಯರ್ ಎಂದು ಪರಿಗಣಿಸಲಾಗುತ್ತದೆ. ಇದು ಭಾರತೀಯ ಆಟಗಾರರಿಗೆ ಮಾತ್ರ ಅನ್ವಯಿಸುತ್ತದೆ.
- 2025 ರಿಂದ 2027ರ ಆವೃತ್ತಿಗಳಲ್ಲಿಯೂ ಇಂಪ್ಯಾಕ್ಟ್ ಪ್ಲೇಯರ್ ರೂಲ್ಸ್ ಮುಂದುವರಿಯುತ್ತದೆ.

## ಸಿಎಂ ಸಿದ್ದು ಬೆನ್ನಲ್ಲೇ ಬೆಂಡಾದ ಖರ್ಗೆ ಕುಟುಂಬ

# ಸಿದ್ಧಾರ್ಥ ಸಂಸ್ಥೆಗೆ ನೀಡಿದ್ದ 5 ಎಕರೆ ಭೂಮಿ ವಾಪಸ್!

**ಕಲಬುರಗಿ:** ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಕುಟುಂಬದ ಸಿದ್ದಾರ್ಥ ಟ್ರಸ್ಟ್‌ಗೆ ನೀಡಿದ್ದ 5 ಎಕರೆ ಜಮೀನನ್ನು ಕೆಐಎಡಿಬಿಗೆ ವಾಪಸ್ ನೀಡುವ ವಿಚಾರವಾಗಿ ಪ್ರತಿಕ್ರಿಯೆ ನೀಡಿರುವ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಸಿದ್ದಾರ್ಥ್ ಟ್ರಸ್ಟ್‌ಗೆ ನೀಡಿದ್ದ 5 ಎಕರೆ ಭೂಮಿ ವಾಪಾಸು ಬಗ್ಗೆ ಅದರ ಅಧ್ಯಕ್ಷರನ್ನೇ ಕೇಳಿ ಎಂದು ಟ್ರಸ್ಟ್‌ಗೆ ಭೂಮಿ ಮಂಜೂರು ಬಗ್ಗೆ ಮಾತನಾಡಲು ನಿರಾಕರಿಸಿದ್ದಾರೆ. ಇದರೊಂದಿಗೆ ವಿವಾದ ಆಗ್ತಿದ್ದಂತೆ ಸಿಎ ಸೈಟ್‌ನನ್ನ ಖರ್ಗೆ ಕುಟುಂಬ ವಾಪಸ್ ನೀಡಿದೆ. ಈ ಬಗ್ಗೆ ಸಚಿವ ಪ್ರಿಯಾಂಕ್ ಖರ್ಗೆ ಮಾಹಿತಿ ನೀಡಿದ್ದು, ಸಿಎ ಸೈಟ್ ಪಡೆಯೋದಕ್ಕೆ ಅರ್ಹ ಇದ್ದೇವೆ. ಆದರೆ ಆರೋಪ ಬಂದಿರುವ ಹಿನ್ನೆಲೆ ಸಿಎ ಸೈಟ್ ವಾಪಸ್ ನೀಡಿದ್ದೇವೆ. ವೈಯಕ್ತಿಕವಾಗಿ ರಾಜಕೀಯ ಆರೋಪದಿಂದ ಬೇಸರವಾಗಿದೆ. ಸಿಎ ಸೈಟ್ ಬೇಡ ಎಂದು ರಾಹುಲ್ ಖರ್ಗೆ ಪತ್ರ ಬರೆದಿದ್ದಾರೆ. ಹೀಗಾಗಿ ಕೆಐಎಡಿಬಿಗೆ ಸೈಟ್ ವಾಪಸ್ ನೀಡಿದ್ದೇವೆ ಎಂದಿದ್ದಾರೆ.

**ಪ್ರಿಯಾಂಕ್ ಖರ್ಗೆ ಸುದ್ದಿಗೋಷ್ಠಿ:** ಬೆಂಗಳೂರಿನಲ್ಲಿ ಸುದ್ದಿಗೋಷ್ಠಿ ನಡೆಸಿ ಮಾಹಿತಿ ನೀಡಿದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಪ್ರಿಯಾಂಕ್ ಖರ್ಗೆ, ಇಲ್ಲಿ ತರಾತುರಿಯಲ್ಲಿ ಹಾಗೂ ಕಾನೂನು ಬಾಹಿರವಾಗಿ ಸೈಟ್ ಹಂಚಿಕೆಯಾಗಿದೆ ಎಂಬ ಆರೋಪ ಇತ್ತು. ಆದರೆ ಆ ರೀತಿ ಆಗಿಲ್ಲ. ಟ್ರಸ್ಟ್ ಅಧ್ಯಕ್ಷ, ರಾಹುಲ್, ಖರ್ಗೆ ಅವರಿಗೆ ಹೆಚ್ಚು ಅರಿವು ಇರಲಿಲ್ಲ ಅನ್ಸುತ್ತೆ. ಅವರಿಗೆ ಕೇಂದ್ರದಿಂದ ಸಾಕಷ್ಟು ಅವಾರ್ಡ್ ಸಿಕ್ಕಿದೆ. ಯುಪಿಎಸ್‌ಇ ನಲ್ಲೂ ರ‍್ಯಾಂಕ್ ಬಂದಿದ್ದರು. ಆದರೆ ಈ ವಿಚಾರದಲ್ಲಿ ಅವರಿಗೆ ಹೆಚ್ಚು ಮಾಹಿತಿ ಇರಲಿಲ್ಲ ಅನ್ಸುತ್ತೆ. ನಮ್ಮ ಕುಟುಂಬದಲ್ಲಿ ಮೂವರು ಅಷ್ಟೇ ರಾಜಕೀಯದಲ್ಲಿ ಇದ್ದೇವೆ. ಯುರೋಸ್ಪೇಸ್ ನಲ್ಲಿ ಜಾಗ ಬೇಕು ಅಂತ ಅರ್ಜಿ ಹಾಕ್ತಾರೆ, ಅದರ ಅನ್ವಯ ಅವರಿಗೆ ಸೈಟ್ ಅಲಾಟ್ ಆಗಿದೆ. ಸಂಪೂರ್ಣ ದಾಖಲೆ ಆಧಾರದ ಮೇಲೆ ಸೈಟ್ ಸಿಕ್ಕಿದೆ.



**ಯಾವುದೇ ಲಾಭದ ಉದ್ದೇಶ ಇರಲಿಲ್ಲ:** ನಮ್ಮ ಅಣ್ಣ ಅವರು ಮೃದು ಸ್ವಭಾವದವರು, ಅವರಿಂದ ಕುಟುಂಬದ ಸದಸ್ಯರರಿಗೆ ಹಿಂಸೆ ಆಗ್ತಿದೆ ಎಂದು ನೊಂದಿದ್ದಾರೆ. ಸೆಪ್ಟೆಂಬರ್ 20ನೇ ರಂದು ಅವರು ಕೆಐಎಡಿಬಿಗೆ ಪತ್ರ ಬರೆದಿದ್ದಾರೆ. ಸೈಟ್ ಕೊಟ್ಟಿರೋದನ್ನ ನಿವೇಶನ ಕಾನೂನಾತ್ಮಕ ವಾಗಿ ಮರಳಿ ನೀಡುತ್ತಿದ್ದೇವೆ ಎಂದು ಪತ್ರ ಬರೆದಿದ್ದಾರೆ. ಎರಡೂ ಮೂರು ಕಾರಣ ಕೊಟ್ಟು ಸೈಟ್ ಮರಳಿ ನೀಡಿದ್ದಾರೆ. ಖಾಸಗಿ ಟ್ರಸ್ಟ್ ಅಲ್ಲ ಪಬ್ಲಿಕ್ ಟ್ರಸ್ಟ್ ಎಂದು ನಮೂದಿಸಿದ್ದಾರೆ. ಟ್ರಸ್ಟ್ ಗೆ ಬಂದು ಹಣ ಯಾವುದೇ ಕಾರಣಕ್ಕೆ ದುರುಪಯೋಗ ಮಾಡಿಕೊಳ್ಳಲ್ಲ ಎಂದು ಸ್ಪಷ್ಟನೆ ನೀಡಿದ್ದಾರೆ. ಸಿಎ ಸೈಟ್ ನಲ್ಲಿ ಯಾವುದೇ ರೀತಿ ರಿಯಾಯಿತಿ ಕೋಡೋದಕ್ಕೆ ಬರೋದಿಲ್ಲ. ಇದು ತರಬೇತಿಗೆ ಅಂತ ಸಿಎ ಸೈಟ್ ಇತ್ತು, ಆದರೆ ಯಾವುದೇ ಲಾಭದ ಉದ್ದೇಶ ಇರಲಿಲ್ಲ. ಆದರೆ ಬಿಜೆಪಿಯವರು ಹಲವು ರೀತಿಯ ಆರೋಪ ಮಾಡಿದರು. ವೈಯಕ್ತಿಕ ವಾಗಿ ರಾಜಕೀಯ ಆರೋಪದಿಂದ ಬೇಸರವಾಗಿದೆ, ಹೀಗಾಗಿ ಸಿಎ ಸೈಟ್ ಬೇಡ ಎಂದು ರಾಹುಲ್ ಖರ್ಗೆ ಪತ್ರ ಬರೆದಿದ್ದಾರೆ. ಸಿಟಿಕೆಐಎಡಿಬಿಗೆ ಪತ್ರ ಬರೆದಿದ್ದಾರೆ, ಪತ್ರ ಸಿಎ ಸೈಟ್ ಪಡೆಯೋದಕ್ಕೆ ಅರ್ಹ ಇದ್ದೇವೆ, ಯಾವುದೇ ಅವ್ಯವಹಾರ ಅಥವಾ ಲಾಭದ ಉದ್ದೇಶದಿಂದ ನಾವು ಸಿಎ ಸೈಟ್ ಪಡೆದಿದ್ದೇವೆ ಎಂದು ಪತ್ರ ದಲ್ಲಿ ಉಲ್ಲೇಖಿಸಿದ್ದಾರೆ ಎಂದು ಪ್ರಿಯಾಂಕ್ ಖರ್ಗೆ ವಿವರಿಸಿದ್ದಾರೆ.

**ರಾಜ್ಯದ ಜನರ ಕ್ಷಮೆ ಕೇಳಲಿ:** ಇನ್ನು, ಖರ್ಗೆ ಕುಟುಂಬದಿಂದ ಸಿಎ ನಿವೇಶನ ವಾಪಾಸ್ ವಿಚಾರವಾಗಿ ಪ್ರತಿಕ್ರಿಯೆ ನೀಡಿದ ಪರಿಷತ್ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ, ಸಿದ್ದರಾಮಯ್ಯ ಅವರೂ ಮುಡಾ ಸೈಟು ಪಡೆದಿದ್ದು ಲೀಗಲ್ ಅಂತಿದ್ದರು. ಆದರೆ ಅದನ್ನು ನಂತರ ವಾಪಸ್ ಕೊಟ್ಟಿದ್ದೇಕೆ? ಇದರಲ್ಲೂ ಸೈಟು ವಾಪಸ್ ಆಗಿದೆ. ಈಗ ಮಲ್ಲಿಕಾರ್ಜುನ ಖರ್ಗೆಯವರು ಮೀಸೆ ಮಣ್ಣಾಗಿಲ್ಲ ಅನ್ನೋದು ಬೇಡ, ಎಂ.ಬಿ ಪಾಟೀಲ್ ಭಂಡತನ ಪ್ರದರ್ಶಿಸಿದರು. ಕೆಐಎಡಿಬಿಯಲ್ಲಿ ಅಕ್ರಮ ಆಗಿಲ್ಲ ಅಂದಿದ್ದರು. ಈಗ ಸೈಟು ವಾಪಸ್ ಮಾಡಲಾಗಿದೆ, ಈಗ ಎಂ ಬಿ ಪಾಟೀಲರು ರಾಜ್ಯದ ಜನರ ಕ್ಷಮೆ ಕೇಳಲಿ. ಇನ್ನು ಪ್ರಿಯಾಂಕ್ ಖರ್ಗೆಯವರು ಹಿರಿಯರು ಕಿರಿಯರು ಅಂತ ನೋಡಿ ಮಾತಾಡಲಿ. ಪ್ರಿಯಾಂಕ್ ಖರ್ಗೆಯವರು ಗೌರವದಿಂದ ನಡೆದು ಕೊಳ್ಳೋದನ್ನು ಕಲಿತುಕೊಳ್ಳಲಿ ಎಂದು ಸಲಹೆ ನೀಡಿದರು.

**ಈಗ ಎಂಬಿಪಾಟೀಲರು ಏನು ಹೇಳ್ತಾರೆ?:** ಬೆಂಗಳೂರಿನಲ್ಲಿ ಭೂಮಿ ದರ ಅತೀ ಹೆಚ್ಚಿದೆ, ಹೀಗಾಗಿ ಅವರು ಇಲ್ಲಿ ಖರೀದಿ ಮಾಡಿದ್ದರು. ತರಾತುರಿಯಲ್ಲಿ ಸಿದ್ದಾರ್ಥ ವಿಹಾರ ಟ್ರಸ್ಟ್‌ಗೆ 5 ಎಕರೆ ಭೂಮಿ ಮಾರಾಟ ಆಗಿತ್ತು, ಇದರಲ್ಲಿ ಸ್ವಜನ ಪಕ್ಷ ಪಾತ, ಪ್ರಭಾವಗಳು ಕೆಲಸ ಆಗಿದೆ. ರಾಹುಲ್ ಖರ್ಗೆಯವರು ಬಹಳ ಮೃದು ಸ್ವಭಾವದವರು, ಅವರು ಸಿಎ ನಿವೇಶನ ವಾಪಸ್ ಕೊಟ್ಟಿದ್ದು ಸ್ವಾಗತ. ಪ್ರಿಯಾಂಕ್ ಖರ್ಗೆಯವರು ಅದೇ ರೀತಿಯ ಮೃದು ಸ್ವಭಾವ ರೂಢಿಸಿಕೊಳ್ಳಲಿ, ಪ್ರಿಯಾಂಕ್ ಖರ್ಗೆಗೆ ಈಗ ಅರ್ಥ ಆಗಿದೆ. ಕಾನೂನು ಬಾಹಿರ ಆದ ಹಿನ್ನೆಲೆಯಲ್ಲಿಯೇ ನಿವೇಶನ ವಾಪಸ್ ಕೊಟ್ಟಿದ್ದಾರೆ.

# ಪಾಕ್ ತಂಡದಿಂದ ಬಾಬರ್ ಆಝುಂಗೆ ಗೇಟ್ ಪಾಸ್: ವರದಿ

ಪಾಕಿಸ್ತಾನ್ ತಂಡದ ಮಾಜಿ ನಾಯಕ ಬಾಬರ್ ಆಝುಂ ಅವರನ್ನು ಟೆಸ್ಟ್ ತಂಡದಿಂದ ಕೈ ಬಿಡಲು ಪಿಸಿಬಿ ಆಯ್ಕೆ ಸಮಿತಿ ನಿರ್ಧರಿಸಿದೆ. ಈ ನಿರ್ಧಾರದಂತೆ ಇಂಗ್ಲೆಂಡ್ ವಿರುದ್ಧದ 2ನೇ ಟೆಸ್ಟ್ ಪಂದ್ಯದಲ್ಲಿ ಬಾಬರ್ ಆಝುಂ ಕಾಣಿಸಿಕೊಳ್ಳುವುದಿಲ್ಲ. ಬದಲಾಗಿ 4ನೇ ಕ್ರಮಾಂಕದಲ್ಲಿ ಮತ್ತೋರ್ವ ಆಟಗಾರನಿಗೆ ಅವಕಾಶ ನೀಡಲು ನಿರ್ಧರಿಸಲಾಗಿದೆ ಎಂದು ವರದಿಯಾಗಿದೆ.

ಕ್ರಿಕ್‌ಇನ್‌ಫೋ ವರದಿ ಪ್ರಕಾರ, ಮುಲ್ತಾನ್‌ನಲ್ಲಿ ನಡೆಯಲಿರುವ ಇಂಗ್ಲೆಂಡ್ ವಿರುದ್ಧದ 2ನೇ ಟೆಸ್ಟ್ ಪಂದ್ಯಕ್ಕೂ ಮುನ್ನ ಬಾಬರ್ ಆಝುಂ ಅವರನ್ನು ಕೈ ಬಿಡಲಿದ್ದಾರೆ. ಅಲ್ಲದೆ ಅಕ್ಟೋಬರ್ 20 ರಿಂದ ಶುರುವಾಗಲಿರುವ ಪ್ರಥಮ ದರ್ಜೆ ಕ್ರಿಕೆಟ್ ಟೂರ್ನಿಯಲ್ಲಿ ಪಾಲ್ಗೊಳ್ಳುವಂತೆ ಬಾಬರ್‌ಗೆ ಸೂಚಿಸಲಾಗಿದೆ.



ಕಳಪೆ ಫಾರ್ಮ್‌ನಲ್ಲಿರುವ ಬಾಬರ್ ಆಝುಂ ಟೆಸ್ಟ್ ಕ್ರಿಕೆಟ್ ನಲ್ಲಿ ಅರ್ಧಶತಕ ಬಾರಿಸಿ 2 ವರ್ಷಗಳೇ ಕಳೆದಿವೆ. ಅದರಲ್ಲೂ ರನ್ ಮಳೆಯೇ ಹರಿದಿರುವ ಮುಲ್ತಾನ್ ಟೆಸ್ಟ್‌ನಲ್ಲಿ ಬಾಬರ್ ಕಲೆಹಾಕಿದ್ದು ಕೇವಲ 35 ರನ್ ಗಳು ಮಾತ್ರ. ಹೀಗಾಗಿಯೇ ಅವರನ್ನು ತಂಡದಿಂದ ಕೈ ಬಿಡಲು ಪಾಕಿಸ್ತಾನ್ ಕ್ರಿಕೆಟ್ ಬೋರ್ಡ್‌ನ ಹೊಸ ಆಯ್ಕೆ ಸಮಿತಿ ನಿರ್ಧರಿಸಿದೆ.

ಕಳೆದ 18 ಇನಿಂಗ್ಸ್‌ಗಳಿಂದ ಒಂದೇ ಒಂದು ಅರ್ಧಶತಕ ಬಾರಿಸಲು ಸಾಧ್ಯವಾಗದ ಬಾಬರ್ ಆಝುಂ ಅವರನ್ನು ತಂಡದಲ್ಲಿ ಮುಂದುವರೆಸುವುದು ಸೂಕ್ತವಲ್ಲ. ಹೀಗಾಗಿ ದ್ವಿತೀಯ ಟೆಸ್ಟ್ ಪಂದ್ಯದಿಂದ ಬಾಬರ್ ಆಝುಂ ಅವರನ್ನು ಕೈಬಿಡುವಂತೆ ಆಯ್ಕೆ ಸಮಿತಿ ಶಿಫಾರಸು ಮಾಡಿದೆ. ಅದರಂತೆ ಇಂಗ್ಲೆಂಡ್ ವಿರುದ್ಧದ 2ನೇ ಟೆಸ್ಟ್ ಪಂದ್ಯದಿಂದ ಬಾಬರ್ ಹೊರಬೀಳುವುದು ಬಹುತೇಕ ಖಚಿತವಾಗಿದೆ.

ಅಂದಹಾಗೆ ಬಾಬರ್ ಆಝುಂ ಟೆಸ್ಟ್ ಕ್ರಿಕೆಟ್‌ನಲ್ಲಿ ಅರ್ಧಶತಕ ಬಾರಿಸಿ ಬರೋಬ್ಬರಿ 650 ದಿನಗಳೇ ಕಳೆದಿವೆ. ಡಿಸೆಂಬರ್ 26, 2022 ರಲ್ಲಿ ನ್ಯೂಝಿಲೆಂಡ್ ವಿರುದ್ಧ ಅವರು ಕೊನೆಯ ಅರ್ಧಶತಕ ಬಾರಿಸಿದ್ದರು. ಇದಾದ ಬಳಿಕ ಟೆಸ್ಟ್‌ನಲ್ಲಿ ಒಂದೇ ಒಂದು ಹಾಫ್ ಸೆಂಚುರಿ ಸಿಡಿಸಿಲ್ಲ. ಹೀಗಾಗಿಯೇ ಇದೀಗ ಟೆಸ್ಟ್ ತಂಡದಿಂದ ಬಾಬರ್ ಆಝುಂಗೆ ಗೇಟ್ ಪಾಸ್ ನೀಡಲು ನಿರ್ಧರಿಸಲಾಗಿದೆ.

# ಚನ್ನಪಟ್ಟಣ ಚುನಾವಣೆಗೆ ನನ್ನ ಕುಟುಂಬದವರಲ್ಲ, ನಾನೇ ಅಭ್ಯರ್ಥಿ

**ಮೈಸೂರು:** ಚನ್ನಪಟ್ಟಣ ಚುನಾವಣೆಗೆ ನನ್ನ ಕುಟುಂಬದವರಲ್ಲ, ನಾನೇ ಅಭ್ಯರ್ಥಿ ಎಂದು ಡಿಸಿಎಂ ಡಿಕೆ ಶಿವಕುಮಾರ್ ಖಡಕ್ಕಾಗಿ ಪ್ರತಿಕ್ರಿಯಿಸಿದ್ದಾರೆ.

ಮೈಸೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಚನ್ನಪಟ್ಟಣದಲ್ಲಿ ನಾವು ವೇದಿಕೆಯನ್ನು ಸೆಟ್ ಮಾಡಿಕೊಳ್ಳುತ್ತಿದ್ದೇವೆ. ಎಂಪಿ ಚುನಾವಣೆಯಲ್ಲಿ ಕಡಿಮೆ ಅಂತರದಲ್ಲಿ ಹಿನ್ನಡೆ ಆಗಿತ್ತು. ಎಂಎಲ್ಎ ಚುನಾವಣೆಯಲ್ಲಿಯೂ ಹೆಚ್ಚು ಹಿನ್ನಡೆಯಾಗಿತ್ತು. ಈಗ ನಮ್ಮ ಬೇಸ್ ಸ್ಟ್ರಾಂಗ್ ಮಾಡ್ತಾ ಇದ್ದೀವಿ. ನಮ್ಮ ಕೆಲಸಕ್ಕೆ ಜನರು ಕೈ ಹಿಡಿಯುತ್ತಾರೆ ಎಂಬ ವಿಶ್ವಾಸ ಇದೆ ಎಂದರು.



ನಿಖಿಲ್ ಚುನಾವಣೆ ಸ್ಪರ್ಧೆಗೆ ಒತ್ತಾಯದ ವಿಚಾರವಾಗಿ ಮಾತನಾಡಿ, ಅವರ ಪಕ್ಷದಲ್ಲಿ ಯಾರೂ ಬೇಕಾದರೂ ನಿಲ್ಲಲಿ. ಅದು ಅವರ ಪಕ್ಷಕ್ಕೆ ಬಿಟ್ಟಿದ್ದು, ಅದರ ಬಗ್ಗೆ ನಾನು ಮಾತಾಡಲ್ಲ. ಚನ್ನಪಟ್ಟಣದಲ್ಲಿ ವ್ಯಕ್ತಿ ಮೇಲೆ ಚುನಾವಣೆ ನಡೆಯಲ್ಲ. ಪಕ್ಷದ ಸಿದ್ಧಾಂತದ ಮೇಲೆ ಚುನಾವಣೆ ಮಾಡಲು ಹೊರಟಿದ್ದೇನೆ. ಅವರು ಅಭ್ಯರ್ಥಿಯನ್ನು ಜೆಡಿಎಸ್ ಆದರೂ ಮಾಡಿಕೊಳ್ಳಲಿ, ಬಿಜೆಪಿ ಆದರೂ ಮಾಡಿಕೊಳ್ಳಲಿ. ನಮ್ಮ ಮನೆಯನ್ನು ನಾವು ರಿಪೇರಿ ಮಾಡಿಕೊಂಡರೆ ಸಾಕು ಎಂದು ಹೇಳಿದರು.

ಸಿಎಂ ಸಿದ್ದರಾಮಯ್ಯ ರಾಜೀನಾಮೆಗೆ ಬಿಜೆಪಿ ಹೇಳಿಕೆ ವಿಚಾರವಾಗಿ ಮಾತನಾಡಿ, ಬಿಜೆಪಿಯವರು ಅದಕ್ಕೆ ಕಾಯುತ್ತಾರೆ. ಇನ್ನು 10 ವರ್ಷ ಅವರೇ ಇರುತ್ತಾರೆ. ಬಿಜೆಪಿಯವರು 10 ವರ್ಷ ಅದೇ ಕೂಗು ಕೂಗುತ್ತಾರೆ. ಅದೇ ಮಾತನಾಡುತ್ತಾರೆ. 10 ವರ್ಷ ಯಾರೂ ಸಿಎಂ ಆಗಿರುತ್ತಾರೆ ಎಂಬ ಬಿಜೆಪಿಯವರ ಪ್ರಶ್ನೆಗೆ ಖಡಕ್ಕಾಗಿ ಉತ್ತರಿಸಿದ್ದಾರೆ.

ಬಾಬಾ ಸಿದ್ದಿಕಿ ಗುಂಡೇಟು ವಿಚಾರವಾಗಿ ಮಾತನಾಡಿ, ಸಿದ್ದಿಕಿ ಬಾಬಾ ನನಗೂ ಆತ್ಮೀಯರು. ನಮ್ಮ ಪಕ್ಷದಲ್ಲಿ ಇದ್ದವರು, ಮಂತ್ರಿ ಸಹ ಆಗಿದ್ದರು. ಈ ಘಟನೆಯಿಂದ ಮುಂಬೈನಲ್ಲಿ ಕಾನೂನು ಸುವ್ಯವಸ್ಥೆ ಹಾಳಾಗಿದೆ ಎಂದು ಗೊತ್ತಾಗುತ್ತದೆ. ಮುಂದೆ ಚುನಾವಣೆ ಟೈಂ ಸಹ ಇದೆ ಆದ್ದರಿಂದ ಶಾಂತಿ ಕಾಪಾಡಬೇಕಾಗಿದೆ. ಈ ಘಟನೆ ಖಂಡನೀಯ ಕೃತ್ಯ ಎಸಗಿದವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ತಿಳಿಸಿದರು.

Printed, Published & Owned by N.Venugopal Krishna, Printed at DASHAPRAMATHI MUDRANALAYA, No.433/1, Chikkavitalenahalli Village, Thagachagere Post, Kasaba Hobli, Channapatna Taluk, Ramanagar District, Pin-562160. Published at No.15, Ground Floor, 12th Block, 5th Main, Kumara Park (West), Behind BDA Head Office, Bengaluru-560020. Editor: N.Venugopal Krishna, Mobile No.+91 94835 89085, email: sanjemugilu@gmail.com